ಸಂಪುಟ: 06 ಸಂಚಿಕೆ: 82 ಪುಟಗಳು: 08 ಶುಕ್ರವಾರ 05 ಜೂನ್ 2026 www.udayavahini.in epaper.udayavahini.in Udaya vahini news Udaya vahini news Udayavahini news you tube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಯಾರು ಏನೇನು ಮಾಡ್ತಾ ಇದ್ದಾರೆ, ಹೇಗೆ, ಯಾಕೆ ಇತ್ಯಾದಿ ಅನವಶ್ಯಕ ವಿವರಗಳಿಂದ ದೂರ ಇದ್ದಷ್ಟೂ ಒತ್ತಡ ಕಮ್ಮಿಯಾಗಿ ಸುಖ ಹೆಚ್ಚುತ್ತದೆ !

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮುಂಗಾರು ಪ್ರವೇಶ: ಕರ್ನಾಟದಲ್ಲಿ 6 ದಿನ ಭಾರೀ ಮಳೆ, ಯೆಲ್ಲೋ- ಆರೇಂಜ್ ಅಲರ್ಟ್

• ಉದಯವಾಹಿನಿ, ಬೆಂಗಳೂರು

ಕೊನೆಗೂ ಕೇರಳಕ್ಕೆ ಮುಂಗಾರು ಪ್ರವೇಶಿಸಿದೆ. ಅಧಿಕೃತವಾಗಿ ನೈಋತ್ಯ ಮುಂಗಾರು ಕೇರಳ ಎಂಟ್ರಿಕೊಟ್ಟಿದ್ದು, ಕರ್ನಾಟಕದ ಮಲೆನಾಡು ಹಾಗೂ ಕರಾವಳಿ ಭಾಗಗಳಲ್ಲಿ ಈಗಾಗಲೇ ಮಳೆಯ ಅಬ್ಬರ ಶುರುವಾಗಿದೆ.

ಇನ್ನುಳಿಂದತೆ ಇಂದಿನಿಂದ ಮುಂದಿನ 6 ದಿನಗಳ ಕಾಲ ರಾಜ್ಯದ ಹಲವೆಡೆ ಮುಂಗಾರು ಮಳೆ ವ್ಯಾಪಿಸಲಿದೆ. ಉತ್ತರ ಒಳನಾಡು, ದಕ್ಷಿಣ ಒಳನಾಡು ಮತ್ತು ಕರಾವಳಿ ಕರ್ನಾಟಕ ಭಾಗದಲ್ಲಿ ಇಂದಿನಿಂದ ಜೂನ್ 9 ರವರೆಗೂ ಮಳೆಯಾಗಲಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿ ನೀಡಿದೆ. ಕೇರಳಕ್ಕೆ ಮುಂಗಾರು ಪ್ರವೇಶ ಮಾಡಿದ್ದರಿಂದ ಕರ್ನಾಟಕದಲ್ಲೂ ಮಳೆಗಾಲ ಆರಂಭವಾಗಲಿದ್ದು, ಮುಂದಿನ 6 ದಿನಗಳ ಕಾಲ ರಾಜ್ಯದ ಹಲವೆಡೆ ಮಳೆಯಾಗಲಿದೆ.

## ವಕೀಲ ಜೆ.ದೇವರಾಜೇಗೌಡ ವಿರುದ್ಧದ ಅತ್ಯಾಚಾರ ಪ್ರಕರಣದ ಆರೋಪಪಟ್ಟಿ ಸಲ್ಲಿಕೆಗೆ ಅವಕಾಶ ನೀಡಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಹಾಸನದ ವಕೀಲ ಜಿ. ದೇವರಾಜೇಗೌಡ ವಿರುದ್ಧದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ದೋಷಾರೋಪ ಪಟ್ಟಿಯನ್ನು ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಲು ಹೈಕೋರ್ಟ್ ಅನುಮತಿ ನೀಡಿದೆ. ಪ್ರಕರಣ ಸಂಬಂಧ ತಮ್ಮ ವಿರುದ್ಧದ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಜೆ. ದೇವರಾಜೇಗೌಡ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠ, ಈ ಸೂಚನೆ ನೀಡಿದೆ. ವಿಚಾರಣೆ ವೇಳೆ ಸರ್ಕಾರದ ಪರ ವಕೀಲರು, ಪ್ರಕರಣಕ್ಕೆ ಸಂಬಂಧಿಸಿದ ನ್ಯಾಯಾಲಯದ ಅನುಮತಿ ಪಡೆಯದೇ ತನಿಖೆಯ ಅಂತಿಮ ವರದಿ ಸಲ್ಲಿಸುವಂತಿಲ್ಲ ಎಂದು ಮಧ್ಯಂತರ ಆದೇಶ ಮಾಡಿದೆ.

ಆ ಆದೇಶ ತೆರವಿಗೆ ಕೋರಿ ಸರ್ಕಾರ ಮಧ್ಯಂತರ ಅರ್ಜಿ ಸಲ್ಲಿಸಿದೆ. ಪ್ರಕರಣದ ತನಿಖೆ ನಡೆಸಲಾಗಿದ್ದು, ಸದ್ಯ ಆರೋಪ ಪಟ್ಟಿ ಸಿದ್ಧವಾಗಿದೆ. ಅದನ್ನು ವಿಚಾರಣಾ ನ್ಯಾಯಾಲಯಕ್ಕೆ ದೋಷಾರೋಪಪಟ್ಟಿ ಸಲ್ಲಿಸಲಾಗುವುದು. ಅದಕ್ಕಾಗಿ ಅನುಮತಿ ನೀಡಬೇಕು ಎಂದು ಕೋರಿದರು. ದೇವರಾಜೇಗೌಡ ಪರ ವಕೀಲರು, ಈ ಪ್ರಕರಣವು ಕಾನೂನಿನ ದುರ್ಬಳಕೆಗೆ ಸ್ಪಷ್ಟ ಉದಾಹರಣೆಯಾಗಿದೆ. ಮೊದಲಿಗೆ ಅತ್ಯಾಚಾರ ಪ್ರಕರಣ ದಾಖಲಿಸಿರಲಿಲ್ಲ. ದೂರುದಾರೆಯ ಪತಿ ಎನ್ನಲಾದ ವ್ಯಕ್ತಿ ಅಟ್ರಾಸಿಟಿ ಪ್ರಕರಣ ದಾಖಲಿಸಿದ್ದರು.

## ರೈತರ ವಿಧಾನಸೌಧ ಚಲೋ ಹಿನ್ನೆಲೆ ಬೆಂಗಳೂರಿನಲ್ಲಿ ವಿಮಾನ ನಿಲ್ದಾಣ ರಸ್ತೆ ಬಂದ್ ಭೀತಿ

• ಉದಯವಾಹಿನಿ,ಬೆಂಗಳೂರು

ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರು ಹಾಗೂ ವಿಮಾನ ಪ್ರಯಾಣಿಕರು ಇಂದು (ಶುಕ್ರವಾರ) ತೀವ್ರ ಜಾಗ್ರತೆ ವಹಿಸಬೇಕಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆ ಖಂಡಿಸಿ ರೈತರು ಹಮ್ಮಿಕೊಂಡಿರುವ ಬೃಹತ್ 'ವಿಧಾನಸೌಧ ಚಲೋ' ಪ್ರತಿಭಟನೆಯಿಂದಾಗಿ ಇಂದು ಇಡೀ ಏರ್‌ಪೋರ್ಟ್ ರಸ್ತೆ ಬಂದ್ ಆಗುವ ಅಥವಾ ಭಾರಿ ಪ್ರಮಾಣದಲ್ಲಿ ಸಂಚಾರ ದಟ್ಟಣೆ ಉಂಟಾಗುವ ಸಾಧ್ಯತೆಯಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ ರೈತರು ಕಳೆದ 80 ದಿನಗಳಿಂದ ಜಿಲ್ಲಾಡಳಿತ ಭವನದ ಮುಂದೆ ಅನಿರ್ದಿಷ್ಟಾವಧಿ ಧರಣಿ ನಡೆಸುತ್ತಿದ್ದಾರೆ.

ಜಂಗಮಕೋಟೆ ಭಾಗದ ಸುಮಾರು 2,800 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಕೈಗಾರಿಕೆಗಳ ಸ್ಥಾಪನೆಗಾಗಿ ಭೂಸ್ವಾಧೀನ ಮಾಡಿಕೊಳ್ಳಲು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಮುಂದಾಗಿದೆ.

## ವಿದ್ಯಾರ್ಥಿನಿಯ ಅತ್ಯಾಚಾರಕ್ಕೆ ಯತ್ನಿಸಿದ ಚಿಂದಿ ಆಯುವವ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಟೀ ಕುಡಿದು ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ ಆರೋಪದಡಿ ಪಶ್ಚಿಮ ಬಂಗಾಳ ಮೂಲದ ಯುವಕನನ್ನು ವೈಟ್ ಫೀಲ್ಡ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಸೈಫುಲ್ ಮೊಂಡಲ್ ಬಂಧಿತ ಆರೋಪಿ. ಜೂನ್ 2ರ ಬೆಳಗಿನ ಜಾವ ಘಟನೆ ನಡೆದಿದೆ. ಆರೋಪಿಯನ್ನು ಇದೀಗ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕೆಲವು ವರ್ಷಗಳ ಹಿಂದೆ ನಗರಕ್ಕೆ ಬಂದಿದ್ದ ಆರೋಪಿ ವೈಟ್ ಫೀಲ್ಡ್‌ನಲ್ಲಿ ರಸ್ತೆ ಬದಿ ಕಸ ಆಯುವ ಕೆಲಸ ಮಾಡುತ್ತಿದ್ದ ಎಂದು ಗೊತ್ತಾಗಿದೆ. ಜೂನ್ 2ರ ಬೆಳಗ್ಗೆ ವಿದ್ಯಾರ್ಥಿನಿ ಟೀ ಕುಡಿಯಲು ಬಂದಿದ್ದಳು. ಟೀ ಕುಡಿದು ಪಿಜಿಗೆ ಹೋಗುತ್ತಿದ್ದಾಗ ವಿದ್ಯಾರ್ಥಿನಿಯನ್ನು ನೋಡಿದ ಆರೋಪಿ ಆಕೆಯನ್ನು ಎತ್ತಿಕೊಂಡು ಹೋಗಲು ಮುಂದಾಗಿದ್ದಾನೆ.

### ರೌಡಿಗಳ ನಿಗ್ರಹಕ್ಕೆ ಪ್ರತ್ಯೇಕ ಸ್ಕ್ವಾಡ್

ಪೊಲೀಸರಿಗೆ ಪ್ರತಿ ತಾಲ್ಲೂಕುಗಳಲ್ಲಿ ಪ್ರತ್ಯೇಕ ಸ್ಕ್ವಾಡ್ ಮಾಡಲು ಸೂಚನೆ ನೀಡಲಾಗಿದೆ. ಈ ವಿಶೇಷ ಪಡೆ ರೌಡಿಗಳ ಮೇಲೆ ನಿಗಾ ಇಡಬೇಕು. ರೌಡಿಗಳ ಅಟ್ಟಹಾಸಕ್ಕೆ ಕಡಿವಾಣ ಹಾಕುವ ಕೆಲಸ ಮಾಡಬೇಕು ಎಂದು ಸೂಚಿಸಲಾಗಿದೆ ಎಂದರು. ದೆಹಲಿಯ ಕರ್ನಾಟಕ ಭವನ ಕಾರ್ಯನಿರ್ವಹಣೆ ಬಗ್ಗೆ ತೃಪ್ತಿ ಇಲ್ಲ. ಅಲ್ಲಿಗೆ ಹೋಗಿ ಅಧಿಕಾರಿಗಳ ಜೊತೆ ಸಭೆ ಮಾಡಿ, ಪ್ರತ್ಯೇಕ ಸೆಲ್ ಮಾಡಿ, ರಾಜ್ಯಕ್ಕೆ ಬೇಕಾಗಿರುವ ಕೇಂದ್ರದ ಅನುದಾನ, ಬೇರೆ ರಾಜ್ಯಗಳು ಎಷ್ಟು ಹಣ ತಗೋತಾರೆ ಎಂಬ ಬಗ್ಗೆ ಪರಿಶೀಲಿಸಿ, ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸುವ ವ್ಯವಸ್ಥೆ ಮಾಡಲಿದ್ದೇವೆ ಎಂದರು.

**ಸಿಎಂ ಆದ ಮೊದಲ ದಿನವೇ**

### ಅನರ್ಹರು ಗೃಹ ಜ್ಯೋತಿ ಹಣ ಪಡೆಯದಂತೆ ಕ್ರಮ

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಸಂಬಂಧ ಮಾತನಾಡಿ, ಗೃಹ ಜ್ಯೋತಿಯಡಿ 200 ಯುನಿಟ್ ಅಂತ ಗೃಹ ಬಳಕೆಯ ಬದಲು ವಾಣಿಜ್ಯ ಉದ್ದೇಶಕ್ಕಾಗಿ ಬಳಕೆ ಮಾಡುತ್ತಿದ್ದಾರೆ. 1.60 ಕೋಟಿ ಜನ 200 ಯುನಿಟ್ ಗೃಹ ಜ್ಯೋತಿ ಯೋಜನೆ ಬಳಕೆ ಮಾಡುತ್ತಿದ್ದಾರೆ. ಒಂದೊಂದು ಹಲವು ಮನೆಗಳಲ್ಲಿ ನಾಲ್ಕೈದು ಮೀಟರ್‌ಗಳು ಇವೆ. ಆ ಮನೆಯವನು ನಮ್ಮ ರಾಜ್ಯದವರಾ, ಎಲ್ಲಿಯವರು. ಕೆಲವರು ಸತ್ತವರ ಹೆಸರಲ್ಲಿ ಹಣ ಪಡೆದಿದ್ದಾರೆ. ಹಾಗಾಗಿ ಫಲಾನುಭವಿಗಳ ದೂರವಾಣಿ ಸಂಖ್ಯೆ ಸೇರಿ ಅದೆಲ್ಲದರ ಮಾಹಿತಿ ಪಡೆಯುತ್ತಿದ್ದೇವೆ. ಹಣ ದುರುಪಯೋಗ ಆಗಬಾರದು ಅಷ್ಟೇ ಎಂದರು.

**ನೂತನ ಸಚಿವರಿಗೆ ಖಾತೆ ಹಂಚಿಕೆ ಫೈನಲ್ ಆಗಿದೆ: ನೂತನ ಸಿಎಂ ಡಿಕೆಶಿ**

# ಸಚಿವರಿಗೆ ಡಿಕೆ ಎಚ್ಚರಿಕೆ

ಡಿಕೆ ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುತ್ತಿದ್ದಂತೆಯೇ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಿದ್ದಾರೆ. ಸಾರ್ವಜನಿಕ ಕುಂದುಕೊರತೆ ನಿವಾರಣೆ ಹಾಗೂ ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ಎರಡು ಮಹತ್ವದ ನಿರ್ಧಾರಗಳನ್ನು ಪ್ರಕಟಿಸಿದ್ದಾರೆ. ಪ್ರತಿನಿತ್ಯ ವಿವಿಧ ಬೇಡಿಕೆಗಳಿಗಾಗಿ ಹೋರಾಟ ಮಾಡುವವರಿಗಾಗಿ ಹಾಗೂ ವಿದೇಶದಲ್ಲಿರುವ ಕನ್ನಡಿಗರಿಗಾಗಿ ಪ್ರತ್ಯೇಕ ಸಚಿವಾಲಯಗಳನ್ನು ಸ್ಥಾಪಿಸುವುದಾಗಿ ಘೋಷಿಸಿದ್ದಾರೆ. ಇದು ಹೇಗೆ ಕೆಲಸ ನಿರ್ವಹಿಸುತ್ತೆ ಎನ್ನುವ ಬಗ್ಗೆಯೂ ಸಿಎಂ ವಿವರಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಡಿ.ಕೆ. ಶಿವಕುಮಾರ್ ಅವರು ತಮ್ಮ ಸಂಪುಟದ ಸಹೋದ್ಯೋಗಿಗಳಿಗೆ ಮತ್ತು ಪಕ್ಷದ ನಾಯಕರಿಗೆ ಅತ್ಯಂತ ಕಠಿಣ ಸಂದೇಶ ರವಾನಿಸಿದ್ದಾರೆ. ಆಡಳಿತ ಮತ್ತು ಪಕ್ಷದ ಸಂಘಟನೆಯಲ್ಲಿ ಯಾವುದೇ ರೀತಿಯ ಮೈಗಳ್ಳತನವನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದ್ದಾರೆ. ಮುಖ್ಯಮಂತ್ರಿಯಾದ ಬೆನ್ನಲ್ಲೇ ಸಚಿವರ ಸಭೆ ನಡೆಸಿದ ಡಿ.ಕೆ. ಶಿವಕುಮಾರ್, ನಾನು ಯಾವ ಮಂತ್ರಿಗಳನ್ನೂ ಸುಮ್ಮನೆ ಬಿಡುವುದಿಲ್ಲ. ಎಲ್ಲರೂ 24/7 ರೀತಿ ಸಕ್ರಿಯವಾಗಿ ಕೆಲಸ ಮಾಡಬೇಕು'' ಎಂದು ಖಡಕ್ ಆಗಿ ಹೇಳಿದ್ದಾರೆ. ಕೇವಲ ಬೆಂಗಳೂರಿಗೆ ಸೀಮಿತವಾಗದೆ, ಎಲ್ಲಾ ಸಚಿವರು ಮತ್ತು ಶಾಸಕರು ತಮ್ಮ ವ್ಯಾಪ್ತಿಯ ಪ್ರತಿ ಜಿಲ್ಲೆಯಲ್ಲೂ ಕಡ್ಡಾಯವಾಗಿ ಪ್ರವಾಸ ಮಾಡಿ, ಸಭೆಗಳನ್ನು ನಡೆಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಆದೇಶಿಸಿದ್ದಾರೆ.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಕಾಂಗ್ರೆಸ್ ಹೈಕಮಾಂಡ್ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ.

### ಯಾವುದೇ ಒತ್ತಡಕ್ಕೆ ಮಣಿಯುವುದಿಲ್ಲ

ಸಭೆಯಲ್ಲಿ ನಾವು ಅಧಿಕಾರಿಗಳಿಂದ ಏನು ನಿರೀಕ್ಷೆ ಮಾಡಿದ್ದೇವೆ. ನಮ್ಮಿಂದ ಅವರಿಗೆ ಏನು ನಿರೀಕ್ಷೆ ಇದೆ ಎಂಬ ಬಗ್ಗೆ ಚರ್ಚೆ ನಡೆಸಲಾಯಿತು. ಯಾವುದೇ ಜಾತಿ, ಧರ್ಮ, ಪ್ರಭಾವಕ್ಕೂ ಕೂಡ ಮಣಿಯುವುದಿಲ್ಲ. ಯಾವ ಒತ್ತಡದಲ್ಲೂ ಭಾಗಿಯಾಗಬೇಡಿ. ಪಾರದರ್ಶಕತೆ ಗಮನದಲ್ಲಿಟ್ಟುಕೊಂಡು ಯಾವ ಅಧಿಕಾರಿ ಜನರ ಭಾವನೆ ಮೇಲೆ ಆಡಳಿತದಲ್ಲಿ ಜನರ ಸಮಸ್ಯೆಗಳನ್ನು ಬಗೆಹರಿಸಲು, ಪಾಸಿಟಿವ್ ಅಪ್ರೋಚ್‌ನಲ್ಲಿ ಕೆಲಸ ಮಾಡಲು ಸೂಚನೆ ನೀಡಲಾಗಿದೆ. 15 ದಿನಗಳಲ್ಲಿ ಇಲಾಖಾವಾರು ಕಾರ್ಯಯೋಜನೆ ಸಿದ್ಧಪಡಿಸಲು ಸೂಚಿಸಲಾಗಿದೆ. ಆತ್ಮಸಾಕ್ಷಿಗೆ ತಕ್ಕ ಕೆಲಸ ಮಾಡಲು ಸೂಚಿಸಿದ್ದೇನೆ. ಯಾರ ಒತ್ತಡಕ್ಕೂ ಮಣಿಯಬಾರದು. ಮಂತ್ರಿಗಳು, ಶಾಸಕರು, ನನ್ನ ಕಚೇರಿಯವರೇ ಆಗಲಿ ಯಾರ ಮಾತೂ ಕೇಳ ಬಾರದು. ವ್ಯವಸ್ಥೆಯೊಳಗೆ ಕೆಲಸ ಮಾಡಬೇಕಿದೆ. ಯಾವ ಒತ್ತಡಕ್ಕೂ ಮಣಿಯ ಬಾರದು, ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡಬೇಕು. ಮುಕ್ತ, ಪಾರದರ್ಶಕ, ಭ್ರಷ್ಟಾಚಾರ ರಹಿತ ಸರ್ಕಾರ ಕೊಡಬೇಕು ಎಂಬ ಸೂಚನೆ ಕೊಟ್ಟಿದ್ದೇವೆ ಎಂದರು.

ಎಸ್‌ಐಆರ್ ವಿಚಾರದಲ್ಲಿ ದೊಡ್ಡ ಸಮಸ್ಯೆಯಿದೆ, ಇದನ್ನು ಯಾರೂ ಹಗುರವಾಗಿ ಪರಿಗಣಿಸುವಂತಿಲ್ಲ ಎಂದು ಎಚ್ಚರಿಸಿರುವ ಸಿಎಂ, ಚುನಾವಣಾ ವ್ಯವಸ್ಥೆಯ ಈ ಪ್ರಮುಖ ಪ್ರಕ್ರಿಯೆಯ ಕಡೆಗೆ ನಾಯಕರು ಹೆಚ್ಚಿನ ಗಮನ ಹರಿಸಬೇಕು ಎಂದು ಸೂಚಿಸಿದ್ದಾರೆ. ಈ ಹಿಂದೆ ಎಸ್‌ಐಆರ್ ಮಹತ್ವದ ಸಭೆಗೆ ಗೈರುಹಾಜರಾಗಿದ್ದ ಕೆಪಿಸಿಸಿ ಪದಾಧಿಕಾರಿಗಳ ವಿರುದ್ಧ ಡಿ.ಕೆ. ಶಿವಕುಮಾರ್ ಅವರು ಕಠಿಣ ಶಿಸ್ತು ಕ್ರಮ ಜರುಗಿಸುವ ಮೂಲಕ ಬಿಸಿ ಮುಟ್ಟಿಸಿದ್ದರು. ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸಭೆಗೆ ಗೈರಾದ ನಾಯಕರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ನೀಡಿದ ಸೂಚನೆಯ ಬೆನ್ನಲ್ಲೇ ಬೇಜವಾಬ್ದಾರಿತನ ಪ್ರದರ್ಶಿಸಿದ ಒಟ್ಟು ಮೂವರು ಕೆಪಿಸಿಸಿ ಉಪಾಧ್ಯಕ್ಷರು ಮತ್ತು 29 ಪ್ರಧಾನ ಕಾರ್ಯದರ್ಶಿಗಳನ್ನು ಹುದ್ದೆಯಿಂದ ಮುಕ್ತಗೊಳಿಸಲಾಗಿತ್ತು.

**ಎನ್‌ಆರ್‌ಐಗೆ ಪ್ರತ್ಯೇಕ ಸಚಿವಾಲಯ:** ಇನ್ನು ಎನ್‌ಆರ್‌ಐಗೆ ಪ್ರತ್ಯೇಕ ಸಚಿವಾಲಯ ಮಾಡಲು ತೀರ್ಮಾನ ಮಾಡಲಾಗಿದೆ ಎಂದು ಇದೇ ವೇಳೆ ತಿಳಿಸಿದರು.

ಹಲವು ಎನ್‌ಆರ್‌ಐಗಳು ರಾಜ್ಯದಲ್ಲಿ ಹೂಡಿಕೆ ಮಾಡುತ್ತಾರೆ. ಅವರ ಸಮಸ್ಯೆಗಳು, ಅವರ ಹೂಡಿಕೆಗಳಿಗೆ ಬೇಕಾದ ಪೂರಕ ವಾತಾವರಣ, ಅವರ ಸಮಸ್ಯೆ ನಿವಾರಣೆಗಾಗಿ, ಸಮನ್ವಯತೆಗಾಗಿ ಪ್ರತ್ಯೇಕ ಎನ್‌ಆರ್‌ಐ ಸಚಿವಾಲಯ ಮಾಡಲು ತೀರ್ಮಾನ ಮಾಡಲಾಗಿದೆ ಎಂದರು.

**ಸಿಎಂ ಡಿಕೆಶಿ ಕೈಯಲ್ಲಿ ಮಹತ್ವದ ಜವಾಬ್ದಾರಿ!**





ಸಿದ್ಧಗಂಗಾ ಶ್ರೀಗಳ ಆಶೀರ್ವಾದ ಪಡೆದ ಸಿಎಂ ಡಿಕೆಶಿ, ಡಿಸಿಎಂ ಡಾ.ಜಿ.ಪರಮೇಶ್ವರ್

**ಕುತೂಹಲ ಕೆರಳಿಸಿದ ಸಿಎಂ ಡಿಕೆಶಿ ಬಿ.ಕೆ ಹರಿಪ್ರಸಾದ್ ಭೇಟಿ**

1 ಸಿಎಂ ಆದ ಬಳಿಕ ಡಿಕೆ ಶಿವಕುಮಾರ್ ಅಧಿಕಾರಿಗಳ ಜೊತೆ ಮೊದಲ ಮಹತ್ವದ ಸಭೆ

2 ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳ ಜತೆ ಸಭೆ ಮಾಡಿ ಆಡಳಿತ ಯಂತ್ರಕ್ಕೆ ಚುರುಕು

3 ಪಾರದರ್ಶಕ ಆಡಳಿತಕ್ಕೆ ಒತ್ತು ನೀಡಿದ ಸಿಎಂ ಡಿಕೆ ಶಿವಕುಮಾರ್

4 ಸಾರ್ವಜನಿಕರು ಕುಂದುಕೊರತೆ ಆಲಿಸಲು ಪ್ರತ್ಯೇಕ ಸಚಿವಾಲಯ ಘೋಷಣೆ

### ಇತಿಹಾಸ ನಿರ್ಮಾಣ ಮಾಡಬೇಕು

ಸಾಮಾನ್ಯ ಜ್ಞಾನ ಬೇಕು ಎಂದು ಹೇಳಿದ್ದೇನೆ. ನನಗೆ ಇತಿಹಾಸ ಓದಲು, ಇತಿಹಾಸ ಬರೆಯಲು ಇಷ್ಟ ಇಲ್ಲ. ಇತಿಹಾಸ ನಿರ್ಮಾಣ ಮಾಡಬೇಕು. ಸಾಕ್ಷಿ ಗುಡ್ಡ ಬಿಟ್ಟು ಹೋಗಬೇಕು ಎಂದು ಅಧಿಕಾರಿಗಳಿಗೆ ಹೇಳಿರುವುದಾಗಿ ತಿಳಿಸಿದರು. ಜಿಲ್ಲಾ ಕಾರ್ಯದರ್ಶಿಗಳು ಜಿಲ್ಲೆಗೆ ಹೋಗಿ ಅಲ್ಲಿನ ತಾಲ್ಲೂಕುಗಳಿಗೆ ಹೋಗಲೇಬೇಕು.

ಎಸ್‌ಐಆರ್ ನಡೆಯುತ್ತಿದೆ. ಎಸ್‌ಐಆರ್‌ನಲ್ಲಿ ನೋಂದಣಿ ಆಗಿಲ್ಲವಾದರೆ ಅದರ ಬಗ್ಗೆ ಗಮನಹರಿಸಬೇಕು. ಮತದಾರರಿಗೂ ಜಾಗೃತಿ ಮೂಡಿಸಬೇಕು. ಅದಕ್ಕೆ ಬೇಕಾದ ಸಿದ್ಧತೆ ಮಾಡಲು ಸೂಚನೆ ನೀಡಿದ್ದೇನೆ. ಈ ನಿಟ್ಟಿನಲ್ಲಿ ತಹಶೀಲ್ದಾರ್‌ಗಳಿಗೆ, ಕೆಳ ಅಧಿಕಾರಿಗೆ ಮಾರ್ಗದರ್ಶನ ನೀಡಬೇಕು ಎಂದು ಸೂಚಿಸಲಾಗಿದೆ ಎಂದರು. ಮತ ಪರಿಷ್ಕರಣೆ ವೇಳೆ ಹೆಸರು ಕೈ ತಪ್ಪಿದವರು ಅಪೀಲಿನಲ್ಲಿ ಎಷ್ಟು ಪರಿಗಣಿಸುತ್ತಾರೆ ಎಂದು ಎಲ್ಲರಿಗೂ ಗೊತ್ತಿರುತ್ತದೆ. ಬೇರೆ ರಾಜ್ಯಗಳಲ್ಲಿ ಲಕ್ಷಾಂತರ ಮತದಾನದ ಹಕ್ಕು ಕಳಕೊಂಡಿದ್ದಾರೆ. ಅದು ನಮ್ಮ ರಾಜ್ಯದಲ್ಲಿ ಆಗಬಾರದು ಎಂದು ಸೂಚನೆ ನೀಡಿದ್ದಾರೆ.

### ಇದು ಟ್ರೇಲರ್ ಮಾತ್ರ, ಪಿಕ್ಚರ್ ಅಭಿ ಬಾಕಿ ಹೈ..



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದ ಬಳಿಕ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು, ಇದು ಕೇವಲ ಸೌಜನ್ಯ ಭೇಟಿಯಾಗಿದ್ದು, ಯಾವುದೇ ರಾಜಕೀಯ ಅಜೆಂಡಾ ಅಥವಾ ವಿಶೇಷ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ಅಧ್ಯಕ್ಷರು ಮತ್ತು ಮುಖ್ಯಮಂತ್ರಿ ನಡುವಿನ ಸೌಜನ್ಯ ಭೇಟಿ ಸಹಜ. ಅದೇ ರೀತಿಯ ಭೇಟಿ ಇದಾಗಿದ್ದು, ಯಾವುದೇ ವಿಶೇಷ ಅಜೆಂಡಾ ಇರಲಿಲ್ಲ ಎಂದು ಹೇಳಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಬೆಂಗಳೂರಿನ ಭೇಟಿಯ ಕುರಿತು ಪ್ರತಿಕ್ರಿಯಿಸಿದ ಹರಿಪ್ರಸಾದ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯಸಭೆ ಚುನಾವಣೆಗೆ ನಾಮಪತ್ರ ಸಲ್ಲಿಸುತ್ತಿದ್ದು, ಆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ರಾಹುಲ್ ಗಾಂಧಿ ಬೆಂಗಳೂರಿಗೆ ಆಗಮಿಸುವ ಸಾಧ್ಯತೆ ಇದೆ ಎಂದು ತಿಳಿಸಿದರು.

### ಕಾಂಗ್ರೆಸ್ ನಿರಾಶ್ರಿತರಿಗೆ ಭಾರತ್ ಜೋಡೋ ಸಂಘಟನೆ



ಭಾರತ್ ಜೋಡೋಗೂ ಸರ್ಕಾರಕ್ಕೂ ಏನೂ ಸಂಬಂಧವಿದೆ. ಇದರಿಂದ ಕಾಂಗ್ರೆಸ್‌ನ ನಿರಾಶ್ರಿತರಿಗೆ ಪ್ರಯೋಜನವಾಗಲಿದೆಯೇ ಹೊರತು ಯುವಜನರಿಗೆ ಉಪಯೋಗವಿಲ್ಲ. ಈಗಾಗಲೇ ಗುತ್ತಿಗೆದಾರರಿಗೆ ಬಾಕಿ ಕೊಡಬೇಕಿದೆ. ಆ ಹಣವನ್ನು ಕೊಟ್ಟರೆ ಸಾಕಿತ್ತು. ಉತ್ತರ ಕರ್ನಾಟಕದಲ್ಲಿ ಮಕ್ಕಳು ಶಾಲೆಯ ಒಳಗೆ ಹೋಗದಂತಹ ಸ್ಥಿತಿ ಇದೆ. ಇಂತಹ ಶಾಲೆಗಳನ್ನು ಅಭಿವೃದ್ಧಿ ಮಾಡಿದರೆ ಸಾಕಾಗಿದೆ. ಸುಖಾಸುಮ್ಮನೆ ಘೋಷಣೆಗಳನ್ನು ಮಾಡಿದರೆ ಸಾಲುವುದಿಲ್ಲ. ಅಬಕಾರಿ ಬಿಟ್ಟರೆ ಎಲ್ಲಾ ಇಲಾಖೆಗಳಲ್ಲಿ ಆದಾಯ ಕಡಿಮೆಯಾಗಿದೆ. ಯೋಜನೆಗಳನ್ನು ಘೋಷಣೆ ಮಾಡಿ, ಅದನ್ನು ಜಾರಿ ಮಾಡದೇ ನಂತರ ಕೇಂದ್ರ ಸರ್ಕಾರ ಅನುದಾನ ನೀಡಿಲ್ಲ ಎಂದು ಆರೋಪ ಮಾಡುತ್ತಾರೆ ಎಂದು ದೂರಿದರು.

## ರಾಯಚೂರು ಭಾರತ ವನ ಯೋಜನೆಗೆ ಚಾಲನೆ ನೀಡಿದ ನಿರ್ಮಲಾ ಸೀತಾರಾಮನ್

• ಉದಯವಾಹಿನಿ,ಬೆಂಗಳೂರು

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ರಾಯಚೂರು ಭಾರತ ವನ ಯೋಜನೆ ಕಾರ್ಯಕ್ರಮದಲ್ಲಿ ಕೇಂದ್ರ ವಿತ್ತ ಹಾಗೂ ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ರಾಯಚೂರಿನ ಯಕ್ಲಾಸಪುರ ಘನತ್ಯಾಜ್ಯ ಘಟಕದಲ್ಲಿ ಭಾರತ ವನ ಯೋಜನೆ ಅಡಿ ಮಿಯಾವಾಕಿ ಪದ್ಧತಿ ಮೂಲಕ ಅರಣ್ಯೀಕರಣವನ್ನ ವರ್ಚುವಲ್ ಆಗಿ ಉದ್ಘಾಟನೆ ಮಾಡಿದರು. ಸಸಿ ನೆಡುವ ವೇಳೆ ವಿದ್ಯಾರ್ಥಿಗಳ ಜೊತೆ ಪರಿಸರ ಬಗ್ಗೆ ಸಂವಾದ



ನಡೆಸಿದರು. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ತಾಯಿಯ ಹೆಸರಿನಲ್ಲಿ ಒಂದು ಮರ ಅಭಿಯಾನಕ್ಕೆ ಚಾಲನೆ ನೀಡಿದರು. ಇದಕ್ಕೂ ಮುನ್ನ ಶಕ್ತಿನಗರದ ಆರ್‌ಟಿಪಿಎಸ್ ಗೆಸ್ಟ್ ಹೌಸ್‌ನಲ್ಲಿ ಮಹತ್ವಾಕಾಂಕ್ಷಿ ಜಿಲ್ಲೆ ರಾಯಚೂರು, ಯಾದಗಿರಿ ಅಭಿವೃದ್ಧಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಕೆಕೆಆರ್‌ಡಿಬಿ ಕಾರ್ಯದರ್ಶಿ ನಳೀನ್ ಅತುಲ್, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಅಧಿಕಾರಿಗಳು ಭಾಗವಹಿಸಿದ್ದರು.

ಸಭೆಯಲ್ಲಿ ಆರೋಗ್ಯ, ಶಿಕ್ಷಣ, ಕೃಷಿ, ಹಣಕಾಸು ಒಳಗೊಳ್ಳುವಿಕೆ ಮತ್ತು ಜೀವನೋಪಾಯ ಕ್ಷೇತ್ರಗಳ ಪ್ರಮುಖ ಅಭಿವೃದ್ಧಿಯ ಕುರಿತು ಪರಿಶೀಲನೆ ಮಾಡಿದರು.

## ಕೆಆರ್‌ಎಸ್‌ನಲ್ಲಿ ನೀರಿನ ಕೊರತೆಯಿಲ್ಲ, ಬೆಂಗಳೂರಿಗೆ ಆತಂಕ ಬೇಡ

• ಉದಯವಾಹಿನಿ,ಬೆಂಗಳೂರು

ರೈತರು ಹಾಗೂ ಸಾರ್ವಜನಿಕರು ಯಾವುದೇ ಕಾರಣಕ್ಕೂ ಆತಂಕ ಪಡುವ ಅಗತ್ಯವಿಲ್ಲ. ಕೆಆರ್ ಎಸ್‌ನಲ್ಲಿ ಸದ್ಯಕ್ಕೆ ನೀರಿನ ಕೊರತೆಯಿಲ್ಲ ಎಂದು ಶಾಸಕ ರಮೇಶ್ ಬಂಡಿಸಿದ್ದೇಗೌಡ ಹೇಳಿದ್ದಾರೆ. ರಾಜ್ಯದಲ್ಲಿ ಮುಂಗಾರು ಮಳೆ ವಿಳಂಬವಾಗಿರುವ ಹಿನ್ನೆಲೆಯಲ್ಲಿ ಕಾವೇರಿ ಕೊಳ್ಳದ ಜನರು ಹಾಗೂ ಬೆಂಗಳೂರಿನಲ್ಲಿ ಕುಡಿಯುವ ನೀರಿಗೆ ಆತಂಕ ಶುರುವಾಗಿದೆ. ಈ ಕುರಿತು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೆಆರ್‌ಎಸ್ ಬಳಿ ಮಾತನಾಡಿದ ಅವರು, ಪ್ರಸ್ತುತ ಜಲಾಶಯದಲ್ಲಿ ಸುಮಾರು 82 ಅಡಿಗಳಷ್ಟು ನೀರಿದೆ. ಮುಂಗಾರು ಮಳೆ ಸ್ವಲ್ಪ ತಡವಾಗಿದ್ದರೂ, ಕನ್ನಂಬಾಡಿ ಕಟ್ಟೆಯ ಕೆಳಗಿರುವ ಯಾವುದೇ ಹಳ್ಳಿಗಳಿಗಾಗಲಿ ಅಥವಾ ಬೆಂಗಳೂರು ನಗರಕ್ಕಾಗಲಿ ಸದ್ಯಕ್ಕೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವುದಿಲ್ಲ.

## ಜೂ.28 ರಿಂದ ಜು. 01 ರವರೆಗೆ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ

• ಉದಯವಾಹಿನಿ, ಬೆಂಗಳೂರು

ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 01 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಪೋಷಕರು ತಮ 0-5 ವರ್ಷದೊಳಗಿನ ಮಕ್ಕಳನ್ನು ಹತ್ತಿರದ ಪೋಲಿಯೋ ಬೂತ್ ಕರೆದುಕೊಂಡು ಬಂದು ಉಚಿತ ಪೋಲಿಯೋ ಲಸಿಕೆಯನ್ನು ತಪ್ಪದೆ ಹಾಕಿಸಬೇಕು ಎಂದು ಜಿಲ್ಲಾಧಿಕಾರಿ ಡಾ ಕೆ.ಎನ್.ಅನುರಾಧ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

5 ವರ್ಷದೊಳಗಿನ ಯಾವುದೇ ಮಕ್ಕಳು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ಎಲ್ಲಾ ಮಕ್ಕಳಿಗೂ ತಪ್ಪದೇ ಲಸಿಕೆ ಹಾಕಿಸಲು ಆರೋಗ್ಯ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು. ಆಶಾ, ಅಂಗನವಾಡಿ ಆರೋಗ್ಯಧಿಕಾರಿಗಳು ಪಲ್ಸ್ ಪೋಲಿಯೋ ಲಸಿಕೆ ಬಗ್ಗೆ ಅರಿವು ಮೂಡಿಸಿ ಎಂದರು. ಗ್ರಾಮೀಣ ಪ್ರದೇಶದಲ್ಲಿ ಪೋಲಿಯೋ ಲಸಿಕೆ ಅಭಿಯಾನದ ಕುರಿತು ಧ್ವನಿವರ್ಧಕ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು.

## ವೆನೆಜುವೆಲಾ ಅಧ್ಯಕ್ಷೆ ಡೆಲ್ಸಿ ರಾಡ್ರಿಗಸ್ ಭೇಟಿಯಾದ ಮೋದಿ, ಎಸ್. ಜೈಶಂಕರ್ ವೆನೆಜುವೆಲಾದಿಂದ ಇಂಧನ ಖರೀದಿಸುತ್ತಾ ಭಾರತ

• ಉದಯವಾಹಿನಿ, ನವದೆಹಲಿ

ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರು ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ (ಅವರನ್ನು ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದ್ದಾರೆ. ಈ ವೇಳೆ ಸಭೆಯಲ್ಲಿ ವಿದೇಶಾಂಗ ಸಚಿವ ಎಸ್. ಜೈಶಂಕರ್ ಹಾಗೂ ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಕೂಡ ಉಪಸ್ಥಿತರಿದ್ದರು.

ಈ ಭೇಟಿಗೆ ಮುನ್ನ ಪ್ರಕಟಣೆ ನೀಡಿದ್ದ ವಿದೇಶಾಂಗ ಸಚಿವಾಲಯ, ಭಾರತ ಮತ್ತು ವೆನೆಜುವೆಲಾ ನಡುವಿನ ದ್ವಿಪಕ್ಷೀಯ ಸಂಬಂಧಗಳ ಸಮಗ್ರ ಪರಿಶೀಲನೆ ನಡೆಸುವ ಜೊತೆಗೆ ಇಂಧನ ಭದ್ರತೆ, ವ್ಯಾಪಾರ ಮತ್ತು ಹೂಡಿಕೆ, ಔಷಧೋದ್ಯಮ, ಆರೋಗ್ಯ ರಕ್ಷಣೆ, ಸಾರಿಗೆ ಹಾಗೂ ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿ ಸಹಕಾರವನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಸಭೆ ಆಯೋಜಿಸಲಾಗಿದೆ ಎಂದು ತಿಳಿಸಿತ್ತು.


ಇದಕ್ಕೂ ಮೊದಲು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಡೆಲ್ಸಿ ರೊಡ್ರಿಗಸ್ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿದ್ದರು. ಈ



ವೇಳೆ ದಕ್ಷಿಣ ಅಮೆರಿಕದ ರಾಷ್ಟ್ರಗಳೊಂದಿಗೆ ಭಾರತದ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸುವ ಬದ್ಧತೆಯನ್ನು ಅವರು ಪುನರುಚ್ಚರಿಸಿದರು.

ಭೇಟಿಯ ಬಳಿಕ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಜೈಶಂಕರ್, ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿದ್ದು ಸಂತಸ ತಂದಿದೆ. ಭಾರತ ಮತ್ತು ವೆನೆಜುವೆಲಾ ನಡುವಿನ ದೀರ್ಘಕಾಲದ ಸ್ನೇಹಪೂರ್ಣ ಸಂಬಂಧಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದೇವೆ. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ರೊಡ್ರಿಗಸ್ ಅವರ ಭೇಟಿ ಉಭಯ ರಾಷ್ಟ್ರಗಳ ಸಹಕಾರಕ್ಕೆ ಮತ್ತಷ್ಟು ವೇಗ ನೀಡಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ವೆನೆಜುವೆಲಾ ನಿಯೋಗಕ್ಕೆ ಶುಭಕೋರಿರುವ ವಿದೇಶಾಂಗ ಸಚಿವಾಲಯ, ಈ ಭೇಟಿಯು ಎರಡೂ ದೇಶಗಳ ನಡುವಿನ ಸಹಕಾರವನ್ನು ಬಲಪಡಿಸುವುದರ ಜೊತೆಗೆ ದ್ವಿಪಕ್ಷೀಯ ಪಾಲುದಾರಿಕೆಗೆ ಹೊಸ ಚೈತನ್ಯ ತುಂಬಲಿದೆ ಎಂದು ಎಕ್ಸ್ ಜಾಲತಾಣದಲ್ಲಿ ತಿಳಿಸಿದೆ. ಜೂನ್ 3 ರಿಂದ ಜೂನ್ 7 ರವರೆಗೆ ಭಾರತ ಪ್ರವಾಸ ಕೈಗೊಂಡಿರುವ ವೆನೆಜುವೆಲಾ ನಿಯೋಗದಲ್ಲಿ ವಿದೇಶಾಂಗ ವ್ಯವಹಾರಗಳು, ಆರ್ಥಿಕತೆ ಮತ್ತು ಹಣಕಾಸು, ವಿಜ್ಞಾನ ಮತ್ತು ತಂತ್ರಜ್ಞಾನ, ಸಂವಹನ ಮತ್ತು ಮಾಹಿತಿ ಹಾಗೂ ಸಾರಿಗೆ ಸಚಿವರು ಸೇರಿದಂತೆ ಉನ್ನತ ಮಟ್ಟದ ಅಧಿಕಾರಿಗಳು ಭಾಗಿಯಾಗಿದ್ದಾರೆ. ಈ ಹಿಂದೆ ನಿಗದಿಯಾಗಿದ್ದಂತೆ ಜೂನ್ 1 ರಂದು ದೆಹಲಿಯಲ್ಲಿ ನಡೆಯಬೇಕಿದ್ದ ಇಂಟರ್‌ನ್ಯಾಷನಲ್ ಬಿಗ್ ಕ್ಯಾಟ್ ಅಲೈಯನ್ಸ್ ಶೃಂಗಸಭೆಯಲ್ಲಿ ಡೆಲ್ಸಿ ರೊಡ್ರಿಗಸ್ ಭಾಗವಹಿಸಬೇಕಾಗಿತ್ತು.

## ರಾಜ್ಯಸಭೆ ಚುನಾವಣೆಗೆ ಕೈ ಅಭ್ಯರ್ಥಿಗಳ ಪಟ್ಟಿ ರೆಡಿ



• ಉದಯವಾಹಿನಿ ,ಬೆಂಗಳೂರು

ರಾಜ್ಯಸಭೆ ಚುನಾವಣೆಗೆ ರಾಷ್ಟ್ರೀಯ ಕಾಂಗ್ರೆಸ್ ಕೊನೆಗೂ ತನ್ನ ಅಭ್ಯರ್ಥಿಗಳ ಪಟ್ಟಿಯನ್ನ ಪ್ರಕಟ ಮಾಡಿದೆ. ರಾಜ್ಯಸಭಾ ಚುನಾವಣೆ ಕರ್ನಾಟಕದಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮನ್ಸೂರ್ ಅಲಿಖಾನ್, ಪವನ್ ಖೇರಾ ಮೂವರು ಸ್ಪರ್ಧಿಸುತ್ತಿದ್ದಾರೆ ಎಂದು ಎಐಸಿಸಿ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ. ಮೂವರು ಅಭ್ಯರ್ಥಿಗಳು ಶುಕ್ರವಾರ ನಾಮಪತ್ರ ಸಲ್ಲಿಕೆ ಮಾಡಲಿದ್ದಾರೆ. ಮಧ್ಯಪ್ರದೇಶದಿಂದ ಮೀನಾಕ್ಷಿ ನಟರಾಜನ್, ರಾಜಸ್ಥಾನದಿಂದ ನೀರಜ್ ಡಾಂಗಿ, ತಮಿಳುನಾಡಿನಿಂದ ಪ್ರವೀಣ್ ಚಕ್ರವರ್ತಿ ಹಾಗೂ ಜಾರ್ಖಂಡ್‌ನಿಂದ ಪ್ರಣವ್ ಝಾ ಅವರು ರಾಜ್ಯಸಭೆಗೆ ಸ್ಪರ್ಧಿಸುತ್ತಿದ್ದಾರೆ.

**ಈ ದಿನದ ದರ** ಪೆಟ್ರೋಲ್: 110.93 ₹/L ಡೀಸೆಲ್ : 98.80₹/L ಬಂಗಾರ: ₹ 15,611/Gram 24ct ₹14,310 /Gram 22ct ಬೆಳ್ಳಿ: ₹280.00/Gram

# ಶ್ರೀ ಶಿರಡಿ ಸಾಯಿಬಾಬ ದ್ವಾರಕಮಯಿ ಮಂದಿರದಲ್ಲಿ ನೂತನ ಮುಖ್ಯಮಂತ್ರಿ ಹೆಸರಿನಲ್ಲಿ ವಿಶೇಷ ಪೂಜೆ, ಸಿಹಿ ವಿತರಣೆ

• ಉದಯವಾಹಿನಿ, ಬೆಂಗಳೂರು

ಆಯುಕ್ತರ ಉದ್ಯಾನವನದ ಶ್ರೀ ಶಿರಡಿ ಸಾಯಿಬಾಬ ದ್ವಾರಕಮಯಿ ಅಭಿವೃದ್ಧಿ ಮಂಡಳಿ ಮತ್ತು ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಹಯೋಗದಲ್ಲಿ ಶ್ರೀ ಸಾಯಿಬಾಬ ದ್ವಾರಕಮಯಿ ಮಂದಿರದಲ್ಲಿ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರ ಹೆಸರಿನಲ್ಲಿ ವಿಶೇಷಪೂಜೆ ಮತ್ತು ಸಂಕಲ್ಪ ಮತ್ತು ಪ್ರಸಾದ ವಿನಿಯೋಗ ಕಾರ್ಯಕ್ರಮ. ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು,


ಉದಯವಾಹಿನಿ ಚಿತ್ರ

ಶ್ರೀ ಶಿರಡಿ ಸಾಯಿಬಾಬ ದ್ವಾರಕಮಯಿ ಅಭಿವೃದ್ಧಿ ಮಂಡಳಿಯ ಸಾಯಿಶಂಕರ್ ಮತ್ತು ಅಧಿಕಾರಿ, ನೌಕರರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಅಪಾರ ದೈವ ಭಕ್ತರು, ಕನ್ನಡ ಅಭಿಮಾನಿ ಮತ್ತು ಅಧಿಕಾರಿ ಮತ್ತು ನೌಕರರ ಸಮಸ್ಯೆಗಳಿಗೆ ತತಕ್ಷಣ ಸ್ಪಂದಿಸುವ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ರವರು ಮಾತೃ ಹೃದಯವುಳ್ಳವರು.

ಉಪಮುಖ್ಯಮಂತ್ರಿ, ನಗರ ಉಸ್ತುವಾರಿ ಸಚಿವರಾಗಿದ್ದಾಗ ಡಿ.ಕೆ.ಶಿವಕುಮಾರ್ ರವರು ಜಿಬಿಎ-ಪಾಲಿಕೆಗಳ ನೌಕರರ ಸಮಸ್ಯೆಗಳನ್ನು ಅಲಿಸಿ ತತಕ್ಷಣ ಪರಿಹಾರ ನೀಡಿದರು. ಮುಂದಿನ ದಿನಗಳಲ್ಲಿ ಪಾಲಿಕೆ ಅಧಿಕಾರ-ನೌಕರರ ಹಲವಾರು ಬೇಡಿಕೆಗಳ ಈಗಾಗಲೇ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗಿದೆ.

ರಾಜ್ಯದ ಅಭಿವೃದ್ಧಿ ಮತ್ತು ನಗರದ ಅಭಿವೃದ್ಧಿ ಮಾಡಲು ಶಕ್ತಿ ನೀಡಲಿ ಎಂದು ಶ್ರೀ ಶಿರಡಿ ಸಾಯಿಬಾಬನಲ್ಲಿ ವಿಶೇಷ ಪೂಜೆ, ಸಂಕಲ್ಪ ಮಾಡಲಾಗಿದೆ ಎಂದು ಮಂದಿರದವರು ತಿಳಿಸಿದರು.

## ಟ್ರೋಲ್ ಪೇಜ್‌ಗಳಿಗೆ ಕ್ರಶ್ ನಾನು; ಸಚಿವನಾಗುವ ಆಸೆಯಿದೆ ಆದರೆ, ಅಧಿಕಾರಕ್ಕಾಗಿ ರಾಜಕೀಯಕ್ಕೆ ಬಂದಿಲ್ಲ: ಪ್ರದೀಪ್ ಈಶ್ವರ್




ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಿದ ದಿನ ಕಾರಿನಲ್ಲಿ ಮೌನವಾಗಿ ಕುಳಿತಿದ್ದ ವಿಚಾರ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಟ್ರೋಲ್ ಆಗುತ್ತಿರುವ ಬಗ್ಗೆ ಶಾಸಕ ಪ್ರದೀಪ್ ಈಶ್ವರ್ ಪ್ರತಿಕ್ರಿಯಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿರಿಯ ನಾಯಕರೊಬ್ಬರು ಅಧಿಕಾರದಿಂದ ಕೆಳಗಿಳಿಯುತ್ತಿದ್ದರೆ, ಹೊಸ ನಾಯಕರು ಜವಾಬ್ದಾರಿ ವಹಿಸಿಕೊಳ್ಳುವಂತಹ ಭಾವನಾತ್ಮಕ ಸಂದರ್ಭ ಅದಾಗಿತ್ತು. ಆ ಸಮಯದಲ್ಲಿ ಏನು ಮಾತನಾಡಬೇಕೆಂದು ತಿಳಿದಿರಲಿಲ್ಲ. ಅಂತಹ ಕ್ಷಣಗಳಲ್ಲಿ ಯಾವುದೇ ಹೇಳಿಕೆ ನೀಡಿದರೂ ಅದನ್ನು ತಪ್ಪಾಗಿ ಅರ್ಥೈಸಿಕೊಳ್ಳುವ ಸಾಧ್ಯತೆ ಇರುತ್ತದೆ. ಹೀಗಾಗಿಯೇ ನಾನು ಮೌನವಾಗಿದ್ದೆ ಎಂದು ಹೇಳಿದರು.

ಟ್ರೋಲ್‌ಗಳ ಬಗ್ಗೆ ಪ್ರತಿಕ್ರಿಯಿಸಿದ ಪ್ರದೀಪ್ ಈಶ್ವರ್, ಟ್ರೋಲ್‌ಗಳು ನನಗೆ ಹೊಸದಲ್ಲ. ಕರ್ನಾಟಕದ ಟ್ರೋಲ್ ಪೇಜ್‌ಗಳ ಕ್ರಶ್ ನಾನಾಗಿದ್ದೇನೆ ಎಂದು ತಿಳಿಸಿದರು. ಸಚಿವ ಸ್ಥಾನ ಸಿಗುವ ಸಾಧ್ಯತೆ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ನನಗೆ ಸಚಿವ ಸ್ಥಾನ ಪಡೆಯುವ ಆಸೆ ಇದೆ. ಆದರೆ ಕೊಟ್ಟರೂ, ಕೊಡದಿದ್ದರೂ ಪರವಾಗಿಲ್ಲ. ನಾವು ಅಧಿಕಾರಕ್ಕಾಗಿ ರಾಜಕೀಯಕ್ಕೆ ಬಂದಿಲ್ಲ, ಪಕ್ಷದ ಸಿದ್ಧಾಂತ ಮತ್ತು ಜನಸೇವೆ ಮಾಡುವ ಉದ್ದೇಶದಿಂದ ಬಂದಿದ್ದೇವೆ. ನಾನು ಒಬಿಸಿ ಸಮುದಾಯದ ಯುವ ನಾಯಕ. ರಾಜ್ಯದಲ್ಲಿ ಒಬಿಸಿ ಚಳವಳಿಯನ್ನು ಮತ್ತಷ್ಟು ಬಲಪಡಿಸುವುದು ನನ್ನ ಉದ್ದೇಶ. ಅಧಿಕಾರವೇ ಗುರಿಯಾಗಿದ್ದರೆ ವಿವಾದಗಳನ್ನು ಮೈಮೇಲೆ ಎಳೆದುಕೊಳ್ಳುವ ಕೆಲಸ ಮಾಡುತ್ತಿರಲಿಲ್ಲ ಎಂದು ಪ್ರದೀಪ್ ಈಶ್ವರ್ ಹೇಳಿದರು.

## ಸಿದ್ದರಾಮಯ್ಯ ಭೇಟಿ ಮಾಡಿ ಧನ್ಯವಾದ ಸಲ್ಲಿಸಿದ ಲಕ್ಷ್ಮೀ ಹೆಬ್ಬಾಳಕರ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಧನ್ಯವಾದ ಸಲ್ಲಿಸಿದ್ದಾರೆ.

ಇಂದು ಭೇಟಿ ಮಾಡಿದ ಅವರು ಸಚಿವ ಸಂಪುಟದಲ್ಲಿ 3 ವರ್ಷಗಳ ಕಾಲ ಸಚಿವೆಯಾಗಿ ರಾಜ್ಯದ ಸೇವೆ ಮಾಡಲು ಅವಕಾಶ ಕಲ್ಪಿಸಿಕೊಟ್ಟಿದ್ದಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ. ಇದನ್ನೂ ಓದಿ: ಡಿಕೆಶಿ ಕಣಕಣದಲ್ಲೂ ಅಜ್ಜಯ್ಯ ? ಯಾರು ಈ ಆರಾಧ್ಯದೈವ? ಇಷ್ಟೊಂದು ಬಲವಾಗಿ ನಂಬಲು ಕಾರಣವೇನು?

ಶೋಷಿತರ, ಹಿಂದುಳಿದವರ ಹಾಗೂ ಬಡವರ ಧ್ವನಿಯಾಗಿ ನಿಂತು, ಜನಪರ ಆಡಳಿತ ನೀಡಿದ ಹೆಗ್ಗಳಿಕೆ ತಮ್ಮದು. ನಿಮ್ಮ ದೂರದೃಷ್ಟಿಯ ಯೋಜನೆಗಳು, ಸಾಮಾಜಿಕ ನ್ಯಾಯದ ಬದ್ಧತೆ ಮತ್ತು ಆಡಳಿತ ವೈಖರಿ ನಮಗೆಲ್ಲರಿಗೂ ಸದಾ ದಾರಿದೀಪ. ನಿಮ್ಮ ಮಾರ್ಗದರ್ಶನದಲ್ಲಿ ಜನಸೇವೆ ಮಾಡುವ ಭಾಗ್ಯ ಸಿಕ್ಕಿದ್ದು ನನ್ನ ಪುಣ್ಯ ಎಂದಿದ್ದಾರೆ.

ನಿಮ್ಮ ಅನುಭವದ ನಾಯಕತ್ವ ಹಾಗೂ ಆಶೀರ್ವಾದ ಎಂದಿನಂತೆ ನಮ್ಮ ಮೇಲಿರಲಿ ಎಂದು ವಿನಂತಿಸಿದ್ದಾರೆ. ಈ ವೇಳೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಉಪಸ್ಥಿತರಿದ್ದರು.

## ಸಿಎಂ ಆದ ಬೆನ್ನಲ್ಲೇ ಕುಟುಂಬ ಸಮೇತರಾಗಿ ಅಜ್ಜಯ್ಯನ ಆಶೀರ್ವಾದ ಪಡೆದ ಡಿಕೆಶಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಿದ ಬೆನ್ನಲ್ಲೇ ಡಿ.ಕೆ ಶಿವಕುಮಾರ್ ಅವರು ನಾಗರಭಾವಿಯಲ್ಲಿರುವ ಅಜ್ಜಯ್ಯನ ಶಾಖಾ ಮಠಕ್ಕೆ ಕುಟುಂಬ ಸಮೇತರಾಗಿ ಭೇಟಿ ನೀಡಿದ್ದರು.

ಸತತ 2:15 ಗಂಟೆ ಅಜ್ಜಯ್ಯನ ಜೊತೆ ಮಾತುಕತೆ ನಡೆಸಿದರು. ಮುಂದಿನ ರಾಜಕೀಯ ನಡೆ, ಆಡಳಿತ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಮಾತುಕತೆ ನಡೆಸಿದರು. ಬಳಿಕ ಅಜ್ಜಯ್ಯನ ಆಶೀರ್ವಾದ ಪಡೆದು ತೆರಳಿದರು.

ಕರ್ನಾಟಕದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ ಶಿವಕುಮಾರ್ ಅವರು ಬುಧವಾರ ಪ್ರಮಾಣ ವಚನ ಸ್ವೀಕರಿಸಿದರು. ತಳಮಟ್ಟದ ಹೋರಾಟದಿಂದ ಪಕ್ಷವನ್ನು ಕಟ್ಟಿ ಬೆಳೆಸಿದ ಕನಕಪುರ ಬಂಡೆ ಡಿ.ಕೆ. ಶಿವಕುಮಾರ್ ಪ್ರಮಾಣವಚನ ಸ್ವೀಕರಿಸುವ ಮೊದಲು ವೇದಿಕೆಯಲ್ಲಿ ಡಿಕೆ ಶಿವಕುಮಾರ್ ನೆಲಕ್ಕೆ ಅಡ್ಡ ಬಿದ್ದು ನಮಸ್ಕರಿಸಿದರು. ಬಳಿಕ ಅಜ್ಜಯ್ಯನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ್ದರು

## ಮಾಜಿ ಎಂಎಲ್‌ಸಿ ಕಿಡ್ನ್ಯಾಪ್ ಕೇಸ್ 3 ಕೋಟಿ ಹಣಕ್ಕೆ ಬೇಡಿಕೆಯಿಟ್ಟಿದ್ದ ನಾಲ್ವರು ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಮಾಜಿ ಸದಸ್ಯ ದಯಾನಂದ ರೆಡ್ಡಿ ಅವರನ್ನು ಅಪಹರಿಸಿ 3 ಕೋಟಿ ಹಣಕ್ಕೆ ಬೇಡಿಕೆ ಇಟ್ಟಿದ್ದ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೇರಳ ಮೂಲದ ಪ್ರವೀಣ್, ರೋಮಿಯೋ ಮಾರ್ಟಿನ್, ಅಶಿಕ್ ಮತ್ತು ಆದರ್ಶ್ ಎಂಬ ನಾಲ್ವರು ಆರೋಪಿಗಳನ್ನು ಅರೆಸ್ಟ್ ಮಾಡಿದ್ದಾರೆ. ಇದನ್ನೂ ಓದಿ: ಆನೇಕಲ್। ಮಾಜಿ ಎಂಎಲ್‌ಸಿ ಕಿಡ್ನ್ಯಾಪ್ ಮಾಡಿ 3 ಕೋಟಿ ಹಣಕ್ಕೆ ಬೇಡಿಕೆ ಇಟ್ಟಿದ್ದ ಆರೋಪಿಗಳು

ಈ ಸಂಬಂಧ ಅತ್ತಿಬೆಲೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಬಳಿಕ ಪ್ರಕರಣವನ್ನು ಸೂರ್ಯನಗರ ಪೊಲೀಸ್ ಠಾಣೆಗೆ ವರ್ಗಾಯಿಸಲಾಗಿತ್ತು. ತನಿಖೆ ನಡೆಸಿದ ಪೊಲೀಸರಿಗೆ ಕಿಡ್ನಾಪ್ ಮಾಡಿ ಕರೆದೊಯ್ಯುತ್ತಿರುವ ಸಿಸಿಟಿವಿ ದೃಶ್ಯ ಲಭ್ಯವಾಗಿದೆ. ಸದ್ಯ ಪೊಲೀಸರು ನಾಲ್ವರನ್ನು ಆರೋಪಿಗಳನ್ನು ಬಂಧಿಸಿ, ಕಿಡ್ನಾಪ್‌ಗೆ ಬಳಸಿದ್ದ ಕಾರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಸದ್ಯ ಆರೋಪಿಗಳ ವಿಚಾರಣೆ ನಡೆಯುತ್ತಿದೆ.

### ನಿಯಮ ಉಲ್ಲಂಘಿಸಿದ ಕಾಂಪೌಂಡ್ ಗೋಡೆಗಳ ವಿರುದ್ಧ ಕಠಿಣ ಕ್ರಮಕ್ಕೆ ಮುಂದು..! ಸಭೆಯಲ್ಲಿ ಸಮಗ್ರ ರಸ್ತೆ ಅಭಿವೃದ್ಧಿ ಕಾಮಗಾರಿಗಳು, ಮಳೆನೀರು ಚರಂಡಿಗಳ ಹೂಳೆತ್ತುವಿಕೆ, ಜಂಕ್ಷನ್ ಸುಧಾರಣಾ ಯೋಜನೆಗಳು

# ರಸ್ತೆ ಪುನಃಸ್ಥಾಪನೆ

• ಉದಯವಾಹಿನಿ, ಬೆಂಗಳೂರು

ನಿಯಮಗಳನ್ನು ಉಲ್ಲಂಘಿಸಿ ನಿರ್ಮಿಸಲಾದ ಹಾಗೂ ಸಾರ್ವಜನಿಕ ಸುರಕ್ಷತೆಗೆ ಧಕ್ಕೆ ತರುವಂತಹ ಕಾಂಪೌಂಡ್ ಗೋಡೆಗಳು ಮತ್ತು ಅನಧಿಕೃತ ಕಟ್ಟಡಗಳ ವಿರುದ್ಧ ತಕ್ಷಣವೇ ನೋಟಿಸ್ ಜಾರಿ ಮಾಡಿ, ಕಠಿಣ ಕ್ರಮ ಕೈಗೊಳ್ಳುವಂತೆ ಬೆಂಗಳೂರು ಪೂರ್ವ ನಗರ ಪಾಲಿಕೆ ಆಯುಕ್ತರಾದ ಡಿ.ಎಸ್. ರಮೇಶ್ ಅವರು ಅಧಿಕಾರಿಗಳಿಗೆ ಖಡಕ್ ನಿರ್ದೇಶನ ನೀಡಿದ್ದಾರೆ.

ವಿವಿಧ ಅಭಿವೃದ್ಧಿ ಕಾಮಗಾರಿಗಳು ಮತ್ತು ಎಂಜಿನಿಯರಿಂಗ್ ಕಾರ್ಯಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ನಿಯಮ ಪಾಲಿಸದ ಕಟ್ಟಡ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಸಮಗ್ರ ರಸ್ತೆ ಅಭಿವೃದ್ಧಿ ಕಾಮಗಾರಿಗಳು, ಮಳೆನೀರು ಚರಂಡಿಗಳ ಹೂಳೆತ್ತುವಿಕೆ, ಜಂಕ್ಷನ್ ಸುಧಾರಣಾ ಯೋಜನೆಗಳು, ರಸ್ತೆ ಪುನಃಸ್ಥಾಪನೆ, ಕಟ್ಟಡ ಸುರಕ್ಷತಾ ಕ್ರಮಗಳು, ಸಹಾಯ ದೂರುಗಳ ವಿಲೇವಾರಿ ಸೇರಿದಂತೆ ಹಲವು ವಿಷಯಗಳ ಪರಿಶೀಲನೆ ನಡೆಸಲಾಯಿತು.

ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ನಾಗರಿಕ ಕಾಮಗಾರಿಗಳು ಪೂರ್ಣಗೊಂಡಿರುವ ರಸ್ತೆಗಳಲ್ಲಿ ಜೂನ್ 9ರೊಳಗೆ ಡಾಂಬರೀಕರಣ ಕಾಮಗಾರಿ ಮುಗಿಸುವಂತೆ ಕಾರ್ಯನಿರ್ವಾಹಕ ಎಂಜಿನಿಯರ್‌ಗಳಿಗೆ ಸೂಚಿಸಲಾಯಿತು. ಬಾಕಿ ಉಳಿದಿರುವ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ.ರಸ್ತೆ ಸುರಕ್ಷತೆ ಹೆಚ್ಚಿಸುವ ಉದ್ದೇಶದ ಸುರಕ್ಷಾ-75 ಯೋಜನೆ ಅಡಿಯಲ್ಲಿ ಕೈಗೊಳ್ಳಲಿರುವ ಜಂಕ್ಷನ್ ಅಭಿವೃದ್ಧಿ ಕಾಮಗಾರಿಗಳ ವಿನ್ಯಾಸವನ್ನು ತ್ವರಿತವಾಗಿ ಅಂತಿಮಗೊಳಿಸಿ ಕಾಮಗಾರಿ ಆರಂಭಿಸುವಂತೆ ಮುಖ್ಯ ಎಂಜಿನಿಯರ್‌ಗೆ ಸೂಚಿಸಲಾಗಿದೆ.

ನಗರ ಸಂಚಾರ ಪೊಲೀಸರು ಗುರುತಿಸಿರುವ ನೀರು ನಿಲ್ಲುವ ಪ್ರದೇಶಗಳಿಗೆ ವಿಶೇಷ ಆದ್ಯತೆ ನೀಡಿ ಅಗತ್ಯ ಕ್ರಮಗಳನ್ನು ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಳೆಗಾಲದಲ್ಲಿ ರಸ್ತೆಗಳಲ್ಲಿ ನೀರು ನಿಲ್ಲದಂತೆ ಹಾಗೂ ವಾಹನ ಸಂಚಾರ ಸುಗಮವಾಗಿರುವಂತೆ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.


ಉದಯವಾಹಿನಿ ಚಿತ್ರ



ಮಳೆಗಾಲದ ಹಿನ್ನೆಲೆಯಲ್ಲಿ ಕಾಂಕ್ರೀಟ್ ಹಾಗೂ ಮಣ್ಣಿನ ಮಳೆನೀರು ಚರಂಡಿಗಳ ಹೂಳೆತ್ತುವಿಕೆ ಮತ್ತು ನಿರ್ವಹಣಾ ಕಾರ್ಯಗಳನ್ನು ತುರ್ತಾಗಿ ಕೈಗೊಳ್ಳುವಂತೆ ಆಯುಕ್ತರು ಆದೇಶಿಸಿದ್ದಾರೆ.

**ಪಾಲಿಸದ ಕಟ್ಟಡ ಮಾಲೀಕರ ವಿರುದ್ಧ ಕ್ರಮ**

### ನೀರು ಸರಾಗವಾಗಿ ಹರಿಯುವಂತೆ ಕ್ರಮ

ಗುಂಡಿ ಬಿದ್ದಿರುವ ರಸ್ತೆಗಳನ್ನು ದುರಸ್ತಿ ಮಾಡಲು ಸಮಗ್ರ ಕಾರ್ಯಯೋಜನೆ ರೂಪಿಸುವಂತೆ ಆಯುಕ್ತರು ಸೂಚಿಸಿದ್ದು, ಕಾಮಗಾರಿಗಳನ್ನು ಶೀಘ್ರ ಆರಂಭಿಸಲು ಅಗತ್ಯ ಟೆಂಡರ್ ಪ್ರಕ್ರಿಯೆಯನ್ನು ತಕ್ಷಣವೇ ಆರಂಭಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಚರಂಡಿಗಳಲ್ಲಿ ಸಂಗ್ರಹವಾಗಿರುವ ಹೂಳು, ಕಸ, ಪ್ಲಾಸ್ಟಿಕ್ ತ್ಯಾಜ್ಯ ತೆರವುಗೊಳಿಸಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದ್ದಾರೆ.

## ರಾಜ್ಯದ ವಯಸ್ಕರಲ್ಲಿ ರಕ್ತದಲ್ಲಿನ ಸಕ್ಕರೆ ಮಟ್ಟದಲ್ಲಿ ಏರಿಕೆ, ಬಿಪಿ ಕೂಡ ಹೈ: ಎನ್‌ಎಚ್‌ಎಫ್ - 6 ವರದಿ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕರ್ನಾಟಕದಲ್ಲಿ ವಯಸ್ಕರಲ್ಲಿ ಸಾಂಕ್ರಾಮಿಕವಲ್ಲದ ರೋಗಗಳ ಹೆಚ್ಚಳವಾಗಿದೆ. ಓಈಊಖ-5 (201921)ಕ್ಕೆ ಹೋಲಿಸಿದರೆ, ರಾಜ್ಯದಲ್ಲಿ ಮಹಿಳೆಯರು ಮತ್ತು ಪುರುಷರಿಬ್ಬರಲ್ಲೂ ಅಧಿಕ ರಕ್ತದೊತ್ತಡ ಮತ್ತು ಅತಿ ಹೆಚ್ಚಿನ ರಕ್ತದ ಸಕ್ಕರೆ ಮಟ್ಟದಲ್ಲಿ ತೀವ್ರ ಏರಿಕೆ ಕಂಡಿದೆ. ಇದು ಹರಡುವಿಕೆಯಲ್ಲಿ ಬಹುತೇಕ ದ್ವಿಗುಣಗೊಂಡಿದೆ ಎಂದು ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಯ ಆರನೇ ಆವೃತ್ತಿ ವರದಿ ತಿಳಿಸಿದೆ.ಅಧಿಕ ರಕ್ತದೊತ್ತಡದ ಕಾಣಿಸಿರುವುದು ಮಿಶ್ರ ಫಲಿತಾಂಶಗಳನ್ನು ತೋರಿಸುತ್ತವೆ. ಸೌಮ್ಯ ಮತ್ತು ತೀವ್ರತರವಾದ ಪ್ರಕರಣಗಳು ಸ್ವಲ್ಪ ಕಡಿಮೆಯಾಗಿದ್ದರೂ, ಒಟ್ಟಾರೆಯಾಗಿ ಹೆಚ್ಚಿದ ರಕ್ತದೊತ್ತಡವು ನಿರಂತರವಾಗಿ ಹೆಚ್ಚುತ್ತಲೇ ಇದೆ. ಇದು ರಾಷ್ಟ್ರೀಯ ಸರಾಸರಿಯನ್ನು ಮೀರಿದೆ. ಈ ವರದಿಯು ಒಟ್ಟಾರೆಯಾಗಿ ಕರ್ನಾಟಕದ ಜೀವನಶೈಲಿ ಸಂಬಂಧಿತ ಆರೋಗ್ಯ ಅಪಾಯಗಳ ಹೆಚ್ಚುತ್ತಿರುವ ಹೊರೆಯನ್ನು ಒತ್ತಿ ಹೇಳುತ್ತವೆ. ತಡೆಗಟ್ಟುವಿಕೆ ಹಾಗೂ ನಿರ್ವಹಣಾ ತಂತ್ರಗಳಿಗೆ ತುರ್ತು ಗಮನವನ್ನು ಕೋರುತ್ತವೆ.

ಕರ್ನಾಟಕದಲ್ಲಿ 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ವಯಸ್ಕರಲ್ಲಿ ಅತಿ ಹೆಚ್ಚು ರಕ್ತದ ಸಕ್ಕರೆ ಮಟ್ಟ ಹೊಂದಿರುವವರು ಮಹಿಳೆಯರಲ್ಲಿ 12.4% ಮತ್ತು ಪುರುಷರಲ್ಲಿ 14.8% ಇದೆ.

ಹೆಚ್ಚಿನ ಅಥವಾ ಅತಿ ಹೆಚ್ಚು ರಕ್ತದ ಸಕ್ಕರೆ ಮಟ್ಟವನ್ನು ಹೊಂದಿರುವವರು ಅಥವಾ ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಔಷಧ ತೆಗೆದುಕೊಳ್ಳುತ್ತಿರುವವರು ಎಂದು ಪರಿಗಣಿಸಿದಾಗ ಈ ಅಂಕಿ - ಅಂಶಗಳು ಮಹಿಳೆಯರಿಗೆ 22.3% ಹಾಗೂ ಪುರುಷರಿಗೆ 26.1% ಇರುವುದು ಕಂಡುಬಂದಿದೆ. ಭಾರತದ ರಾಷ್ಟ್ರೀಯ ಸರಾಸರಿಗೆ ಹೋಲಿಸಿದರೆ, ಕರ್ನಾಟಕದಲ್ಲಿ 15 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ವಯಸ್ಸಿನವರಲ್ಲಿ ರಕ್ತದಲ್ಲಿನ ಸಕ್ಕರೆ ಪ್ರಮಾಣ ನಿರಂತರವಾಗಿ ಹೆಚ್ಚುತ್ತಿದೆ.


ಮಹಿಳೆಯರು: ಅತಿ ಹೆಚ್ಚು ರಕ್ತದ ಸಕ್ಕರೆ ಹರಡುವಿಕೆಯು 6.8% ರಿಂದ 12.4% ರಷ್ಟಿದೆ. ಅಧಿಕ ಅಥವಾ ಅತಿ ಹೆಚ್ಚಿನ ಮಟ್ಟಗಳು 14.0% ರಿಂದ 22.3% ರಷ್ಟಿದೆ.

**ಪುರುಷರು:** ಅತಿ ಹೆಚ್ಚು ರಕ್ತದ ಸಕ್ಕರೆ ಹರಡುವಿಕೆಯು 7.6% ರಿಂದ 14.8% ರಷ್ಟಿದೆ. ಅಧಿಕ ಅಥವಾ ಅತಿ ಹೆಚ್ಚಿನ ಮಟ್ಟಗಳು 15.6% ರಿಂದ 26.1% ರಷ್ಟಿದೆ.

# ಆದಷ್ಟು ಬೇಗ ಜಿಬಿಎ ಚುನಾವಣೆ ನಡೆಸಿ: ಹೊಸ ಸರ್ಕಾರಕ್ಕೆ ಸಿ. ನಾರಾಯಣ ಸ್ವಾಮಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಬಹುಕಾಲದಿಂದ ಬಾಕಿ ಉಳಿದಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣೆಗಳನ್ನು ಆದಷ್ಟು ಬೇಗ ನಡೆಸುವಂತೆ ಐದನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಮತ್ತು ಮಾಜಿ ಸಂಸತ್ ಸದಸ್ಯ ಡಾ. ಸಿ. ನಾರಾಯಣಸ್ವಾಮಿ ಹೊಸದಾಗಿ ರಚನೆಯಾದ ರಾಜ್ಯ ಸಚಿವ ಸಂಪುಟವನ್ನು ಒತ್ತಾಯಿಸಿದ್ದಾರೆ.ಚುನಾವಣೆ



ಉದಯವಾಹಿನಿ ಚಿತ್ರ

ವಿಳಂಬದಿಂದಾಗಿ ಬೆಂಗಳೂರಿಗೆ ಸುಮಾರು 10,000 ಕೋಟಿ ರೂ. ಕೇಂದ್ರ ಹಣಕಾಸು ನೆರವು ಸಿಗುತ್ತಿಲ್ಲ ಎಂದು ಹೇಳಿದರು. ಬೆಂಗಳೂರು ನಗರ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆಯ (ಐಐಪಿಎ) ಕರ್ನಾಟಕ ಪ್ರಾದೇಶಿಕ ಶಾಖೆ ಆಯೋಜಿಸಿದ್ದ ಸ್ಥಳೀಯ ಸಂಸ್ಥೆಗಳಿಗೆ ನಿಧಿಯ ವಿಕೇಂದ್ರೀಕರಣ - ಐದನೇ ಕರ್ನಾಟಕ ರಾಜ್ಯ ಹಣಕಾಸು ಆಯೋಗದ ವರದಿ ಎಂಬ ವಿಷಯದ ಕುರಿತು ಪ್ರಮುಖ ಭಾಷಣ ಮಾಡಿದರು.ರಾಜ್ಯದ ಹೊಸ ಮುಖ್ಯಮಂತ್ರಿಗಳು ಈ ವಿಷಯಕ್ಕೆ ಆದ್ಯತೆ ನೀಡಬೇಕು ಮತ್ತು ಕೇಂದ್ರದಿಂದ ಬರಬೇಕಾದ ಅನುದಾನ ಪಡೆಯಬೇಕು ಎಂದು ಅವರು ಮನವಿ ಮಾಡಿದರು.1993 ರಲ್ಲಿ ಜಾರಿಗೆ ತರಲಾದ 73 ನೇ ಮತ್ತು 74 ನೇ ಸಾಂವಿಧಾನಿಕ ತಿದ್ದುಪಡಿಗಳು ಸ್ಥಳೀಯ ಸಂಸ್ಥೆಗಳಿಗೆ ಸಬಲೀಕರಣ ಮತ್ತು ಅಧಿಕಾರದ ವಿಕೇಂದ್ರೀಕರಣದ ಹೊಸ ಯುಗಕ್ಕೆ

## ಬಿಕೆ ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷರಾಗಿದ್ದು ತುಂಬಾ ಒಳ್ಳೆಯದು, ನನಗೂ ಸಚಿವ ಸ್ಥಾನ ಸಿಗುವ ಭರವಸೆಯಿದೆ; ಮಾಜಿ ಸಚಿವ ಸಂತೋಷ್ ಲಾಡ್

• ಉದಯವಾಹಿನಿ, ಬೆಂಗಳೂರು

ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ತಮ್ಮ ಸೇರ್ಪಡೆಯ ಬಗ್ಗೆ ಗುರುವಾರ ವಿಶ್ವಾಸ ವ್ಯಕ್ತಪಡಿಸಿದ ಮಾಜಿ ಸಚಿವ ಸಂತೋಷ್ ಲಾಡ್, ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವು 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರುವ ಗುರಿಯನ್ನು ಹೊಂದಿದೆ ಎಂದು ಹೇಳಿದರು.

ರಾಜ್ಯ ಘಟಕದೊಳಗಿನ ರಾಜಕೀಯ ಬೆಳವಣಿಗೆಗಳ ಕುರಿತು ಮಾತನಾಡಿದ ಲಾಡ್, ಕೆಪಿಸಿಸಿಯ ಹೊಸ ಅಧ್ಯಕ್ಷರಾಗಿ ಬಿಕೆ ಹರಿಪ್ರಸಾದ್ ಅವರ ನೇಮಕವನ್ನು ಸ್ವಾಗತಿಸಿದರು.

ನಾಯಕತ್ವ ಬದಲಾವಣೆಯು ಸಂಘಟನೆಯನ್ನು ಬಲಪಡಿಸುತ್ತದೆ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಮುಂದಿನ ಪಟ್ಟಿಯಲ್ಲಿ ಸಂಪುಟಕ್ಕೆ ಸೇರ್ಪಡೆಗೊಳ್ಳುವ ಭರವಸೆ ನನಗಿದೆ. ಬಿಕೆ ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷರಾಗಿರುವುದು ನಮಗೆ ತುಂಬಾ ಒಳ್ಳೆಯದು. ಎಲ್ಲರ ಸಂಯೋಜನೆಯೊಂದಿಗೆ, 2028ರಲ್ಲಿ ಉತ್ತಮ ಸರ್ಕಾರವನ್ನು ರಚಿಸಲು ಮತ್ತು ಮತ್ತೆ ಅಧಿಕಾರಕ್ಕೆ ಬರಲು ನಾವು ಎದುರು ನೋಡುತ್ತಿದ್ದೇವೆ' ಎಂದು ಹೇಳಿದರು.

ಡಿಕೆ ಶಿವಕುಮಾರ್ ಮತ್ತು ಜಿ ಪರಮೇಶ್ವರ ಅವರು ಸಿಎಂ ಮತ್ತು ಡಿಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ನಾನು ಅವರಿಗೆ ಶುಭ ಹಾರೈಸುತ್ತೇನೆ... ನಾನು ಬಿಕೆ ಹರಿಪ್ರಸಾದ್ ಅವರನ್ನೂ ಭೇಟಿಯಾಗಲಿದ್ದೇನೆ. ಅವರು


ಉದಯವಾಹಿನಿ ಚಿತ್ರ

ಕರ್ನಾಟಕದ ದಿಗ್ಗಜರು... ಅದಕ್ಕಾಗಿಯೇ ಪಕ್ಷವು ಅವರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿ ಪರಿಗಣಿಸಿದೆ' ಎಂದರು. ಕರ್ನಾಟಕದಲ್ಲಿ ಸಂಭಾವ್ಯ ಸಚಿವ ಸಂಪುಟ ಪುನರ್ ರಚನೆ ಬಗ್ಗೆ ನಡೆಯುತ್ತಿರುವ ಊಹಾಪೋಹಗಳ ಮಧ್ಯೆ ಲಾಡ್ ಅವರ ಹೇಳಿಕೆಗಳು ಬಂದಿವೆ.ಉಳಿದ ಎರಡು ತಿಂಗಳುಗಳಲ್ಲಿ ಮ್ಯಾಪಿಂಗ್, ಅನ್-ಮ್ಯಾಪಿಂಗ್, ರೀ-ಮ್ಯಾಪಿಂಗ್ ಇತ್ಯಾದಿ ಪ್ರಕ್ರಿಯೆಗಳಿಗೆ ಪ್ರಾಮಾಣಿಕ ಪ್ರಯತ್ನದ ಅಗತ್ಯವಿದೆ.

ರಾಜಕೀಯ ಪಕ್ಷಗಳಿಂದ ನೇಮಿಸಲ್ಪಟ್ಟ ಬೂತ್ ಮಟ್ಟದ ಏಜೆಂಟ್‌ಗಳನ್ನು ಬಿಎಲ್‌ಒಗಳು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು, ಅವರ ಸಹಾಯವನ್ನು ಪಡೆಯಬೇಕು ಮತ್ತು ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕು. ಬಿಎಲ್ ಒಗಳು, ಮೇಲ್ವಿಚಾರಕರು, ಇಆರ್‌ಒಗಳು ಮತ್ತು ಎಇಆರ್‌ಒಗಳು ಮತಗಟ್ಟೆಗಳಲ್ಲಿ ಇಂಟರ್ನೆಟ್‌ನಂತಹ ಸೌಲಭ್ಯಗಳನ್ನು ವ್ಯವಸ್ಥೆ ಮಾಡಬೇಕು ಎಂದು ಅವರು ಹೇಳಿದರು.

## ಪಾರದರ್ಶಕವಾಗಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಡಿಕೆಶಿ ಸೂಚನೆ

• ಉದಯವಾಹಿನಿ, ಬೆಂಗಳೂರು

ನೂತನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಿದ್ದಾರೆ. ಇಂದು ವಿಧಾನಸೌಧದಲ್ಲಿ ರಾಜ್ಯದ ಹಿರಿಯ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳ ಮಹತ್ವದ ಜಂಟಿ ಸಭೆ ನಡೆಸಿದರು. ಸುಗಮ ಆಡಳಿತಕ್ಕೆ ಸರ್ಕಾರಿ ಅಧಿಕಾರಿಗಳೇ ಬೆನ್ನೆಲುಬು. ಯಾವುದೇ ಕಾರಣಕ್ಕೂ ಯಾರ ಒತ್ತಡಕ್ಕೂ ಮಣಿಯದೇ ಕೆಲಸ ಮಾಡುವಂತೆ ಸೂಚಿಸಿದರು.

ರಾಜ್ಯದಲ್ಲಿ ಯಾವುದೇ ರೀತಿಯ ಕಾನೂನುಬಾಹಿರ ಚಟುವಟಿಕೆಗಳಿಗೆ ಆಸ್ಪದ ಕೊಡಬಾರದು. ಕಾನೂನು ಸುವ್ಯವಸ್ಥೆ ಕಾಪಾಡುವಂತೆ ಪೊಲೀಸ್ ಅಧಿಕಾರಿಗಳಿಗೆ ಸಿಎಂ ಡಿಕೆ ಶಿವಕುಮಾರ್ ಕಠಿಣ ಸೂಚನೆ ನೀಡಿದರು. ಜೂಜು ಮತ್ತು ಡ್ರಗ್ಸ್ ದಂಧೆಯನ್ನು ಬೇರುಸಹಿತ ಕಿತ್ತೊಗೆಯಬೇಕು. ರೌಡಿಗಳ ಹೆಡೆಮುರಿ ಕಟ್ಟಿ ಸಾರ್ವಜನಿಕರ ಶಾಂತಿ ಮತ್ತು ನೆಮ್ಮದಿಗೆ ಭಂಗ


ಉದಯವಾಹಿನಿ ಚಿತ್ರ

ತರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ. ಯಾವುದೇ ರಾಜಕೀಯ ಅಥವಾ ಬಾಹ್ಯ ಒತ್ತಡಗಳಿಗೆ ಮಣಿಯದೆ ಮುಕ್ತವಾಗಿ ಕೆಲಸ ಮಾಡಿ ಎಂದು ಅಧಿಕಾರಿಗಳಿಗೆ ಮುಕ್ತ ಸ್ವಾತಂತ್ರ್ಯ ನೀಡಿದರು.

ಇದೇ ವೇಳೆ, ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಯಾವುದೇ ರಾಜಕೀಯ ಪ್ರಭಾವ ಅಥವಾ ಒತ್ತಡಕ್ಕೆ ಮಣಿಯದೆ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸುವಂತೆ ಡಿಕೆಶಿ ಸೂಚನೆ ನೀಡಿದರು. ಎಲ್ಲಾ ಇಲಾಖೆಯಲ್ಲಿನ ಬಾಕಿ ಕೆಲಸಗಳನ್ನು ಆದಷ್ಟು ಬೇಗ ಮುಗಿಸಿ ನನಗೆ 25 ದಿನದಲ್ಲಿ ವರದಿ ಕೊಡಬೇಕು ಎಂದರು. ರಾಜ್ಯದಲ್ಲಿ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ ದುರ್ಬಳಕೆಯಾಗುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಇದಕ್ಕೆ ತಕ್ಷಣವೇ ಬ್ರೇಕ್ ಹಾಕಿ, ಆಡಳಿತದಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು' ಎಂದು ಗುಡುಗಿದರು. ಪ್ರತಿಯೊಬ್ಬ ಅಧಿಕಾರಿಯೂ ನಿಮ್ಮ ಆತ್ಮಸಾಕ್ಷಿ ಒಪ್ಪುವ ಹಾಗೆ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದರು.

ಸರ್ಕಾರದ ಸುಗಮ ಆಡಳಿತಕ್ಕೆ ಅಧಿಕಾರಿಗಳೇ ಬೆನ್ನೆಲುಬು. ಸಾರ್ವಜನಿಕರ ಕಷ್ಟಗಳಿಗೆ ತಕ್ಷಣ ಸ್ಪಂದಿಸಿ, ಸರ್ಕಾರದ ಜನಕಲ್ಯಾಣ ಯೋಜನೆಗಳನ್ನು ಸಮರ್ಥವಾಗಿ ಜನರಿಗೆ ತಲುಪಿಸಿ.

ಅಭಿವೃದ್ಧಿಯ ಹಾದಿಗೆ ಮೆಟ್ಟಿಲಾಗಿ. ಜನ ಮೆಚ್ಚುವ ಹಾಗೇ ಕೆಲಸ ಮಾಡಿ. ಸರ್ಕಾರಕ್ಕೂ ಒಳ್ಳೆಯ ಹೆಸರು ತನ್ನಿ ಎಂದು ಅಧಿಕಾರಿಗಳಿಗೆ ಸೂಚಿಸಿದರು

## 9 ಮಂದಿ ಕಾನ್‌ಸ್ಟೇಬಲ್‌ಗಳಿಗೆ ವರ್ಗಾವಣೆ ಭಾಗ್ಯ ಕಾನ್‌ಸ್ಟೇಬಲ್‌ಗಳಿಗೆ ವರ್ಗಾವಣೆ ಭಾಗ್ಯ

• ಉದಯವಾಹಿನಿ, ಬೆಂಗಳೂರು

ರಾಜ್ಯ ಪೊಲೀಸ್ ಇಲಾಖೆಯು ಪತಿ-ಪತ್ನಿ ಪ್ರಕರಣದಡಿ 9 ಮಂದಿ ಸಶಸ್ತ್ರ ಮೀಸಲು ಪಡೆಯ ಕಾನ್‌ಸ್ಟೇಬಲ್ ಗಳನ್ನು ಅಂತರ್ ಜಿಲ್ಲೆಗಳಿಗೆ ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.ಅಂತರ್ ಜಿಲ್ಲಾ ಅಥವಾ ಘಟಕ ವರ್ಗಾವಣೆ ಕುರಿತಂತೆ ಇಲಾಖೆಯಿಂದ ರೂಪಿಸಲಾಗಿರುವ ಅಧಿಕೃತ ಪೋರ್ಟಲ್‌ನಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳನ್ನ ಪರಿಶೀಲಿಸಿ ಸ್ವಂತ ಕೋರಿಕೆ ಮೇರೆಗೆ ಸೇವಾ ಜೇಷ್ಠತೆ (ಬಿಟ್ಟುಕೊಡುವ ಷರತ್ತಿಗೆ ಒಳಪಟ್ಟು ಪತಿ-ಪತ್ನಿ ಪ್ರಕರಣದಡಿ 7 ವರ್ಷಕ್ಕಿಂತ ಬೆಂಗಳೂರು ಅಥವಾ ಅನ್ಯ ಜಿಲ್ಲೆಗಳಲ್ಲಿ ಒಂದೇ ಕೆಲಸ ಮಾಡಿದ ಸಶಸ್ತ್ರ ಮೀಸಲು ಪಡೆಯ 9 ಮಂದಿ ಕಾನ್ ಸ್ಟೇಬಲ್?ಗಳನ್ನ ವರ್ಗಾವಣೆಗೊಳಿಸಿದೆ.ಸಿ.ಎಸ್. ಶಿವಕುಮಾರಯ್ಯ, ಇಮ್ರಾನ್ ಪಟೇಲ್, ರಾಘವೇಂದ್ರ, ಹನುಮಂತರಾವ್, ಬ್ರಹ್ಮಾನಂದ ಕೋಟ್ರಪ್ಪ, ಪ್ರಸನ್ನ ಕುಮಾರ್ ಕೆ. ತಿಪ್ಪೇಶ್, ಆನಂದ ಹಾಗೂ ರಾಜು ವರ್ಗಾವಣೆಯಾದವರು. ವರ್ಗಾವಣೆ ಪೂರ್ವದಲ್ಲಿ ವಿವಾಹ ನೋಂದಣಿ ಪ್ರಮಾಣಪತ್ರ ಮತ್ತು ಸೇವಾ ದೃಢೀಕರಣ ಪತ್ರ, ಮೂಲ ಪ್ರತಿಗಳನ್ನ ಪಡೆದು ಪತಿ-ಪತ್ನಿ ಇಬ್ಬರು ಸರ್ಕಾರಿ ನೌಕರರಾಗಿರುವ ಪರಿಶೀಲಿಸಬೇಕು.

# ಹಳೇ ಪಿಕ್ಚರ್, ಹೊಸ ಪೋಸ್ಟರ್ ನಂತಿದೆ ಡಿಕೆಶಿ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ರಚನೆಯಾದ ಹೊಸ ಸರ್ಕಾರ, ರಾಹುಲ್ ಗಾಂಧಿ ಮತ್ತು ಸಿದ್ದರಾಮಯ್ಯನವರ ರಿಮೋಟ್ ಕಂಟ್ರೋಲ್‌ನಿಂದ ನಡೆಯಲಿದೆ. ಇದರಿಂದ ಜನರಿಗೆ ಏನೂ ಹೊಸತು ಸಿಕ್ಕಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕಿಸಿದರು. ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾಗಿರುವುದು ಹಳೆ ಸಿನಿಮಾದ ಪೋಸ್ಟರ್ ಬದಲಾದಂತಿದೆ. ಮುಖ್ಯಮಂತ್ರಿ ನಿವಾಸದ ಮುಂಭಾಗದ ಫಲಕದಲ್ಲಿ ಹೆಸರು ಬದಲಾಗಿದೆಯೇ ಹೊರತು ಜನರ ಕಷ್ಟಗಳು ನೀಗಿಲ್ಲ. ರಾಜ್ಯಕ್ಕೆ ಹೊಸ ಸಚಿವರು ಸಿಗುತ್ತಾರೆ ಎಂಬ ನಿರೀಕ್ಷೆ ಇದ್ದರೂ, ಹೊಸ ಮುಖಗಳು ಕಂಡಿಲ್ಲ. ಸಿದ್ದರಾಮಯ್ಯನವರ ಮಗ ಯತೀಂದ್ರ ಸಚಿವರಾಗಿ ಬಂದಿದ್ದಾರೆಯೇ ಹೊರತು ಹೊಸದೇನೂ ಇಲ್ಲ ಎಂದರು.

ಮಳೆಯಿಂದಾಗಿ ಬೆಳೆಹಾನಿಯಾಗಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, ಇದರಲ್ಲಿ ರಾಜ್ಯಕ್ಕೆ ಎರಡನೇ ಸ್ಥಾನ ಬಂದಿದೆ. ಐಪಿಎಲ್ ಸಂಭ್ರಮಾಚರಣೆಯಲ್ಲಿ ಹನ್ನೊಂದು ಅಮಾಯಕರ ಹತ್ಯೆಯಾಯಿತು. ಭ್ರಷ್ಟಾಚಾರದ ನೋವಿನಿಂದ ಅಧಿಕಾರಿಗಳ ಸಾವು, ಸರ್ಕಾರದ ನಿರ್ಲಕ್ಷ್ಯದಿಂದ ಬಾಣಂತಿಯರ ಸಾವು, ಮೈಕ್ರೋ ಫೈನಾನ್ಸ್ ಒತ್ತಡದಿಂದ ಜನರ ಸಾವು, ಸಂಬಳ ಸಿಗದೆ ನೌಕರರ ಸಾವು, ಆಸ್ಪತ್ರೆ ಗೋಡೆ ಕುಸಿದು ಬೀದಿ ಬದಿ ವ್ಯಾಪಾರಿಗಳ ಸಾವು, ಬೆಂಗಳೂರು ಸೇರಿದಂತೆ ಎಲ್ಲ ಕಡೆ ರಸ್ತೆಗಳಲ್ಲಿ ಗುಂಡಿಗಳ ಹಾವಳಿ ಹೀಗೆ ಅನೇಕ ಸಮಸ್ಯೆಗಳು ಇನ್ನೂ ಇದೆ. ಜನರು ಉತ್ತಮ ಆಡಳಿತ ಕೇಳಿದರೆ, ಕಾಂಗ್ರೆಸ್ ಪಕ್ಷ ಕುರ್ಚಿಯ ಬದಲಾವಣೆ ಮಾತ್ರ ಮಾಡಿದೆ ಎಂದರು. ಬೆಂಗಳೂರಿನಲ್ಲಿ ನೂರಾರು ಕಟೌಟ್‌ಗಳನ್ನು ಅಳವಡಿಸಲಾಗಿದೆ. ಫಲಕ ಹಾಕಬೇಡಿ ಎಂದು ಸಿಎಂ ಹೇಳಿದರೂ ಅವುಗಳನ್ನು


ಉದಯವಾಹಿನಿ ಚಿತ್ರ

ಅಳವಡಿಸಲಾಗಿದೆ. ಅಂದರೆ ಮುಖ್ಯಮಂತ್ರಿ ಏನೇ ಹೇಳಿದರೂ ಅದು ಅನುಷ್ಠಾನವಾಗುವುದಿಲ್ಲ ಎಂಬುದು ಸಾಬೀತಾಗಿದೆ.

ಸಂಸತ್ತಿನಲ್ಲಿ ಮಹಿಳಾ ಮೀಸಲಾತಿಯನ್ನು ಕಾಂಗ್ರೆಸ್ ವಿರೋಧಿಸಿದೆ. ನಿನ್ನೆ ನಡೆದ ಪದಗ್ರಹಣ ಸಮಾರಂಭದಲ್ಲಿ ಒಬ್ಬರೇ ಒಬ್ಬ ಮಹಿಳೆಗೆ ಅವಕಾಶ ನೀಡಿಲ್ಲ. ಕಾಂಗ್ರೆಸ್ ಮಹಿಳೆಯರಿಗೆ ಮೋಸ ಮಾಡಿದೆ ಎಂದರು.

ಕೇರಳಂದ ನೂತನ ಮುಖ್ಯಮಂತ್ರಿ ವಿ.ಡಿ.ಸತೀಶನ್ ಅವರು ತಮ್ಮ ರಾಜ್ಯದ ಆರ್ಥಿಕ ಸ್ಥಿತಿ- ಗತಿಯ ನೈಜ ಚಿತ್ರಣವನ್ನು ಜನರ ಮುಂದಿಡುವ ಉದ್ದೇಶದಿಂದ ಹಣಕಾಸು ಶ್ವೇತಪತ್ರ ಮಂಡಿಸಿರುವುದು ಸ್ವಾಗತಾರ್ಹ. ಅದೇ ಮಾದರಿಯಲ್ಲಿ ಕರ್ನಾಟಕದ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೂಡ ರಾಜ್ಯದ ಹಣಕಾಸಿನ ಸ್ಥಿತಿಗತಿಯ ಕುರಿತು ಶ್ವೇತಪತ್ರ ಮಂಡಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ. . ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕಕ್ಕೆ ಬಿಟ್ಟುಹೋಗಿರುವ ಆರ್ಥಿಕ ಬಳುವಳಿ ಏನು ಎಂಬುದನ್ನು ತಿಳಿದುಕೊಳ್ಳುವ ಹಕ್ಕು ರಾಜ್ಯದ ಜನರಿಗಿದೆ. ರಾಜ್ಯದ ಸಾಲ ಎಷ್ಟು ಹೆಚ್ಚಾಗಿದೆ ಸರ್ಕಾರದ ಖಜಾನೆಯ ನಿಜವಾದ ಸ್ಥಿತಿಗತಿ ಏನು? ಎಂದು ಪ್ರಶ್ನಿಸಿದರು.

### ಆರ್ ಅಶೋಕ್ ಲೇವಡಿ

**ಪ್ರಮಾಣವಚನದ ವೇಳೆ ಸಿಎಂ ಡಿ.ಕೆ.ಶಿವಕುಮಾರ್ ಸಂವಿಧಾನದ ಪುಸ್ತಕ ಹಿಡಿದುಕೊಂಡಿದ್ದರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಿಎಂಗೆ ಎಲ್ಲಾ ಅಧಿಕಾರ ನೀಡಿದ್ದಾರೆ. ಆದರೆ ಸಚಿವ ಸಂಪುಟದಲ್ಲಿ ಡಿ.ಕೆ.ಶಿ ಕಡೆಗಿನ ಯಾವುದೇ ಶಾಸಕರು ಇಲ್ಲ. ಅಂದರೆ ಎಲ್ಲವನ್ನೂ ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ತೀರ್ಮಾನ ಮಾಡಿದೆ. ಡಿ.ಕೆ.ಶಿ ಅವರಿಗೆ ಯಾವುದೇ ಸ್ವಾತಂತ್ರ್ಯ ಸಿಕ್ಕಿಲ್ಲ ಎಂದು ಲೇವಡಿ ಮಾಡಿದರು.**

### ಲಂಚ ಕೊಟ್ಟರೆ ಮಾತ್ರ ಸರ್ವರ್ ಕೆಲಸ

**ಬೆಂಗಳೂರಿನಲ್ಲಿ ಈಗಾಗಲೇ ಇ-ಖಾತಾ ಹೆಸರಲ್ಲಿ ದಂಧೆ ನಡೆಯುತ್ತಿದೆ. ಇದನ್ನು ಇಡೀ ರಾಜ್ಯಕ್ಕೆ ವಿಸ್ತರಣೆ ಮಾಡಿದರೆ ಇನ್ನಷ್ಟು ದಂಧೆ ನಡೆಯುತ್ತದೆ. ಸರ್ವರ್ ಡೌನ್ ಎಂದು ಹೇಳಿ ಜನರನ್ನು ವಂಚಿಸಲಾಗುತ್ತಿದೆ. ಲಂಚ ಕೊಟ್ಟರೆ ಮಾತ್ರ ಸರ್ವರ್ ಕೆಲಸ ಮಾಡುತ್ತದೆ ಎಂದು ಹರಿಹಾಯ್ದರು.**

# ಬೀನ್ಸ್ ಬೆಲೆ ಇಳಿಮುಖ; ಟೊಮೆಟೊ ಯಥಾಸ್ಥಿತಿ

• ಉದಯವಾಹಿನಿ, ಮೈಸೂರು

ಕೆಲವು ದಿನದಿಂದ ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗುತ್ತಿದ್ದು, ಮಾರುಕಟ್ಟೆಗೆ ತರಕಾರಿ ಆವಕವೂ ಹೆಚ್ಚುತ್ತಿದೆ. ಬೀನ್ಸ್ ಬೆಲೆ ಇಳಿಕೆಯತ್ತ ಮುಖ ಮಾಡಿದ್ದು, ಟೊಮೆಟೊ ಧಾರಣೆ ಯಥಾಸ್ಥಿತಿ ಕಾಯ್ದುಕೊಂಡಿದೆ. ಬೇಸಿಗೆಯಲ್ಲಿ ಶತಕದ ಗಡಿ ದಾಟಿ ಮುನ್ನಡೆದಿದ್ದ ಬೀನ್ಸ್ ಬೆಲೆಯಲ್ಲಿ ಕಳೆದೆರಡು ವಾರದಲ್ಲಿ ಕೆ.ಜಿ.ಗೆ ?40ರಷ್ಟು ಕಡಿಮೆ ಆಗಿದೆ. ಎಪಿಎಂಸಿ ಸಗಟು ದರದಲ್ಲಿ 60ರಂತೆ ಹರಾಜು ನಡೆದಿದ್ದು, ಚಿಲ್ಲರೆ ಮಾರುಕಟ್ಟೆಯಲ್ಲಿ 80ರ ಸರಾಸರಿಯಲ್ಲಿ ವ್ಯಾಪಾರವಾಗುತ್ತಿದೆ. ಸದ್ಯ ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ಉತ್ಪನ್ನ ಬರುತ್ತಿದ್ದು, ಬೆಲೆ ಇನ್ನಷ್ಟು ಇಳಿಯುವ ನಿರೀಕ್ಷೆ ಇದೆ. ಟೊಮೆಟೊ ಧಾರಣೆಯಲ್ಲಿ ಹೆಚ್ಚು ವ್ಯತ್ಯಾಸ ಆಗಿಲ್ಲ.


ಉದಯವಾಹಿನಿ ಚಿತ್ರ

ಈ ಬೇಸಿಗೆಯಲ್ಲಿ ಮಳೆ ಕೊರತೆಯಿಂದಾಗಿ ಟೊಮೆಟೊ ಬೆಳೆಗೆ ಹಾನಿಯಾಗಿದ್ದು, ಇನ್ನೂ ನಿರೀಕ್ಷಿತ ಪ್ರಮಾಣದಲ್ಲಿ ಉತ್ಪನ್ನ ಬರುತ್ತಿಲ್ಲ, ಹೀಗಾಗಿ ಬೆಲೆ ಕೊಂಚ ಏರುಮುಖವಾಗಿಯೇ ಇದೆ. ಈ ತಿಂಗಳಾಂತ್ಯಕ್ಕೆ ಬೆಲೆ ಇಳಿಯಬಹುದು ಎನ್ನುತ್ತಾರೆ ತರಕಾರಿ ವರ್ತಕರು.

ಉಳಿದಂತೆ ದಪ್ಪ ಮೆಣಸಿನಕಾಯಿ, ಶುಂಠಿ, ಬದನೆ ಸೇರಿದಂತೆ ಕೆಲವು ತರಕಾರಿಗಳ ಬೆಲೆ ಹೆಚ್ಚಳವಾಗಿದ್ದರೆ, ಬೆಂಡೆ, ತೊಂಡೆ, ಸೋರೆ, ಕುಂಬಳ, ಕೋಸು ಮೊದಲಾದವುಗಳು ಅಗ್ಗವಾಗಿವೆ. ನಿಂಬೆಹಣ್ಣು ಸೌತೆ ಬೆಲೆ ಸಹ ಇಳಿಯುತ್ತಿದೆ.

**ಸೊಪ್ಪಿನ ಬೆಲೆ ಇಳಿಮುಖ:** ಸೊಪ್ಪಿನ ಬೆಲೆಯಲ್ಲಿ ಕೊಂಚ ಇಳಿಕೆ ಆಗಿದೆ. ಕೊತ್ತಂಬರಿ ಅಗ್ಗವಾಗಿದ್ದು, ಸಣ್ಣ ಕಟ್ಟು ?10ಕ್ಕೆ 3ರಂತೆ ವ್ಯಾಪಾರ ನಡೆದಿದೆ. ಸಬ್ಬಸ್ಸಿಗೆ, ಮೆಂತ್ಯ ಒಂದಕ್ಕೆ 10, ಕೀರೆ, ಕಿಲ್ ಕೀರೆ, ದಂಟು 10ಕ್ಕೆ 3 ರಂತೆ ವ್ಯಾಪಾರವಾಗುತ್ತಿದೆ.

**ಮಾವು, ನೇರಳೆ ಘಮ:** ಮಾರುಕಟ್ಟೆಯಲ್ಲಿ ಮಾವಿನ ಘಮ ಮುಂದುವರಿದಿದ್ದು, ರಸ್ತೆ ಬದಿಯಲ್ಲಿ ಹಣ್ಣಿನ ವ್ಯಾಪಾರ ಜೋರಾಗಿದೆ. ಬಾದಾಮಿ 80-100, ರಸಪುರಿ 60-80, ಸೇಂದೂರ 40-50, ಮಲ್ಲಿಕಾ 80 ರಂತೆ ವ್ಯಾಪಾರ ನಡೆದಿದೆ. ನೇರಳೆ ದುಬಾರಿಯಾಗಿಯೇ ಮುಂದುವರಿದಿದ್ದು, ಕೆ.ಜಿ.ಗೆ 300ರ ಸರಾಸರಿಯಲ್ಲಿ ಖರೀದಿಯಾಗುತ್ತಿದೆ. ಸೇಬು, ದಾಳಿಂಬೆ ಗ್ರಾಹಕರ ಕೈಗೆ ಎಟಕುವ ದರದಲ್ಲಿಲ್ಲ. ಉಳಿದ ಹಣ್ಣುಗಳ ಬೆಲೆ ಸ್ಥಿರವಾಗಿದೆ.

# ಎಪಿಎಂಸಿ ಜಾಗ ಉಳಿಸಲು ಮುಂದಾಗುವಂತೆ ಶಾಸಕ ಸೂಚನೆ

• ಉದಯವಾಹಿನಿ,ಕೆ.ಆರ್.ಪೇಟೆ.

ಪಟ್ಟಣದ ಎಪಿಎಂಸಿಗೆ ಈ ಹಿಂದೆ ಹತ್ತಾರು ಎಕರೆ ಭೂಮಿಯನ್ನು ರೈತರು ದಾನವಾಗಿ ನೀಡಿದ್ದಾರೆ ಆದರೆ ಪ್ರಭಾವಿಗಳು ಕಾಂಪೌಂಡ್ ಒಡೆದು ಎಪಿಎಂಸಿ ಜಾಗವನ್ನು ಕಬಳಿಸಲು ಪ್ರಯತ್ನಿಸುತ್ತಿದ್ದಾರೆ ಕೂಡಲೇ ಎಪಿಎಂಸಿ ಅಧಿಕಾರಿಗಳು ಸರ್ಕಾರಿ ಜಾಗವನ್ನು ಉಳಿಸಲು ಮುಂದಾಗಬೇಕು ಎಂದು ಶಾಸಕ ಹೆಚ್.ಟಿ.ಮಂಜು ಎಪಿಎಂಸಿ ಕಾರ್ಯದರ್ಶಿಗೆ ಸೂಚನೆ ನೀಡಿದರು.

ಅವರು ಪಟ್ಟಣದ ಹೊರವಲಯದ ಚಿಕ್ಕೋನಹಳ್ಳಿ ರೇಷ್ಮೆ ತರಬೇತಿ ಕೇಂದ್ರದ ಸಭಾಂಗಣದಲ್ಲಿ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್, ಜಿಲ್ಲಾ ಪಂಚಾಯತ್ ಸಿಇಓ ನಂದಿನಿ, ಹೆಚ್ಚುವರಿ ಜಿಲ್ಲಾ ಪೊ?ಲಿಸ್ ವರಿಷ್ಠಾಧಿಕಾರಿ ತಿಮ್ಮಯ್ಯ ನೇತೃತ್ವದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಾರ್ವಜನಿಕರ ಕುಂದುಕೊರತೆ ಸಭೆ ನಡೆಸಿ ಮಾತನಾಡಿದರು.

ಹಿರಿಕಳಲೆ ಗ್ರಾಮದ ಸರ್ವೆ ನಂಬರ್ ಜಾಗದಲ್ಲಿ 50★100 ಅಳತೆಯ ಜಾಗವನ್ನು ಅಕ್ರಮವಾಗಿ ಗ್ರಾಮ ಪಂಚಾಯತ್ ಪಿಡಿಓ ಮತ್ತು ಕಾರ್ಯದರ್ಶಿಗಳು ಅಕ್ರಮವಾಗಿ ಇ-ಸ್ವತ್ತು ಮಾಡಿರುತ್ತಾರೆ.

ಈ ಬಗ್ಗೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ನೌಕರರ ವಿರುದ್ದ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ತಹಸೀಲ್ದಾರ್ ಡಾ.ಎಸ್.ಯು. ಅಶೋಕ್'ಗೆ ಸಲಹೆ ನೀಡಿದರು. ಸಿಂಧುಘಟ್ಟ ಗ್ರಾಮದಲ್ಲಿ ಸುಮಾರು 10ಸಾವಿರ ಜನಸಂಖ್ಯೆ ಇದ್ದು ತಾಲ್ಲೂಕಿನಲ್ಲಿಯೇ ಅತ್ಯಂತ ದೊಡ್ಡ ಗ್ರಾಮವಾಗಿದೆ. ಹಾಗಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಸತಿ ಯೋಜನೆ ಅಡಿಯಲ್ಲಿ ನಿವೇಶನ ಹಂಚಿಕೆ ಮಾಡಲು ಪಿಡಿಓ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಅತಿ ಶೀಘ್ರವೇ ಸರ್ಕಾರಿ ಜಾಗವನ್ನು ಗುರುತಿಸಿಕೊಡಬೇಕು ಎಂದು ಶಾಸಕರು ಸೂಚನೆ ನೀಡಿದರು. ಹಳೆ ಮುದ್ದಾಪುರ ಗ್ರಾಮದಲ್ಲಿ ಬೀಳು ಭೂಮಿಯಲ್ಲಿ ರಸ್ತೆ ನಿರ್ಮಿಸುವ ಸಂಬಂಧ ಒಂದೆರಡು ವ್ಯಕ್ತಿಗಳು ಪ್ರತಿಷ್ಠೆಗಾಗಿ ಜಗಳ ನಡೆಯುತ್ತಿದೆ.

ಹಾಗಾಗಿ ಸದರಿ ಭೂಮಿಯ ದಾಖಲೆಗಳನ್ನು ಪರಿಶೀಲನೆ ಮಾಡಿ ಬೀಳು ಭೂಮಿ ಎಂದು ಆರ್.ಟಿ.ಸಿ.ಯಲ್ಲಿ ದಾಖಲಿಸಿ ರಸ್ತೆ ನಿರ್ಮಿಸಲು ಅವಕಾಶ ನೀಡಬೇಕು ಎಂದು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಶೀಳನೆರೆ ಹೋಬಳಿಯ ಮಾದಿಗರಹೊಸಹಳ್ಳಿ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಂತೆ ಹತ್ತಾರು ಎಕರೆ ವಿಸ್ತೀರ್ಣ ಹೊಂದಿರುವ ಕೆರೆ ಇದೆ ಆದರೆ ಪಹಣಿಯಲ್ಲಿ ದಾಖಲೆ ಇರುವುದಿಲ್ಲ ಇದನ್ನು ಬಲಾಢ್ಯರು ಕಬಳಿಸುವ ಹುನ್ನಾರ ನಡೆಸುತ್ತಿದ್ದಾರೆ ಹಾಗಾಗಿ ತಕ್ಷಣವೇ ಪಹಣಿ ಕಾಲಂ 17ರಲ್ಲಿ ಕೆರೆ ಎಂದು ನಮೂಧಿಸಿ ಕೆರೆಯನ್ನು ಸರ್ವೆ ಮಾಡಿ ಹದ್ದು-ಬಸ್ತು ಮಾಡಿ ಜನಜಾನುವಾರುಗಳಿಗೆ ಕುಡಿಯುವ ನೀರಿಗೆ ಕೆರೆಯನ್ನು ಉಳಿಸಬೇಕು ಎಂದು ಶಾಸಕರು ಜಿಲ್ಲಾಡಳಿತಕ್ಕೆ ಸಲಹೆ ನೀಡಿದರು.




ಶೀಘ್ರವೇ ಸರ್ಕಾರಿ ಜಾಗವನ್ನು ಗುರುತಿಸಿ

" ಶಾಸಕರಾದ ಹೆಚ್.ಟಿ.ಮಂಜು ಅವರು ಈ ಹಿಂದೆ ನಡೆಸಿದ ಜನಸಂಪರ್ಕ ಸಭೆಯಲ್ಲಿ ಸ್ವೀಕೃತವಾದ ಅರ್ಜಿಗಳ ವಿಲೇವಾರಿ ಸರಿಯಾಗಿ ಆಗಿರುವುದಿಲ್ಲ ಕೂಡಲೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಜನಸಂಪರ್ಕ ಸಭೆಯ ಅರ್ಜಿಗಳಿಗೆ ಸೂಕ್ತ ಸ್ಪಂಧನೆ ಒದಗಿಸಬೇಕು. ನಿರ್ಲಕ್ಷ್ಯ ಮಾಡುವ ಅಧಿಕಾರಿಗಳ ವಿರುದ್ದ ಶಿಸ್ತುಕ್ರಮ ಜರುಗಿಸಬೇಕಾಗುತ್ತದೆ .-ಜಿಲ್ಲಾಧಿಕಾರಿ ಡಾ.ಕುಮಾರ್

### ಕಾರ್ಯದ ವೇಗ ಹೆಚ್ಚಿಸಿ

ಸರ್ಕಾರದಿಂದ ಆದೇಶ ಬಂದ ಕೂಡಲೇ ದೇವಾಲಯ ಸಮಿತಿಗೆ ಕಾರ್ಯನಿರ್ವಾಹಕ ಅಧಿಕಾರಿಯನ್ನು ನೇಮಕ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ತಾಲ್ಲೂಕಿನಲ್ಲಿ ತತ್ಕಾಲ್ ಪೊಡಿ, ಅಳತೆ ಕಾರ್ಯ ಎಲ್ಲವೂ ನಿಧಾನವಾಗಿ ನಡೆಯುತ್ತಿದೆ. ಈ ಬಗ್ಗೆ ಎ.ಡಿ.ಎಲ್.ಆರ್. ಹಾಗೂ ಸರ್ವೆ ಅಧಿಕಾರಿಗಳು ತುರ್ತು ಕ್ರಮವಹಿಸಿ ಸರ್ವೆ ಕಾರ್ಯದ ವೇಗ ಹೆಚ್ಚಿಸಬೇಕು ಎಂದು ಶಾಸಕರು ಸೂಚನೆ ನೀಡಿದರು.

### ಸರ್ಕಾರಕ್ಕೆ ಪ್ರಸ್ತಾವನೆ

ಪ್ರಸಿದ್ದ ಪುಣ್ಯಕ್ಷೇತ್ರ ಸಾಸಲು ಗ್ರಾಮದ ಶ್ರೀ ಶಂಭುಲಿಂಗೇಶ್ವರ ಹಾಗೂ ಶ್ರೀ ಸೋಮೇಶ್ವರ ದೇವಾಲಯ ಜಾಗದ ಹಾಗೂ ದೇವರ ಜಮೀನಿನ ಸಂಬಂಧ ತಾಲ್ಲೂಕು ಭೂದಾಖಲೆಗಳ ಸಹಾಯಕ ನಿರ್ದೇಶಕರು ಹಾಗೂ ತಹಸೀಲ್ದಾರ್ ಅವರು ದೇವಾಲಯಕ್ಕೆ ಸೇರಿದ ಜಮೀನನ್ನು ಸಂರಕ್ಷಣೆ ಮಾಡಲು ತುರ್ತು ಕ್ರಮವಹಿಸಬೇಕು ಎಂದು ಸಭೆಯಲ್ಲಿ ಸೂಚನೆ ನೀಡಲಾಯಿತು.

**ತುರ್ತು ಕ್ರಮ ವಹಿಸಿ**

ಜಿಲ್ಲಾ ಧಾರ್ಮಿಕ ಪರಿಷತ್ತನ್ನು ಸ್ಥಾಪಿಸಲು ಸರ್ಕಾರದ ಅಧಿಸೂಚನೆ ಹೊರಡಿಸಿದಾಗ ಸಾಸಲು ಕ್ಷೇತ್ರಕ್ಕೂ ಸಮಿತಿ ರಚಿಸಲು ಅವಕಾಶ ಇದೆ. ಅದೇ ರೀತಿ ದೇವಾಲಯಕ್ಕೆ ಪ್ರತ್ಯೇಕ ಕಾರ್ಯನಿರ್ವಾಹಕ ಅಧಿಕಾರಿಯನ್ನು ನೇಮಕ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

# ದೈನಂದಿನ ಜೀವನದಲ್ಲಿ ಸೈಕ್ಲಿಂಗ್ ಅಳವಡಿಸಿಕೊಳ್ಳುವಂತೆ ಚಂದ್ರಶೇಖರ್ ಕರೆ

• ಉದಯವಾಹಿನಿ, ಮೈಸೂರು

ದೈಹಿಕ ಆರೋಗ್ಯ, ಶಿಸ್ತು ಹಾಗೂ ಪರಿಸರ ಸ್ನೇಹಿ ಜೀವನಶೈಲಿಯ ಮಹತ್ವವನ್ನು ಒತ್ತಿಹೇಳುತ್ತಾ, ಮೈಸೂರು ಅರಮನೆ ಉಪವಿಭಾಗದ ಸಹಾಯಕ ಪೊಲೀಸ್ ಆಯುಕ್ತ (ಎಸಿಪಿ) ಶ್ರೀ ಚಂದ್ರಶೇಖರ್ ಅವರು ಯುವಜನತೆ ಸೇರಿದಂತೆ ಸಾರ್ವಜನಿಕರು ತಮ್ಮ ದೈನಂದಿನ ಜೀವನದಲ್ಲಿ ಸೈಕ್ಲಿಂಗ್ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.ಅವರು ಇಂದು ಸರ್ಕಾರಿ ಯುವ ಹಾಸ್ಟಲ್ ಮೈ ಭಾರತ್ ಮೈಸೂರು, ಮೈಸೂರು ಅಥ್ಲೀಟ್ಸ್ ಕ್ಲಬ್, ರಾಯಲ್ ರೈಡರ್ಸ್ ಮೈಸೂರು, ಸೈಕ್ಲೋಪೀಡಿಯಾ ಮೈಸೂರು ಹಾಗೂ ಮೈಸೂರು ಸೈಕ್ಲಿಂಗ್ ತಂಡಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಶ್ವ ಬೈಸಿಕಲ್ ದಿನದ ಸೈಕಲ್ ರ್ಯಾಲಿಯ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ 50ಕ್ಕೂ ಹೆಚ್ಚು ಸೈಕ್ಲಿಸ್ಟ್‌ಗಳು ಭಾಗವಹಿಸಿ ಆರೋಗ್ಯಕರ ಜೀವನ, ರಸ್ತೆ ಸುರಕ್ಷತೆ ಹಾಗೂ ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸಿದರು. ಇದಕ್ಕೂ ಮುನ್ನ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ನಡೆದ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಉಪ ನಿರ್ದೇಶಕರಾದ ಶ ಬಿ. ಮಂಜುನಾಥ್ ಅವರು ಸೈಕಲ್ ರ್ಯಾಲಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತರಾದ ರಮೇಶ್ ನರಸಯ್ಯ ಹಾಗೂ ಬಾಲ್ಯ ಫೌಂಡೇಶನ್ ಅಧ್ಯಕ್ಷರಾದ ಅನಿಲ್ ಅವರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

## ಸರ್ವರ್ ಸಮಸ್ಯೆ: ಪಡಿತರ ವಿತರಣೆ ವಿಳಂಬ

• ಉದಯವಾಹಿನಿ, ಪಾವಗಡ

ಸರ್ವರ್ ಸಮಸ್ಯೆಯಿಂದಾಗಿ ತಾಲ್ಲೂಕಿನ ಪಡಿತರ ವಿತರಣೆ ವಿಳಂಬವಾಗುತ್ತಿದ್ದು, ಸಮಸ್ಯೆ ಬಗೆಹರಿಸಬೇಕು ಎಂದು ಪಡಿತರ ವಿತರಕರು ಬುಧವಾರ ತಹಶೀಲ್ದಾರ್ ವರದರಾಜು ಅವರಿಗೆ ಮನವಿ ಸಲ್ಲಿಸಿದರು. ಎರಡು ತಿಂಗಳಿನಿಂದ ಸರ್ವರ್ ಸಮಸ್ಯೆಯಿಂದಾಗಿ ಪಡಿತರ ವಿತರಿಸುವಲ್ಲಿ ಸಮಸ್ಯೆಯಾಗುತ್ತಿದೆ. ಬೆಳಗ್ಗೆಯಿಂದ ಸಂಜೆಯವರೆಗೆ ಜನರು ಸರದಿಯಲ್ಲಿ ನಿಲ್ಲಬೇಕಿದೆ. ಸಕಾಲದಲ್ಲಿ ಪಡಿತರ ವಿತರಿಸಲು ಸಾಧ್ಯವಾಗುತ್ತಿಲ್ಲ. ಇದರಿಂದ ವಿತರಕರು ದಿನವಿಡೀ ಬೆರಳೆಣಿಕೆ ಪಡಿತರದಾರರಿಗೆ ಮಾತ್ರ ಪಡಿತರ ವಿತರಿಸಲು ಸಾಧ್ಯವಾಗುತ್ತಿದೆ.
ರೈತರು, ಕೂಲಿ ಕಾರ್ಮಿಕರು, ವೃದ್ಧರು ತಮ್ಮ ಕೆಲಸ ಕಾರ್ಯಗಳನ್ನು ಬಿಟ್ಟು ಪಡಿತರ ವಿತರಣಾ ಕೇಂದ್ರಗಳಿಗೆ ಅಲೆಯುವಂತಾಗಿದೆ. ಪಡಿತರ ವಿತರಣೆಯೇ ದೊಡ್ಡ ಸವಾಲಾಗಿ ಪರಿಣಮಿಸಿದೆ. ತಾಂತ್ರಿಕ ದೋಷಗಳಿಂದ ವಿತರಕರು, ಪಡಿತರ ಪಡೆಯುವವರು ಹೈರಾಣಾಗಿದ್ದಾರೆ ಎಂದು ಆರೋಪಿಸಿದರು.

# ಕಾರು ಅಡ್ಡಗಟ್ಟಿ ಡಕಾಯತಿ ಪ್ರಕರಣ : ಏಳು ಮಂದಿ ಆರೋಪಿಗಳ ಬಂಧನ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಡಕಾಯತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಏಳು ಮಂದಿ ಆರೋಪಿಗಳನ್ನ ಬಂಧಿಸಲಾಗಿದೆ.

ಮೇ 21ರ ಸಂಜೆ ಮೈಸೂರಿನಿಂದ ಕೇರಳಕ್ಕೆ ತೆರಳುತ್ತಿದ್ದ ಆಸೀಫ್ ಎಂಬವರ ಕಾರು ಅಡ್ಡಗಟ್ಟಿ ಹಲ್ಲೆ ನಡೆಸಿ ಕಾರಿನ ಸಮೇತ ಅಪಹರಿಸಿದ್ದ ಆಸಾಮಿಗಳು ಹಣಕ್ಕಾಗಿ ಹುಡುಕಾಟ ನಡೆಸಿ ಕಾರಿನ ಡ್ಯಾಸ್ ಬೋರ್ಡ್ ಜಖಂಗೊಳಿಸಿ ಎರಡು ಮೊಬೈಲ್, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಖಸಿದು ನಂಜನಗೂಡಿನ ಕಳಲೇ ಬಳಿ ಮಾಲೀಕ ಆಸೀಫ್ ರನ್ನ ಕೆಳಗಿಳಿಸಿ ಕಾರು ಸಮೇತವಾಗಿ ಪರಾರಿಯಾಗಿದ್ದಲ್ಲದೆ


ಉದಯವಾಹಿನಿ ಚಿತ್ರ

ಆಸೀಫ್ ಕ್ರೆಡಿಟ್ ಕಾರ್ಡ್ ಬಳಸಿ ತಮ್ಮ ಕಾರಿಗೆ ಇಂಧನ ತುಂಬಿಸಿಕೊಂಡಿದ್ದ ಖದೀಮರು ಕೊನೆಗೂ ಪೊಲೀಸರ ಅತಿಥಿಯಾಗಿದ್ದಾರೆ.

ಕೃತ್ಯದಲ್ಲಿ ಭಾಗಿಯಾಗಿದ್ದ ಕೇರಳದ ತ್ರಿಶೂರು ಮೂಲದ ಅನೀಶ್( 32) ಅನೂಪ್ ( 29) ರಾಹುಲ್ ( 28) ಹೆನೋಕ್ ( 26 ) ಅನುರಾಜ್ ( 35) ಅಮಲ್ ( 26) ರಮೇಶ್ ( 30) ಎಂಬವರನ್ನ ಬಂಧಿಸಿ ಆಸೀಫ್ ರವರಿಂದ ಕಸಿದಿದ್ದ ಮೊಬೈಲ್, ಕ್ರೆಡಿಟ್ , ಡೆಬಿಟ್ ಕಾರ್ಡ್, ಕೃತ್ಯಕ್ಕೆ ಬಳಸಿದ್ದ ಮಾರುತಿ ಸ್ವಿಫ್ಟ್ ಕಾರನ್ನ ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಕಾರ್ಯಾಚರಣೆಯಲ್ಲಿ ಸಬ್ ಇನ್ಸ್ಪೆಕ್ಟರ್ ಲೋಕೇಶ್, ಸಿಬ್ಬಂದಿಗಳಾದ ಪುಟ್ಟರಾಜು, ಅಜಿತ್ ಕುಮಾರ್, ದಿವಾಕರ್, ಶಂಕರಲಿಂಗೇಗೌಡ, ಸಚಿನ್, ಮಹೇಂದ್ರ, ಮಹದೇವಸ್ವಾಮಿ, ಸಿದ್ಧರಾಮು, ಹರೀಶ್, ಶಿವಕುಮಾರ್ ಪಾಲ್ಗೊಂಡಿದ್ದರು.

### ಆರೋಪಿಗಳ ಬೆನ್ನತ್ತಿದ ಪೊಲೀಸರು

ಆಸೀಫ್ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿ ಆರೋಪಿಗಳ ಬೆನ್ನತ್ತಿದ ಬೇಗೂರು ಠಾಣೆಯ ವೃತ್ತ ನಿರೀಕ್ಷಕ ಮೋಹಿತ್ ಸಹದೇವ್ , ಸಬ್ ಇನ್ಸ್ಪೆಕ್ಟರ್ ನವೀನ್ ಮತ್ತು ತಂಡ ಆರೋಪಿಗಳನ್ನ ಪತ್ತೆ ಹಚ್ಚಿ ಮಾಲು ಸಮೇತ ಬಂಧಿಸಿದ್ದಾರೆ.

# ಮರಳಿ ಮಾತೃ ಪಕ್ಷಕ್ಕೆ ಸೇರುವ ಬಗ್ಗೆ ಈಗಾಗಲೇ ಹೇಳಿರುವೆ, ನೋಡೋಣ: ಪರಿಷತ್ ಸದಸ್ಯ ಹೆಚ್.ವಿಶ್ವನಾಥ್

• ಉದಯವಾಹಿನಿ , ಮೈಸೂರು

ಮರಳಿ ತಮ್ಮ ಮಾತೃ ಪಕ್ಷಕ್ಕೆ ಸೇರುವ ಬಗ್ಗೆ ಈಗಾಗಲೇ ನಾನು ಹೇಳಿದ್ದೇನೆ. ಈ ಬಗ್ಗೆ ಅವಕಾಶ ಕೂಡಿ ಬಂದರೆ ಮುಂದಿನ ದಿನಗಳಲ್ಲಿ ನೋಡೋಣ ಎಂದು ವಿಧಾನ ಪರಿಷತ್ ಸದಸ್ಯ ಹೆಚ್?.ವಿಶ್ವನಾಥ್ ಹೇಳಿದರು. ಮಾತನಾಡಿದ ಅವರು, ''ಸದ್ಯ ಬಿಜೆಪಿ ಪಕ್ಷದಿಂದ ವಿಧಾನ ಪರಿಷತ್?ಗೆ ಆಯ್ಕೆ ಆಗಿರುವೆ. ನನ್ನ ಸದಸ್ಯತ್ವದ ಅವದಿ ಮುಂದಿನ ತಿಂಗಳು ಮುಗಿಯಲಿದೆ. ಮುಂದೆ ಚುನಾವಣಾ ರಾಜಕೀಯದಿಂದ ನಿವೃತ್ತಿ ಪಡೆಯಬೇಕೆಂದು ಮಾಡಿರುವೆ. ಯಾರಾದರೂ ಯುವಕರು ರಾಜಕೀಯಕ್ಕೆ ಬರಲಿ. ಆದರೆ, ಮರು ಆಯ್ಕೆಗಾಗಿ ನಾನು ಯಾರ ಮನೆ ಬಾಗಿಲಿಗೂ ಹೋಗುವುದಿಲ್ಲ. ಈಗಾಗಲೇ ಮಂತ್ರಿಯಾಗಿ, ಶಾಸಕನಾಗಿ, ಲೋಕಸಭಾ ಸದಸ್ಯನಾಗಿ ಆಯ್ಕೆ ಆಗಿದ್ದೇನೆ. ಈಗ ಪರಿಷತ್ ಸದಸ್ಯನಾಗಿ ಕೆಲಸ ಮಾಡುತ್ತಿರುವೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿರುವ ಕಾರಣ ಮರಳಿ ಕಾಂಗ್ರೆಸ್ ಪಕ್ಷಕ್ಕೆ ಸೇರುವ ಬಗ್ಗೆ ಹೇಳಿದ್ದೇನೆ. ಈ ನಾಡನ್ನು ಕಟ್ಟಿದವರು ಕಾಂಗ್ರೆಸ್ಸಿಗರು. ಡಿ.ಕೆ. ಶಿವಕುಮಾರ್ ಅವರು ಪ್ರಮಾಣ ವಚನ ಸ್ವೀಕಾರ ಮಾಡುವುದಕ್ಕೂ ಮುನ್ನ ನಿನ್ನೆ ಸರ್ವಧರ್ಮದ ಗುರುಗಳ ಆಶೀರ್ವಾದ ಪಡೆದು ಒಳ್ಳೆಯ ಕೆಲಸ ಮಾಡಿದ್ದಾರೆ. ಏಕೆಂದರೆ ಸಿದ್ದರಾಮಯ್ಯ ಕಾಲದಲ್ಲಿ ಕಾಂಗ್ರೆಸ್ ಹಿಂದೂ ವಿರೋಧಿ ಎಂಬ ಭಾವನೆ ಬರುವ ಹಾಗೆ ಇದ್ದ ಸ್ಥಿತಿಯನ್ನು ಡಿಕೆಶಿ ದೂರ ಮಾಡಿದ್ದಾರೆ. ಇದು ಬಹಳ ದೊಡ್ಡ ಕೆಲಸ'' ಎಂದು ಹರ್ಷ ವ್ಯಕ್ತಪಡಿಸಿದರು. ಮೈಸೂರು ಮಗನಿಂದ ಮೈಸೂರು ಅಳಿಯನಿಗೆ ಅಧಿಕಾರ ಹಸ್ತಾಂತರ: ''ಈವರೆಗೂ ಮೈಸೂರಿನ ಮಗ ಈ ರಾಜ್ಯದ ಮುಖ್ಯಮಂತ್ರಿ ಆಗಿದ್ದರು. ಈಗ ಮೈಸೂರಿನ (ಇಟ್ಟಿಗೆಗೂಡು) ಅಳಿಯ ರಾಜ್ಯದ ಮುಖ್ಯಮಂತ್ರಿ ಆಗಿದ್ದಾರೆ. ಮೈಸೂರಿನ ಮಗನಾದ ನೀವು (ಸಿದ್ದರಾಮಯ್ಯ) ಮೂರು ವರ್ಷ ಯಾವುದೇ ರೀತಿಯ ಕೆಲಸವನ್ನು ರಾಜ್ಯಕ್ಕಾಗಲಿ ಹಾಗೂ ಮೈಸೂರಿಗಾಗಲಿ ಮಾಡಲಿಲ್ಲ. ಈಗ ಮೈಸೂರಿನ ಅಳಿಯ ಡಿ.ಕೆ. ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿಯಾಗಿದ್ದಾರೆ. ಅವರಿಗೆ ಇಲ್ಲಿಂದ ಮಹಾಲಕ್ಷ್ಮೀ ಅಂತಹ ಮಗಳನ್ನು ಕೊಟ್ಟಿದ್ದೇವೆ. ಮೈಸೂರು ಅಂದ್ರೆ ಜಗತ್ಪಸಿದ್ಧವಾದಂತಹದ್ದು. ಪ್ರವಾಸೋದ್ಯಮ ಇಲ್ಲಿ ಬಹಳ ಮುಖ್ಯ. ಪ್ಲಾನ್ ಮಾಡಿ ಒಳ್ಳೆಯ ಕೆಲಸ ಮಾಡಿ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಆದ್ಯತೆ ನೀಡಿ. ಅಭಿವೃದ್ಧಿ ಆದದ್ದೇ ಆದಲ್ಲಿ ಇಲ್ಲಿ ಓರ್ವ ಕಡಲೆಕಾಯಿ ಮಾರುವವನಿಂದ ಹಿಡಿದು ಚಪ್ಪಲಿ ಹೊಲಿಯುವ ವ್ಯಕ್ತಿಯವರೆಗೂ ಅನುಕೂಲವಾಗುತ್ತದೆ. ಅದರಲ್ಲಿ ಬಡವರಿಗೂ ಬಹಳಷ್ಟು ಅನುಕೂಲವಾಗಲಿದೆ. ಅನುಭವಿಗಳೊಂದಿಗೆ ಚರ್ಚಿಸಿ ಪ್ಲಾನ್ ಮಾಡಿಕೊಳ್ಳಿ. ಈ ಹಿಂದೆ ಎಸ್ ಎಂ ಕೃಷ್ಣ ಅವರು ಮೈಸೂರು ಟಾಸ್ಕ್ ಫೋರ್ಸ್ ಅಂತ ಮಾಡಿದ್ದರು. ಅದೇ ರೀತಿ ತಾವೂ (ಡಿಕೆಶಿ) ಕೂಡ 2050ರವರೆಗೆ ಏನೆಲ್ಲ ಮಾಡಬೇಕು ಅನ್ನೋದನ್ನು ಪ್ಲಾನ್ ಮಾಡಿಕೊಳ್ಳಿ ಎಂದು ಡಿಕೆ ಶಿವಕುಮಾರ್ ಅವರಿಗೆ ಕೆಲವು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

### ಡಿಕೆ ಸಿಎಂ ಆಗಿದ್ದು ಖುಷಿಯಾಗಿದೆ

ಕಾಂಗ್ರೆಸ್‌ನ ಓರ್ವ ಸಾಮಾನ್ಯ ಕಾರ್ಯಕರ್ತ ಬೆಳೆದು ದೊಡ್ಡ ಅಧಿಕಾರ ಹಿಡಿದಿದ್ದಾರೆ. ಇದುಸಂತೋಷದ ವಿಷಯ. ಡಿ.ಕೆ.ಶಿಗೆ ಕಾಂಗ್ರೆಸ್ ಕಾರ್ಯಕರ್ತರ ಹಾಗೂ ನಾಡಿನ ಜನರು ಕಷ್ಟಗಳನ್ನು ಅರ್ಥ ಮಾಡಿಕೊಂಡು ಅಧಿಕಾರ ನಡೆಸುವ ಅನುಭವವಿದೆ. ಅವರಿಗೆ ನಾನು ನೀಡುವ ಸಲಹೆ ಏನೆಂದರೆ, ಈ ನಾಡಿನಲ್ಲಿ ಅಕ್ಷರ ಹಾಗೂ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿ ಎಂದರು.

# ಸರ್ವ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಯನ್ನು ನಿರ್ಮಾಣ ಮಾಡಿದ ನಾಲ್ವಡಿ ಕೃಷ್ಣರಾಜ ಒಡೆಯರ್

• ಉದಯವಾಹಿನಿ, ಚಾಮರಾಜನಗರ

ಆಧುನಿಕ ಮೈಸೂರು ನಿರ್ಮಾಪಕರಾದ ನಾಲ್ವಡಿ ಯವರು ದೇವತಾ ಪುರುಷರು. ಕನ್ನಡ ಸಾಹಿತ್ಯ ಪರಿಷತ್ತಿನ ಸ್ಥಾಪಕರು, ಕಲೆ, ಸಾಹಿತ್ಯ, ಸಂಗೀತ, ನೃತ್ಯ, ವಾಸ್ತುಶಿಲ್ಪ, ನೀರಾವರಿ,ಶಿಕ್ಷಣ ಸೇತುವೆ ನಿರ್ಮಾಣ, ತಂತ್ರಜ್ಞಾನ, ವಿಜ್ಞಾನ,ಮಹಿಳಾ ಅಭಿವೃದ್ಧಿ, ಮಕ್ಕಳ ಅಭಿವೃದ್ಧಿ, ಆರೋಗ್ಯ, ಅರಮನೆಗಳ ನಿರ್ಮಾಣ, ದೇವಾಲಯಗಳ ನಿರ್ಮಾಣದ ಜೊತೆಗೆ ಸರ್ವ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಯನ್ನು ನಿರ್ಮಾಣ ಮಾಡಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಮಹಾ ತ್ಯಾಗಿಗಳು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಅವರು ನಗರದ ಪ್ರವಾಸಿ ಮಂದಿರದ ಮುಂಭಾಗ ಪ್ರತಿಷ್ಠಾಪಿಸಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಗೆ ಕನ್ನಡ ಸಾಹಿತ್ಯ ಪರಿಷತ್ತು, ಜೈಹಿಂದ್ ಪ್ರತಿಷ್ಠಾನ, ಋಗ್ವೇದಿ ಯೂತ್ ಕ್ಲಬ್ ಮತ್ತು ಕನ್ನಡ ಸಂಘಟನೆಗಳ ಪರವಾಗಿ ಪುಷ್ಪವನ್ನು ಅರ್ಪಿಸಿ ಗೌರವ ಸಲ್ಲಿಸಿ ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ವಿಶ್ವಪ್ರಸಿದ್ಧರು. ಮೈಸೂರು ಪ್ರಾಂತ್ಯಕ್ಕೆ ಅಪಾರ ಗೌರವ ತಂದುಕೊಟ್ಟ ಮಹಾತ್ಮರು. ಒಡೆಯರ್ ವಂಶವೇ ಮಾನವನ ಸಮಗ್ರ ಅಭಿವೃದ್ಧಿಗೆ ಇಡೀ ಜೀವಮಾನವನ್ನು ತ್ಯಜಿಸಿದವರು. ಒಡೆಯರ್ ವಂಶದ ಮೂಲಕ ರಾಜ್ಯವನ್ನು ಆಳುವ ಜೊತೆಗೆ ಮಾನವನ ಪ್ರತಿ ಹಂತದ ಬೆಳವಣಿಗೆಗೆ ಕಾರಣೀಭೂತರಾಗಿ ವಿಶ್ವಪ್ರಸಿದ್ಧ ವಾಗುವಂತೆ ಮಾಡಿದ ಕೃಷ್ಣರಾಜ ಒಡೆಯರ್ ಕನ್ನಡ ನಾಡು-ನುಡಿ ಜಲ ಭಾಷೆಯ ಸಾಹಿತ್ಯದ ಬೆಳವಣಿಗೆಗೆ ಚಿಂತನೆಗೆ ತಮ್ಮ ದೂರ ದೃಷ್ಟಿಯ ಮೂಲಕ ಸರ್ ಎಂ ವಿಶ್ವೇಶ್ವರಯ್ಯನವರ ಜೊತೆಗೆ ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿ ಇದಕ್ಕೊಂದು ಸುಂದರ ಸ್ವರೂಪವನ್ನು ಕಟ್ಟಿಕೊಡುವ ಕಾರ್ಯವನ್ನು ಎಲ್ಲರೂ ಸೇರಿ ಮಾಡಬೇಕು ಎಂದು ಮನವಿ ಮಾಡಿದರು. ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಉಪಾಧ್ಯಕ್ಷರು ಹಾಗೂ ಉಪನ್ಯಾಸಕರಾದ ಶಿವರಾಂ ತೆ ಳ್ಳನೂರು ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ನಾಲ್ವಡಿ ಕೃಷ್ಣರಾಜ ಒಡೆಯರವರ ಸ್ಮರಿಸುವ ಮೂಲಕ ಅವರ ಪ್ರತಿಮೆಗೆ ಗೌರವ ಸಲ್ಲಿಸುವ ಕಾರ್ಯವನ್ನು ಮಾಡಿದ ಅಧ್ಯಕ್ಷರಾದ ಋಗ್ವೇದಿಯವರ ತಂಡಕ್ಕೆ ಧನ್ಯವಾದಗಳನ್ನು ಅರ್ಪಿಸಿ ಕಳೆದ ವರ್ಷದಿಂದ ಈ ಕಾರ್ಯವನ್ನು ಮಾಡುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತು ಮಾದರಿಯಾಗಿದೆ. ನೂರು ವರ್ಷಗಳ ಹಿಂದೆಯೇ ಪ್ರತಿ ಕ್ಷೇತ್ರದಲ್ಲೂ ಮೀಸಲಾತಿಯನ್ನು ಜಾರಿಗೆ ತರುವ ಮೂಲಕ ಸರ್ವ ಜನಾಂಗದ ಅಭಿವೃದ್ಧಿಗೆ ಕಾರಣರಾದವರು ಮಹಾತ್ಮ ಗಾಂಧೀಜಿಯವರಿಂದ ರಾಜ ಶ್ರೀ ಎಂದು ಕರೆಯಲ್ಪಟ್ಟವರು. ಪ್ರತಿ ಮನೆ ಮನೆಯಲ್ಲೂ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸೇವೆಯನ್ನು ಸದಾ ಕಾಲ ಸ್ಮರಿಸಿಕೊಳ್ಳುವ ಮೂಲಕ ಅವರಿಗೆ ಧನ್ಯತಾಭಾವವನ್ನು ನೀಡುತ್ತಿದ್ದೇವೆ.ಕನ್ನಡ ಸಾಹಿತ್ಯ ಪರಿಷತ್ತು ನಾಲ್ವಡಿ ಕೃಷ್ಣರಾಜ ಒಡೆಯರವರ ಕೊಡುಗೆಗಳು ಮತ್ತು ಸಾಧನ ಯಾತ್ರೆಗೆ ಶುಭ ಹಾರೈಸಿದರು. ಭುವನೇಶ್ವರಿ ಕನ್ನಡ ಸಂಘದ ಅಧ್ಯಕ್ಷರಾದ ಜಿ ಬಂಗಾರು ಕನ್ನಡ ಸಾಹಿತ್ಯ ಪರಿಷತ್ತಿನ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸಾಧನೆ ಯಾತ್ರೆ ಯಶಸ್ವಿಯಾಗಲಿ. ನಾಲ್ವಡಿ ಕೃಷ್ಣರಾಜ ಒಡೆಯರವರನ್ನು ಸರ್ವರು ಸ್ಮರಿಸಿ ರಿಸಿಕೊಳ್ಳೋಣ ಎಂದರು. ಕನ್ನಡ ಸಾಹಿತ್ಯ ಪರಿಷತ್ತಿನ ಶಿವಲಿಂಗ ಮೂರ್ತಿ ಕೃಷ್ಣರಾಜ ಒಡೆಯರ್ ಅವರ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಗೆ ಪುಷ್ಪ ಅರ್ಪಿಸಿ, ಘೋಷಣೆಗಳನ್ನು ಕೂಗುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾದ ಬಿಕೆ ಆರಾಧ್ಯ ಸರಸ್ವತಿ, ದೊರೆಸ್ವಾಮಿ ಕೊಳ್ಳೇಗಾಲದ ಪ್ರಮೋದ್, ದೊಡ್ಡಶೆಟ್ಟಿ ಇದ್ದರು.


ಉದಯವಾಹಿನಿ ಚಿತ್ರ

### ನಾಲ್ವಡಿ ಅವರ ದೂರ ದೃಷ್ಟಿ ಅಪಾರ

ಇಂದಿಗೂ ನಾಡಿನ ಜೊತೆಗೆ ವಿಶ್ವದ ಎಲ್ಲೆಡೆ ಕನ್ನಡ ಸಾಹಿತ್ಯ ಪರಿಷತ್ತು ತನ್ನ ಕನ್ನಡದ ಸೇವೆಯನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿದೆ. ಕನ್ನಡ ಸಾಹಿತ್ಯ ಪರಿಷತ್ತಿನ ಮೂಲಕ ಸಾಹಿತಿಗಳು, ಕಲಾವಿದರು, ಕವಿಗಳು, ಲೇಖಕರು, ಚಿಂತಕರು, ಗಾಯಕರು ತಮ್ಮ ಸಾಧನೆ ಮಾಡಲು ಸಾಧ್ಯವಾಗಿದೆ. ನಾಲ್ವಡಿ ಅವರ ದೂರ ದೃಷ್ಟಿ ಅಪಾರ. ಮಾನವ ಕಲ್ಯಾಣದ ಗುರಿ ಇಟ್ಟುಕೊಂಡಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗೆ ಜಗತ್ತಿನಲ್ಲಿ ಸರಿಸಾಟಿ ಯಾರು ಇಲ್ಲ ಎಂದು ಬಣ್ಣಿಸಿದರು ಮೈಸೂರು ಪ್ರಾಂತ್ಯದ ಚಾಮರಾಜನಗರದ ಪ್ರವಾಸಿ ಮಂದಿರದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪ್ರತಿಮೆಯನ್ನು ಹಿರಿಯರು ಸ್ಥಾಪಿಸಿರುವುದು ಬಹಳ ಸಂತೋಷ.

## ಮಿನಿ ನ್ಯೂಸ್

## ಜೂನ್ 6 ಕ್ಕೆ ಉಚಿತ ಕಣ್ಣಿನ ತಪಾಸಣೆ ಶಿಬಿರ ಆಯೋಜನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಜೂ.6 ಶನಿವಾರದಂದು ಕೊಯಂಬತ್ತೂರು ಅರವಿಂದ ಕಣ್ಣಾಸ್ಪತ್ರೆಯ ತಜ್ಞ ವೈದ್ಯರಿಂದ ಪಟ್ಟಣದ ಮಡಹಳ್ಳಿ ರಸ್ತೆಯಲ್ಲಿರುವ ಸರ್ಕಾರಿ ನೌಕರರ ಭವನದಲ್ಲಿ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನ ಆಯೋಜನೆ ಮಾಡಲಾಗಿದ್ದು ಸಾರ್ವಜನಿಕರು ಶಿಬಿರದ ಸದುಪಯೋಗಪಡೆದುಕೊಳ್ಳಿ ಎಂದು ಅನುಗ್ರಹ ಸಂಸ್ಥೆಯ ಸಂಯೋಜಕ ಕೆ.ರಮೇಶ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಶಿಬಿರದಲ್ಲಿ ಕಣ್ಣಿನ ಸಮಸ್ಯೆಗಳಾದ ಪೊರೆ, ಗ್ಲಾಕೋಮಾ, ನೀರು ಸೋರುವಿಕೆ, ಗೀಜು, ದೂರ ಹಾಗೂ ಸಮೀಪ ದೃಷ್ಟಿ ದೋಷ, ವೋರೆಕಣ್ಣು, ರಾತ್ರಿಗುರುಡು ಇವುಗಳ ತಪಾಸಣೆ ನಡೆಸಲಾಗುವುದು ಬಳಿಕ ಸ್ಥಳದಲ್ಲಿಯೇ ರಿಯಾಯಿತಿ ದರದಲ್ಲಿ ಕನ್ನಡಕ ನೀಡಲಾಗುವುದು, ಶಸ್ತ್ರ ಚಿಕಿತ್ಸೆ ಅಗತ್ಯತೆ ಇರುವ ರೋಗಿಗಳನ್ನ ಕೊಯಂಬತ್ತೂರಿಗೆ ಕರೆದೊಯ್ದು ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ ತೊಂದರೆಯಿಂದ ಬಳಲುತ್ತಿರುವ ಸಾರ್ವಜನಿಕರು ಶಿಬಿರದ ಸದುಪಯೋಗಪಡೆದುಕೊಳ್ಳಿ ಎಂದು ಕೋರಿದ್ದಾರೆ.

## ಚಿಕ್ಕಬಳ್ಳಾಪುರದಲ್ಲಿ ಸಂಭ್ರಮಾಚರಣೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆ ಯಲ್ಲಿ ಚಿಕ್ಕಬಳ್ಳಾಪುರದಲ್ಲಿ ಕಾಂಗ್ರೆಸ್ ಕಾರ್ಯ ಕರ್ತರು ಹಾಗೂ ಅಭಿಮಾನಿಗಳು, ಒಕ್ಕಲಿಗ ಸಮುದಾಯದ ಮುಖಂಡರು ಬುಧವಾರ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಸಂಭ್ರಮಾಚರಣೆ ನಡೆಸಿ ಒಳ್ಳೆಯದಾಗಲಿ ಎಂದು ಹರಕೆ ತೀರಿಸಿದರು.

ನಗರ ಹೊರವಲಯದ ವೀರಾಂಜನೇಯಸ್ವಾಮಿ ದೇವಾಲಯದಲ್ಲಿ ಆಂಜನೇಯಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ಡಿ.ಕೆ.ಶಿವಕುಮಾರ್ ಅವರ ಹೆಸರಿನಲ್ಲಿ ಅರ್ಚನೆ ಮಾಡಿಸಿ, ಇವರ ನೇತೃತ್ವದ ಸರಕಾರಕ್ಕೆ ಒಳ್ಳೆಯದಾಗಲಿ ಎಂದು ಬೇಡಿದರು.ನಂತರ ಅಭಿಮಾನಿಗಳ ಸಮ್ಮುಖದಲ್ಲಿ ಈಡುಗಾಯಿ ಸೇವೆ ಪೂರೈಸಿದ ನಂತರ ಜನತೆಗೆ ಸಿಹಿ ವಿತರಣೆಯ ಕಾರ್ಯ ಕ್ರಮಗಳು ಜರುಗಿದವು. ಡಿ.ಕೆ.ಶಿವಕುಮಾರ್ ಅಭಿಮಾನಿಗಳ ಬಳಗದ ಮುಖಂಡ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಯಲುವಹಳ್ಳಿ ಎನ್. ರಮೇಶ್ ಅಭಿಮಾನಿಗಳ ಬಳಗದ ವತಿಯಿಂದ ಆಯೋಜಿ ಸಿದ್ದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಕಳೆದ ಹತ್ತು ವರ್ಷಗಳಿಂದ ಕಾಂಗ್ರೆಸ್ ಪಕ್ಷವನ್ನು ಸಂಘಟಿಸಿ ಅಧಿಕಾರಕ್ಕೆ ತರುವಲ್ಲಿ ಡಿ.ಕೆ. ಶಿವಕುಮಾರ್ ಮಹತ್ವದ ಪಾತ್ರ ವಹಿಸಿದ್ದಾರೆ. ಪಕ್ಷ ಸಂಕಷ್ಟಕ್ಕೆ ಸಿಲುಕಿದ ಪ್ರತಿಯೊಂದು ಸಂದರ್ಭದಲ್ಲೂ ಟ್ರಬಲ್ ಶೂಟರ್‌ನಂತೆ ಕಾರ್ಯನಿರ್ವಹಿಸಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು 135 ಶಾಸಕರ ಬಲದೊಂದಿಗೆ ಅಧಿಕಾರಕ್ಕೆ ತರುವಲ್ಲಿ ಯಶಸ್ವಿಯಾಗಿದ್ದಾರೆ.'ಕ್ಷನಿಷ್ಠ ಸೇವೆ ಮತ್ತು ನಾಯಕತ್ವವನ್ನು ಪರಿಗಣಿಸಿ ಪಕ್ಷದ ವರಿಷ್ಠರು ಮುಖ್ಯಮಂತ್ರಿ ಹುದ್ದೆಯನ್ನುವಹಿಸಿರುವುದು.

## ಕಷ್ಟವೆಂದು ಬಂದವರಿಗೆ ಮಾತಿನಲ್ಲೇ ಪರಿಹಾರ ಸೂಚಿಸುತ್ತಿದ್ದ 'ಅವಧೂತ' ಸಿದ್ದಪ್ಪಾಜಿ

• ಉದಯವಾಹಿನಿ, ಕುಣಿಗಲ್

ತಾಲ್ಲೂಕಿನ ಎಡೆಯೂರು ಹೋಬಳಿಯ ತಟ್ಟೆಕೆರೆ ಗ್ರಾಮದ ಅವಧೂತ ಸಿದ್ದಪ್ಪಾಜಿ ಸ್ವಾಮಿ ಭಕ್ತ ವಲಯದಲ್ಲಿ ಪವಾಡ ಪುರುಷರೆಂದೇ ಗುರುತಿಸಿಕೊಂಡವರು. ಅವಧೂತ ಸಿದ್ದಾಪ್ಪಾಜಿ ಅವರು ತಾಲ್ಲೂಕಿನ ಜಲಧಿಗೆರೆ ಮೂಲದವರಾಗಿದ್ದು, 30 ವರ್ಷಗಳ ಹಿಂದೆ ತಟ್ಟೆಕೆರೆ ಗ್ರಾಮಕ್ಕೆ ಬಂದು ನೆಲಸಿದ್ದರು. ಅವಧೂತ ಪರಂಪರೆಯಲ್ಲಿ ಮುಂದುವರಿದು ಸರ್ವಸಂಘ ಪರಿತ್ಯಾಗಿಗಳಾಗಿದ್ದರು. ತಮ್ಮನ್ನು ಕಾಣಲು ಬಂದ ಭಕ್ತರ ಮನಸ್ಸನ್ನು ಅರಿತು, ಸಮಸ್ಯೆಗಳನ್ನು ಅರಿಕೆ ಮಾಡಿಕೊಳ್ಳುವ ಮುನ್ನವೇ ತಮ್ಮದೇ ರೀತಿಯಲ್ಲಿ ಪರಿಹಾರ ಸೂಚಿಸುತ್ತಿದ್ದರು. ಭಕ್ತರಲ್ಲಿ ಭೇದಭಾವ ಮಾಡದೆ ಎಲ್ಲರನ್ನೂ ಒಂದೇ ರೀತಿಯಾಗಿ ನೋಡುತ್ತಿದ್ದರು, ಜತೆಗೆ ತಾವೇ ಸಿದ್ದಪಡಿಸಿದ ಕಷಾಯವನ್ನು ಭಕ್ತರಿಗೆ ಕುಡಿಯಲು ನೀಡುತ್ತಿದ್ದರು. ಭಕ್ತರ ಸಮಸ್ಯೆಗಳಿಗೆ ಯಾವುದೇ ಹೋಮ, ಪೂಜೆ ಪುನಸ್ಕಾರಗಳಿಗೆ ಸೂಚನೆ ನೀಡದೆ ಮಾತಿನಲ್ಲೇ ಪರಿಹಾರ ಮಾರ್ಗವನ್ನು ತಿಳಿಸುತ್ತಿದ್ದರು. ಇದರಿಂದಾಗಿ ಭಕ್ತರ ಸಂಖ್ಯೆ ಕೂಡ ಹೆಚ್ಚಾಗಿತ್ತು. ಇವರ ಮಾತುಗಳಿಂದ ಸಮಸ್ಯೆಗಳು ಪರಿಹಾರ ಆಗಿದ್ದಾಗಿ ಅನೇಕರು ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತಾರೆ. ಸಿದ್ದಪ್ಪಾಜಿ ಅವರು ಭಕ್ತರಿಗೆ ಹೇಳುತ್ತಿದ್ದ ಮಾತುಗಳ ಪೈಕಿ ಕೆಲವನ್ನು ಅವಧೂತರ ಭಕ್ತ ಮಾಗಡಿಯ ಸಂತೋಷ್ ಅಯ್ಯಂಗಾರ್ ನೆನೆಪಿಸಿಕೊಂಡಿದ್ದು ಹೀಗೆ ದೇವರನ್ನು ದೇವಸ್ಥಾನದಲ್ಲಿ ಮಾತ್ರ ಕಾಣಬಾರದು, ಪ್ರಕೃತಿಯಲ್ಲಿ ಕಾಣಬೇಕು.

## ಎಸಿಸಿ ಉತ್ಪಾದನಾ ಸಾಮರ್ಥ್ಯ ಹೆಚ್ಚಳಕ್ಕೆ ಜಿಲ್ಲಾಧಿಕಾರಿ ಅವಕಾಶ ನೀಡಬಾರದು ರಕ್ಷಣಾ ವೇದಿಕೆ ಆಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊಳ್ಳೇಗಾಲ

ಗೌರಿಬಿದನೂರು: ಎಸಿಸಿ ಸಿಮೆಂಟ್ ಕಾರ್ಖಾನೆಯಲ್ಲಿ ಸಿಮೆಂಟ್ ಉತ್ಪಾದನೆ ಹೆಚ್ಚಿಸುವ ಪ್ರಸ್ತಾಪನೆಗೆ ಜಿಲ್ಲಾಧಿಕಾರಿಗಳು ಯಾವುದೇ ಕಾರಣಕ್ಕೂ ಅನುಮತಿ ನೀಡಬಾರದೆಂದು ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ನರೇಂದ್ರ ಕುಮಾರ್ ರೆಡ್ಡಿ ಜಿಲ್ಲಾಧಿಕಾರಿಗಳನ್ನು ಆಗ್ರಹಿಸಿದರು.

ತಾಲ್ಲೂಕಿನ ತೊಂಡೇಬಾವಿ ಸಮೀಪವಿರುವ ಎಸಿಸಿ ಸಿಮೆಂಟ್ ಕಾರ್ಖಾನೆಯ ಮುಂಭಾಗ ವಿವಿಧ ಸಂಘ ಸಂಸ್ಥೆಗಳ ಕಾರ್ಯಕರ್ತರು ನಡೆಸಿದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು. ಪ್ರಸ್ತುತ ಎಸಿಸಿ ಸಿಮೆಂಟ್ ಕಾರ್ಖಾನೆಯಲ್ಲಿ 2.0 ಮೆಟ್ರಿಕ್ ಟನ್ ಸಿಮೆಂಟ್ ಉತ್ಪಾದನೆ ಮಾಡುವ ಸಾಮರ್ಥ್ಯ ಹೊಂದಿದ್ದು, ಅದನ್ನು 8.0 ಮೆಟ್ರಿಕ್ ಟನ್ ಸಿಮೆಂಟ್ ಉತ್ಪಾದನೆ ಮಾಡಲು ಎಸಿಸಿ ಸಿಮೆಂಟ್ ಕಾರ್ಖಾನೆಯವರು ಮುಂದಾಗಿರುವುದು ತಿಳಿದು ಬಂದಿದೆ. ಜಿಲ್ಲಾಧಿಕಾರಿಗಳು ಇದಕ್ಕೆ ಅವಕಾಶ ಮಾಡಬಾರದು ಎಂದರು.ಕಳೆದ ಹತ್ತಾರು ವರ್ಷಗಳಿಂದ ಈ ಭಾಗದ ಜನರ ಆರೋಗ್ಯದ ಮೇಲೆ ಎಸಿಸಿ ಸಿಮೆಂಟ್ ಕಾರ್ಖಾನೆಯಿಂದ ಹೊರ ಬರುವ ಧೂಳು ಸಾಕಷ್ಟು ಅನಾಹುತವನ್ನು ಉಂಟು ಮಾಡು ತ್ತಿದೆ. ಅದರಲ್ಲೂ ಶ್ವಾಸಕೋಶದ ಸಂಬಂಧಿಸಿದ ಕಾಯಿಲೆಗಳು, ಚರ್ಮ ರೋಗಗಳು, ಅಲರ್ಜಿ ಕಾಯಿಲೆಗಳು ಈ ಭಾಗದ ಜನರಲ್ಲಿ ಹೆಚ್ಚಾಗಿ ಕಾಣಿಸುತ್ತಿದೆ. ಈ ಭಾಗದ ಸ್ಥಳೀಯ ರು ಹಲವಾರು ಬಾರಿ ಎಸಿಸಿ ಸಿಮೆಂಟ್ ಕಾರ್ಖಾನೆಯಿಂದಾಗುತ್ತಿರುವ ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳಿಗೆ, ತಹಶಿಲ್ದಾರ್ ಅವರಿಗೆ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಗಳ ಗಮನಕ್ಕೆ ತಂದಿದ್ದರೂ ಕೂಡ ಅಧಿಕಾರಿಗಳಾಗಲಿ,ಕಾರ್ಖಾನೆಯವರಾಗಲಿ ಇದುವರೆಗೂ ಯಾವುದೇ ರೀತಿಯ ಕ್ರಮವನ್ನು ತೆಗೆದುಕೊಂಡಿಲ್ಲ.

ಅಂತರಾಳದಿಂದ..
EDITORIAL

# ಜನಪರ, ಅಭಿವೃದ್ಧಿಪರ ಆಡಳಿತ ಹೊಸ ಸರಕಾರದ ಸಂಕಲ್ಪವಾಗಲಿ



ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಬುಧವಾರ ಪ್ರಮಾಣವಚನ ಸ್ವೀಕರಿಸಿದ್ದಾರೆ. ಮುಖ್ಯಮಂತ್ರಿ ಅವರೊಂದಿಗೆ ಉಪಮುಖ್ಯಮಂತ್ರಿಯಾಗಿ ಡಾ. ಜಿ. ಪರಮೇಶ್ವರ್ ಹಾಗೂ ಸಚಿವರಾಗಿ 12 ಮಂದಿ ಪ್ರಮಾಣವಚನ ಸ್ವೀಕರಿಸುವ ಮೂಲಕ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ಅಧಿಕೃತವಾಗಿ ರಾಜ್ಯದ ಆಡಳಿತ ಸೂತ್ರವನ್ನು ವಹಿಸಿಕೊಂಡಿದೆ.


2023ರಲ್ಲಿ ರಾಜ್ಯ ವಿಧಾನಸಭೆಗೆ ನಡೆದ ಚುನಾವಣೆಯ ವೇಳೆ ಕಾಂಗ್ರೆಸ್‌ಗೆ ಬಹುಮತ ಲಭಿಸಿದ ಸಂದರ್ಭದಲ್ಲಿ ಮುಖ್ಯಮಂತ್ರಿ ಗಾದಿಗೆ ಸಿದ್ದರಾಮಯ್ಯ ಮತ್ತು ಡಿ. ಕೆ. ಶಿವಕುಮಾರ್ ನಡುವೆ ಭಾರೀ ಪೈಪೋಟಿ ಏರ್ಪಟ್ಟಿತ್ತಾದರೂ ಕೊನೆಯಲ್ಲಿ ಪಕ್ಷದ ಹೈಕಮಾಂಡ್‌ನ ಮಾತಿಗೆ ತಲೆಬಾಗಿ ಡಿ.ಕೆ. ಶಿವಕುಮಾರ್ ಉಪಮುಖ್ಯಮಂತ್ರಿ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದ್ದರು. ಈ ವೇಳೆ ಪಕ್ಷದ ಉನ್ನತ ನಾಯಕರ ಮಟ್ಟದಲ್ಲಿ ನಡೆದಿತ್ತು ಎನ್ನಲಾದ ಒಪ್ಪಂದದಂತೆ ಮೂರು ವರ್ಷಗಳ ಬಳಿಕ ಸಿದ್ದರಾಮಯ್ಯ ಅವರು ಹೈಕಮಾಂಡ್‌ನ ನಿರ್ದೇಶಾನುಸಾರ ರಾಜೀನಾಮೆ ನೀಡಿದ್ದರು. ಎಲ್ಲರ ನಿರೀಕ್ಷೆಯಂತೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಡಿ.ಕೆ. ಶಿವಕುಮಾರ್ ಅವರನ್ನು ಆಯ್ಕೆ ಮಾಡಲಾಗಿತ್ತು. ಅದರಂತೆ ಈಗ ಡಿ.ಕೆ. ಶಿವಕುಮಾರ್ ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಅಧಿಕಾರವಹಿಸಿಕೊಂಡಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿ. ಅವರ ಭವಿಷ್ಯದ ಹಾದಿ ಅಷ್ಟೇನೂ ಸಲೀಸಾಗಿಲ್ಲ. ಒಂದೆಡೆಯಿಂದ ರಾಜ್ಯ ಕಾಂಗ್ರೆಸ್‌ನಲ್ಲಿನ ಆಂತರಿಕ ಭಿನ್ನಮತಗಳನ್ನು ನಿವಾರಿಸಿಕೊಂಡು ಎಲ್ಲಾ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸರಕಾರವನ್ನು ಮುನ್ನಡೆಸುವ ಹೊಣೆಗಾರಿಕೆ ಅವರ ಮೇಲಿದೆ. ಇನ್ನೊಂದೆಡೆ ಜನಪರ ಮತ್ತು ಅಭಿವೃದ್ಧಿ ಪರ ಆಡಳಿತವನ್ನು ನೀಡುವ ಮೂಲಕ ರಾಜ್ಯದ ಜನತೆ ಪಕ್ಷದ ಮೇಲಿಟ್ಟಿರುವ ನಂಬಿಕೆಯನ್ನು ಉಳಿಸಿಕೊಳ್ಳುವ ಅನಿವಾರ್ಯತೆಯೂ ಇದೆ. ಕಳೆದ ಚುನಾವಣೆಯಲ್ಲಿ ಜನತೆಗೆ ನೀಡಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸುವ ಜತೆಯಲ್ಲಿ ರಾಜ್ಯದ ಅಭಿವೃದ್ಧಿ ಯೋಜನೆಗಳಿಗೆ ಹಣ ಹೊಂದಿಸುವ ಹಾಗೂ ಜಾತಿಗಣತಿ ವಿವಾದದ ಸವಾಲನ್ನು ಡಿ.ಕೆ.ಶಿ. ನೇತೃತ್ವದ ಸರಕಾರ ಹೇಗೆ ನಿಭಾಯಿಸಲಿದೆ ಎಂಬ ಕುತೂಹಲವೂ ಜನತೆಯಲ್ಲಿದೆ.

ಏತನ್ಮಧ್ಯೆ ಪ್ರಸಕ್ತ ಮುಂಗಾರು ಅವಧಿಯಲ್ಲಿ ಮಳೆ ಕೊರತೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತನ್ನ ಮುನ್ಸೂಚನೆಯಲ್ಲಿ ತಿಳಿಸಿದ್ದು, ಸಂಭಾವ್ಯ ಪರಿಸ್ಥಿತಿಯನ್ನು ಎದುರಿಸಲು ರಾಜ್ಯ ಸರಕಾರ ಸನ್ನದ್ಧಗೊಳ್ಳಬೇಕಿರುವುದು ಈಗಿನ ತುರ್ತು. ರೈತರಿಗೆ ಅಗತ್ಯ ಪ್ರಮಾಣದಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಕೆಯನ್ನು ಖಾತರಿಪಡಿಸಲು ಸೂಕ್ತ ಕ್ರಮಗಳನ್ನು ಕೈಗೊಂಡು ಮುಂದಿನ ದಿನಗಳಲ್ಲಿ ಸಮಸ್ಯೆ ತಲೆದೋರದಂತೆ ಮುಂಜಾಗ್ರತೆವಹಿಸಬೇಕು. ಇನ್ನು ಆದ್ಯತಾ ವಲಯಗಳಾದ ಕಾನೂನು ಮತ್ತು ಸುವ್ಯವಸ್ಥೆ, ಆರೋಗ್ಯ, ಶಿಕ್ಷಣ, ವಸತಿಗೆ ಒತ್ತು ನೀಡುವ ಜತೆಯಲ್ಲಿ, ನಾಡಿನ ನೆಲ-ಜಲ-ಭಾಷೆಯ ಹಿತಾಸಕ್ತಿ ರಕ್ಷಣೆಯ ವಿಷಯದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ ಕರ್ನಾಟಕದ ಪ್ರತಿಷ್ಠೆಯನ್ನು ಇನ್ನಷ್ಟು ಉತ್ತುಂಗಕ್ಕೇರಿಸುವ ಸಂಕಲ್ಪ ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸರಕಾರವಾಗಬೇಕು.

## ಜನಪ್ರತಿನಿಧಿಗಳ ಮನವಿಗೆ ಸ್ಪಂದನ

ಕಳೆದ ಕೆಲವು ತಿಂಗಳುಗಳಿಂದ ಸರಕಾರದ ಮಟ್ಟದಲ್ಲಿನ ಅಧಿಕಾರ ಹಸ್ತಾಂತರ ಗೊಂದಲದಿಂದ ರಾಜ್ಯದ ಒಟ್ಟಾರೆ ಆಡಳಿತ ಯಂತ್ರ ಒಂದಿಷ್ಟು ಜಿಡ್ಡುಗಟ್ಟಿದೆ. ಈ ಹಿನ್ನೆಲೆಯಲ್ಲಿ ಆಡಳಿತ ವ್ಯವಸ್ಥೆಗೆ ತತ್‌ಕ್ಷಣ ಚುರುಕು ಮುಟ್ಟಿಸುವ ಕಾರ್ಯವಾಗಬೇಕು.

ಕಳೆದ ಬಾರಿ ಕೆಲವು ಸಚಿವರನ್ನು ಹೊರಗಳಿಗೆ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಲಾಗಿತ್ತಾದರೂ ಜನತೆಗೆ ಅವರ ದರ್ಶನ ಬಲು ಅಪರೂಪ ಎಂಬಂತಾಗಿತ್ತು. ಹೀಗಾಗಿ ಜನರ ಸಮಸ್ಯೆ, ಅಭಿವೃದ್ಧಿ ಯೋಜನೆಗಳ ಪ್ರಸ್ತಾವ, ಜನಪ್ರತಿನಿಧಿಗಳ ಮನವಿಗೆ ಸ್ಪಂದನವೇ ಇಲ್ಲದಂತಾಗಿತ್ತು. ಹಾಲಿ ಸರಕಾರದಲ್ಲಿ ಇಂತಹ ಸಮಸ್ಯೆಗಳು ತಲೆದೋರದಂತೆ ಮುಖ್ಯಮಂತ್ರಿ ಅವರು ಎಚ್ಚರಿಕೆಯ ಹೆಜ್ಜೆ ಇರಿಸಬೇಕು.



# ರಾಮಾಯಣ

ಭೂಮಿಜೆಯಿಂದ ಬೀಳ್ಕೊಂಡ ಮರುತಸುತನು
ರಕ್ಕಸನ ನಂದನವನ್ನು ಧ್ವಂಸಮಾಡಲು ನಿಶ್ಚಯಿ

• ಹಿಂದಿನ ಸಂಚಿಕೆಯಿಂದ **121ನೆಯ ಅಧ್ಯಾಯ**

ಭವಾನಿ ಕೇಳು, ಸೀತೆಯಿಂದ ಪಡೆದ ಚೂಡಾಮಣಿಯನ್ನಿಟ್ಟುಕೊಂಡು ಅಶೋಕವನದ ಒಂದು ಜಾಗದಲ್ಲಿ ನಂದನವನ್ನು ನೋಡುತ್ತ ಆಂಜನೇಯನು ಕುಳಿತಿರಲು, ತಂಪಾದ ಗಾಳಿ ಮೆಲ್ಲಗೆ ಬೀಸಿ ತನ್ನ ಮಗನನ್ನು ನೇವರಿಸಿತು. ಅಷ್ಟು ಹೊತ್ತಿಗೆ ದೇವಾಲಯಗಳಲ್ಲಿನ ಶಂಖನಾದವು ಕೇಳಿಸಿತು, ಹರ್ಮ್ಯಗಳಿಂದ ಗಣಿಕೆಯರ ಮಧುರ ಗಾಯನವೂ ಹೊಮ್ಮಿತು, ಜೊತೆಗೆ ದ್ವಿಜಕುಲದ ಮಂತ್ರಘೋಷವು ಹರಡಿತು, ಆದರೆ ಚಕ್ರವಾಕ ಪಕ್ಷಿಗಳು ಮರುಗತೊಡಗಿದುವು. ನಲ್ಲರ ಬಿಗಿಯಪ್ಪುಗೆಯಲ್ಲಿ ಸುಖನಿದ್ರೆಯಲ್ಲಿದ್ದ ಮುಗ್ಗೆಯರ ಸಂತಸಕ್ಕೂ, ಕಾಮನ ಸೊಗಸಿಗೂ ಅಡ್ಡಿಯಾಗಿ ಹುಂಜಗಳ ಕೊಕ್ಕೊಕ್ಕೋ ಎಂಬ ಎಚ್ಚರದ ಧ್ವನಿ ಮೊಳಗಿತು. ಚಂದ್ರನು ಹೊರಡುವ ಹೊತ್ತು ಬರಲು, ತನ್ನ ಪತಿಯಲ್ಲಿನ ಅತಿಶಯ ಅನುರಾಗದಿಂದ ಲಜ್ಜೆಯನ್ನು ಬಿಟ್ಟು ಉತ್ಕಂಠತೆಯಿಂದ ರತಿ ಸುಖವನ್ನನುಭವಿಸಿ ಆಯಾಸದಿಂದ ಮಲಗಿರುವ ಸತಿಯ ಕೂದಲು ಹರಡಿಕೊಂಡಿದೆಯೋ ಎಂಬಂತೆ ಕತ್ತಲು ವಿರಳವಾಯಿತು. ಕೋಳಿಯ ಕೂಗು ಕೇಳಿದ ಜಾರಿಣಿಯರು ಗಾಬರಿಯಿಂದ ಮೇಲೆದ್ದು ತೊಡರಿಕೊಂಡಿದ್ದ ಸರಗಳನ್ನು ನೇರ್ಪಡಿಸಿಕೊಂಡು, ಕೆನ್ನೆಗೆ ಅಂಟಿದ್ದ ತಾಂಬೂಲದ ಕೆಂಪನ್ನು ಒರೆಸಿಕೊಂಡು, ಸೆರಗನ್ನು ಸರಿಪಡಿಸಿಕೊಳ್ಳುತ್ತ ಸಪ್ಪುಳವಾಗದ ಹಾಗೆ ಮೆಲ್ಲನೆ ನಡೆಯುತ್ತ ಸುತ್ತಲೂ ಬೆದರುಗಂಗಳಿಂದ ನೋಡುತ್ತ ವನದಿಂದ ಜಾರಿಕೊಂಡರು. ಅತಿ ಮಧುರ ದನಿಯಿಂದ ಕರೆದು, ಕುಡಿನೋಟವನ್ನು ಸೇರಿಸಿ ಬಿಗಿಯಪ್ಪಿ, ಗಲ್ಲಗಳನ್ನು ಅಲುಗಿಸಿ, ಕೊಸರಿಕೊಂಡರೂ ಚೆಂದುಟಿಯ ರಸವನ್ನು ಹೀರಿ, ಕಾಮೋನ್ಮಾದವುಂಟುಮಾಡಿ ನಾನಾ ವಿಧದಿಂದ ಕೂಡಿದ ನಲ್ಲನ ಆಟಗಳನ್ನು ನೆನೆಸಿಕೊಂಡು ತಿರುತಿರುಗಿ ನೋಡುತ್ತ ಸುದತಿಯೊಬ್ಬಳು ಮನೆಯ ಕಡೆ ಹೆಜ್ಜೆಯಿಟ್ಟಳು. ಸೆರಗನ್ನು ಹಿಡಿದೆಳೆಯಬೇಡ, ಆಗಲೇ ಕೋಳಿ ಕೂಗಿತು, ಅಕ್ಕಪಕ್ಕದವರೆಲ್ಲ ಎಚ್ಚರಗೊಂಡಿದ್ದಾರೆ ಎಂದು ಒಬ್ಬ ಅಭಿಸಾರಿಕೆಯು ಭೀತಿಯಿಂದ ಕೈಬಿಡಿಸಿಕೊಳ್ಳುತ್ತ, ಮೂಡಲಿನ ಕೆಂಪನ್ನು ನೋಡಿ ಬೆದರಿ, ದಟ್ಟಡಿಗಳನ್ನಿಡುವಾಗ ತನ್ನ ಕುಚತಟದಲ್ಲಿನ ಗುರುತುಗಳನ್ನು ಕಂಡು ಚಪಲತೆಗೊಳಗಾಗಿ ಮರುಗುತ್ತ ಹೋದಳು. ಚಕ್ರವಾಕಗಳು ಹರ್ಷಗೊಳ್ಳಲು, ಸುತ್ತಲಿನ ಕತ್ತಲು ಹರಿಯುತ್ತಿರಲು ಪದ್ಮಿನಿಗಳು ಕಣ್ಣುಗಳನ್ನು ಅರೆತೆರೆದು, ಇನನ ವಿರಹಮೂರ್ಛೆಯಿಂದ ಎಚ್ಚರಗೊಳ್ಳುತ್ತ ಸಂಭ್ರಮಿಸಲು, ಸಂತಸದ ಕಮಲಗಳ ಬಳಿ ಆನಂದದಿಂದ ಹಂಸಗಳು ಎಹರಿಸತೊಡಗಲು – ಅದನ್ನೆಲ್ಲ ಕಂಡು ಖಿನ್ನನಾದ ಚಂದ್ರಮನು ಕಳೆಗುಂದಿದ. ಸಿರಿಯುಳ್ಳ ಕಾಲದಲ್ಲಿ ಸರಸಸಲ್ಲಾಪಗಳನ್ನು ತೋರಿಸುತ್ತ. ಮಿರುಗುತ್ತಿದ್ದು, ವಿಪತ್ತು ತರಲು ಬೇರೆಯವರೊಡನೆ ರಾತ್ರಿಯನ್ನು ಕಳೆದು ದೇಹಸುಖವನ್ನು ಪಡೆದು, ಅಲ್ಲಿಯೂ ದುರ್ದೆಸೆಯುಂಟಾಗಲು ಹಿಂದಿನದನ್ನು ನೆನೆಸಿಕೊಂಡು ವಾಪಸ್ಸು ಬಂದು ದುಂಬಿವಿಂಡಿಗೆ ಸಂತಸವೀಯುತ್ತ ಕಮಲಗಳು ಅರಳಿದುವು. ಪೂರ್ವದೆಸೆಯೆಂಬ ಹೆಣ್ಣಿನ ಸೀಮಂತ ಕುಂಕುಮದ ಹೊಳಪೋ, ಮಂದೇಹ ದಾನವರ ತಲೆಯಿಂದ ಹರಿಯುತ್ತಿರುವ ರಕ್ತಪ್ರವಾಹವೋ, ಹಂಸದ ಆಡುಂಬೊಲವೋ, ತಾವರೆಗಳ ನಂದನವನವೋ, ಮಂದಾರವೃಕ್ಷದ ಚೆಂದಳಿರೋ, ಮೂಡುಬೆಟ್ಟದ ಶಿರೋರತ್ನದ ಕಾಂತಿಯೋ ಎಂಬಂತೆ ಅರುಣೋದಯವು ತೋರಿತು. ದಿನಲಕ್ಷ್ಮಿಯುಟ್ಟ ಕೆಂಪುಸೀರೆಯೋ, ದೈತ್ಯರನ್ನು ಸಂಹರಿಸಲು ಇಂದ್ರನು ಬಿಟ್ಟ ಆಗ್ನೇಯಾಸ್ತ್ರವೋ, ಸಮುದ್ರರಾಜನು ಪ್ರೀತಿಯಿಂದ ಕೊಟ್ಟ ರತ್ನದ ಒಡವೆಯ ಕಾಂತಿಯೋ, ಸೂರ್ಯನ ತಪಸ್ಸಿನ ದೀಪ್ತಿಯೋ, ಚಕ್ರವಾಕಗಳ ಮದನರಾಗವು ಹೆಚ್ಚಿತ್ತೋ ಎಂಬಂತೆ ಮೂಡಲದಿಕ್ಕಿನಲ್ಲಿ ಅರುಣ ಕಾಂತಿಯು ಪ್ರಜ್ವಲಿಸಿತು. ಸೂರ್ಯನಿಂದ ಗರ್ಭಿಣಿಯಾದ ಪೂರ್ವದಿಗ್ದೇವಿಯ ಮುಖಕಾಂತಿಯೋ, ನಿದ್ದೆಯಿಂದ ಎಚ್ಚೆತ್ತ ಐರಾವಣನ ಹಲ್ಲಿನ ಕಾಂತಿಯೋ, ಕತ್ತಲೆಂಬ ರಕ್ಕಸಸಮುದಾಯವನ್ನು ಕಂಡ ಉಷಃಕಾಲನ ಅಟ್ಟಹಾಸವೋ, ಪೂರ್ವಕನ್ನಿಕೆಯ ಮೇಲೆ ಮೂಡುಬೆಟ್ಟವು ಚೆಲ್ಲುತ್ತಿರುವ ಪರಿಮಳದ ಪುಡಿಯೋ ಎಂಬಂತೆ ಮೂಡಲಿನಲ್ಲಿ ಕಿರಿವೆಳಗು ಕಾಣಿಸಿತು. ಕಾಲನೆಂಬ ಕಮ್ಮಾರನು ಪೂರ್ವದಿಕ್ಕಿನಲ್ಲಿ ಬಡಬನೆಂಬ ಕುಲುಮೆಯನ್ನಿಟ್ಟು ರವಿಬಿಂಬವೆಂಬ ಲೋಹದ ಚೆಂಡನ್ನು ಕಾಸಿ ಬಡಿಯಲು ಕಿಡಿಗಳು ಸಿಡಿಯುತ್ತಿವೆಯೋ ಎಂಬಂತೆ ನಿಧಾನವಾಗಿ ಸೂರ್ಯನ ಬಾಲಕಿರಣಗಳು ಹೊಮ್ಮಿ ಭೂಲೋಕದ ಕುರುಡನ್ನು ಹೋಗಲಾಡಿಸಿ ಸಂತಸವನ್ನಿತ್ತುವು. ಸೂರ್ಯೋದಯವಾಗಲು ಅನಿಲಸಂಭವನು ಹರ್ಷದಿಂದ ಕೂಡಿ ಮೇಲೆದ್ದು ಪೂರ್ವದಿಕ್ಕಿನೆಡೆ ನೋಡಲು, ಇನಮಂಡಲವು ಕಿರುನಗೆಯನ್ನು ಸೂಸುತ್ತ ''ಭಯ ಬೇಡ, ನಾನು ನಿನ್ನ ತಂದೆಯ ಮಿತ್ರ ಎಂದು ತೋಳನ್ನು ಚಾಚಿ ಹನುಮಂತನನ್ನು ಮುಂದಿನ ಕಾರ್ಯಕ್ಕೆ ಸಜ್ಜುಗೊಳಿಸಿತು.

ಮುಂದುವರೆಯುವುದು



ಲೇಖಕರು
**ವಿಶ್ವಾಸ್ .ಡಿ.ಗೌಡ**
ಲೇಖಕರು
ಸಾಮಾಜಿಕ ಚಿಂತಕರು

# ಹಸಿರು ಹಾಸನ ಸ್ವಚ್ಛ ಪರಿಸರ ನಮ್ಮೆಲ್ಲರ ಜವಾಬ್ದಾರಿ

**ಹಸಿರಿನಿಂದ ಕಂಗೊಳಿಸುವ ಹಾಸನ ಜಿಲ್ಲೆ ಪ್ರಕೃತಿ ಸೌಂದರ್ಯಕ್ಕೆ ಹೆಸರುವಾಸಿಯಾಗಿದೆ. ಪಶ್ಚಿಮ ಘಟ್ಟಗಳ ತಪ್ಪಲಿನಲ್ಲಿ ನೆಲೆಸಿರುವ ಈ ಜಿಲ್ಲೆಯಲ್ಲಿ ಅನೇಕ ಕಾಡುಗಳು, ನದಿಗಳು, ಕೆರೆಗಳು ಮತ್ತು ಕೃಷಿ ಭೂಮಿಗಳಿವೆ. ಆದರೆ ಇತ್ತೀಚಿನ ದಿನಗಳಲ್ಲಿ ಪ್ಲಾಸ್ಟಿಕ್ ಬಳಕೆ, ಅರಣ್ಯ ನಾಶ, ಮಾಲಿನ್ಯ ಹಾಗೂ ನಿರ್ಲಕ್ಷ್ಯದಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ವಿಶ್ವ ಪರಿಸರ ದಿನದಂದು ಹಾಸನ ಜಿಲ್ಲೆಯಲ್ಲಿ ಹಲವು ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬಹುದು.**

ಜೂನ್ 5ರಂದು ವಿಶ್ವದಾದ್ಯಂತ ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ. ಪರಿಸರ ಸಂರಕ್ಷಣೆ ಮತ್ತು ಪ್ರಕೃತಿಯ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ದಿನವನ್ನು ಆಚರಿಸಲಾಗುತ್ತದೆ. ಪರಿಸರವು ಮಾನವನ ಬದುಕಿನ ಮೂಲಾಧಾರವಾಗಿದೆ. ಶುದ್ಧ ಗಾಳಿ, ಶುದ್ಧ ನೀರು, ಫಲವತ್ತಾದ ಮಣ್ಣು ಹಾಗೂ ಸಮತೋಲನಯುತ ಹವಾಮಾನವು ಆರೋಗ್ಯಕರ ಜೀವನಕ್ಕೆ ಅತ್ಯಗತ್ಯ. ಆದ್ದರಿಂದ ಪರಿಸರದ ರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ.

ಮೊದಲನೆಯದಾಗಿ, ಜಿಲ್ಲಾದ್ಯಂತ ಗಿಡ ನೆಡುವ ಅಭಿಯಾನವನ್ನು ಕೈಗೊಳ್ಳಬಹುದು. ಶಾಲೆಗಳು, ಕಾಲೇಜುಗಳು, ಸರ್ಕಾರಿ ಕಚೇರಿಗಳು, ದೇವಸ್ಥಾನಗಳ ಆವರಣ, ರಸ್ತೆ ಬದಿಗಳು ಹಾಗೂ ಖಾಲಿ ಜಾಗಗಳಲ್ಲಿ ಸ್ಥಳೀಯ ಪರಿಸರಕ್ಕೆ ಹೊಂದುವ ಗಿಡಗಳನ್ನು ನೆಡಬೇಕು. ಗಿಡ ನೆಡುವುದು ಮಾತ್ರವಲ್ಲದೆ ಅವುಗಳನ್ನು ಪೋಷಿಸಿ ಬೆಳೆಸುವ ಜವಾಬ್ದಾರಿಯನ್ನೂ ಪ್ರತಿಯೊಬ್ಬರೂ ತೆಗೆದುಕೊಳ್ಳಬೇಕು. ಒಂದು ಗಿಡವು ಸಾವಿರಾರು ಜೀವಿಗಳಿಗೆ ಆಶ್ರಯ ನೀಡುವ ಜೊತೆಗೆ ಆಮ್ಲಜನಕವನ್ನು ಒದಗಿಸುತ್ತದೆ. ಎರಡನೆಯದಾಗಿ, ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಳ್ಳಬಹುದು. ಹಾಸನ ನಗರದ ಪ್ರಮುಖ ರಸ್ತೆ, ಬಸ್ ನಿಲ್ದಾಣ, ಮಾರುಕಟ್ಟೆ ಪ್ರದೇಶಗಳು, ಪ್ರವಾಸಿ ತಾಣಗಳು ಹಾಗೂ ಗ್ರಾಮಗಳ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಬೇಕು. ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಎಸೆಯದೇ ಕಸದ ಬುಟ್ಟಿಗಳನ್ನೇ ಬಳಸುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಪ್ಲಾಸ್ಟಿಕ್ ತ್ಯಾಜ್ಯವನ್ನು ಕಡಿಮೆ ಮಾಡಿ ಬಟ್ಟೆ ಅಥವಾ ಕಾಗದದ ಚೀಲಗಳ ಬಳಕೆಗೆ ಉತ್ತೇಜನ ನೀಡಬೇಕು.

ಮೂರನೆಯದಾಗಿ, ಕೆರೆಗಳು ಮತ್ತು ನದಿಗಳ ಸಂರಕ್ಷಣೆಗೆ ವಿಶೇಷ ಗಮನ ನೀಡಬೇಕು. ಹಾಸನ ಜಿಲ್ಲೆಯ ಅನೇಕ ಕೆರೆಗಳು ಮತ್ತು ಜಲಾಶಯಗಳು ಸ್ಥಳೀಯ ಜನರ ಜೀವನಾಡಿಯಾಗಿವೆ. ಇವುಗಳಲ್ಲಿ ಕಸ ಹಾಕುವುದನ್ನು ತಡೆಯಬೇಕು. ಕೆರೆಗಳ ಸುತ್ತಮುತ್ತ ಸ್ವಚ್ಛತಾ ಕಾರ್ಯ ನಡೆಸಿ ನೀರಿನ ಮೂಲಗಳನ್ನು ರಕ್ಷಿಸುವ ಸಂಕಲ್ಪ ಮಾಡಬೇಕು. ಪರಿಸರ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶಾಲಾ-ಕಾಲೇಜುಗಳಲ್ಲಿ ಪರಿಸರ ಜಾಗೃತಿ ರ್ಯಾಲಿ, ಪ್ರಬಂಧ ಸ್ಪರ್ಧೆ, ಚಿತ್ರಕಲೆ ಸ್ಪರ್ಧೆ ಹಾಗೂ ಪರಿಸರ ಕುರಿತ ಉಪನ್ಯಾಸಗಳನ್ನು ಆಯೋಜಿಸಬಹುದು. ವಿದ್ಯಾರ್ಥಿಗಳು ತಮ್ಮ ಮನೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕನಿಷ್ಠ ಒಂದು ಗಿಡವನ್ನು ನೆಟ್ಟು ಅದರ ಆರೈಕೆಯನ್ನು ಮಾಡುವ ಪ್ರತಿಜ್ಞೆ ಕೈಗೊಳ್ಳಬೇಕು.

ಹಾಸನ ಜಿಲ್ಲೆಯನ್ನು ಇನ್ನಷ್ಟು ಸ್ವಚ್ಛವಾಗಿಡಲು ಕೆಲವು ಸರಳ ಕ್ರಮಗಳನ್ನು ಅನುಸರಿಸಬಹುದು. ಮನೆಯಲ್ಲಿ ಒಣ ಮತ್ತು ತೇವ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸುವುದು, ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವುದು, ನೀರನ್ನು ಮಿತವಾಗಿ ಬಳಸುವುದು, ಮಳೆ ನೀರು ಸಂಗ್ರಹಣೆ ವ್ಯವಸ್ಥೆ ಅಳವಡಿಸುವುದು ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆಯನ್ನು ಕಾಪಾಡುವುದು ಅಗತ್ಯವಾಗಿದೆ. ಪ್ರತಿಯೊಬ್ಬ ನಾಗರಿಕನು ತನ್ನ ಮನೆ, ಬೀದಿ ಹಾಗೂ ಗ್ರಾಮದ ಸ್ವಚ್ಛತೆಗೆ ಆದ್ಯತೆ ನೀಡಿದರೆ ಇಡೀ ಜಿಲ್ಲೆ ಸ್ವಚ್ಛವಾಗಿರುತ್ತದೆ.


ಗಿಡಗಳನ್ನು ಬೆಳೆಸುವಾಗ ಸ್ಥಳೀಯ ಪರಿಸರಕ್ಕೆ ಹೊಂದಿಕೊಳ್ಳುವ ಆಲದ ಮರ, ಅರಳಿ, ಹೊಂಗೆ, ಬೇವು, ನೆಲ್ಲಿ, ಮಾವು ಹಾಗೂ ಹಲಸಿನಂತಹ ಗಿಡಗಳಿಗೆ ಆದ್ಯತೆ ನೀಡಬೇಕು. ಗಿಡಗಳಿಗೆ ನಿಯಮಿತವಾಗಿ ನೀರುಣಿಸುವುದು, ರಕ್ಷಣೆಗಾಗಿ ಬೇಲಿ ಹಾಕುವುದು ಹಾಗೂ ಅವುಗಳ ಬೆಳವಣಿಗೆಯನ್ನು ಗಮನಿಸುವುದು ಅಗತ್ಯವಾಗಿದೆ. ನೆಟ್ಟ ಗಿಡ ಬದುಕಿ ಬೆಳೆಯುವುದೇ ನಿಜವಾದ ಪರಿಸರ ಸೇವೆಯಾಗಿದೆ. ವಿಶ್ವ ಪರಿಸರ ದಿನವು ಕೇವಲ ಒಂದು ದಿನದ ಆಚರಣೆಯಾಗದೆ, ವರ್ಷಪೂರ್ತಿ ಪರಿಸರದ ಬಗ್ಗೆ ಕಾಳಜಿ ವಹಿಸುವ ಸಂಕಲ್ಪದ ದಿನವಾಗಬೇಕು.

ಹಸಿರು ಹಾಸನ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿದರೆ ನಮ್ಮ ಜಿಲ್ಲೆ ಇನ್ನಷ್ಟು ಸುಂದರ, ಸ್ವಚ್ಛ ಮತ್ತು ಆರೋಗ್ಯಕರವಾಗಲಿದೆ. ನಮ್ಮ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡುವುದು ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ. ಒಬ್ಬ ವ್ಯಕ್ತಿ ಒಂದು ಗಿಡ ಎಂಬ ಸಂಕಲ್ಪದೊಂದಿಗೆ ಈ ವಿಶ್ವ ಪರಿಸರ ದಿನವನ್ನು ಆಚರಿಸಿ, ಹಸಿರು ಮತ್ತು ಸ್ವಚ್ಛ ಹಾಸನ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸೋಣ.





ಅಂತರಂಗದ ಮಾತು
**ಡಾ.ಸುಧಾಕರ.ಜಿ. ಲಕ್ಕವಳ್ಳಿ**
ಲೇಖಕರು
ಸಾಮಾಜಿಕ ಚಿಂತಕರು



# ಮಲ್ಲರ ಚೈತನ್ಯಕ್ಕೆ ನಿಂಬೆ ಪಾನಕದ ಸತ್ವ

ಕೆಮ್ಮಣ್ಣಿನ ಗರಡಿಯಲ್ಲಿ ದಂಡ-ಬಸ್ಕಿಯ ಬೆಂಕಿಯು ಆರಿದ ಬಳಿಕ, ಮಲ್ಲನ ಮೈ ಜೈವಿಕ ಕ್ಷಾಮದ ಅಂಚಿಗೆ ಬರುತ್ತದೆ. ಧಾರೆಧಾರೆಯಾಗಿ ಸುರಿದ ಬೆವರಿನೊಂದಿಗೆ ದೇಹದ ಲವಣ-ಲವಲವಿಕೆ ಬರಿದಾಗುತ್ತದೆ. ಆಗ ಬಳಲಿದ ತನು-ಮನಕ್ಕೆ ಅಮೃತಸಿಂಚನದಂತೆ ಒದಗುವುದು ಹಿರಿಯರು ಕಂಡ ದಿವ್ಯೌಷಧ ನಿಂಬೆ ಪಾನಕ.

ಹುಳಿ-ಸಿಹಿಯ ಈ ಸರಳ ಪೇಯದ ಹಿಂದೆ ಶರೀರದ ದ್ರವ-ಲವಣಗಳ ಸಮತೋಲನ ಕಾಯುವ ಮಹಾವಿಜ್ಞಾನವಿದೆ.

ಧೂಳು ತುಂಬಿದ ಗಂಟಲಿಗೆ ಇದೊಂದೇ ತಂಪೆರೆಯುವ ಮಧುಧಾರೆ. ನಿಂಬೆಯ ಪೊಟ್ಯಾಸಿಯಮ್, ಸೈಂಧವದ ಸೋಡಿಯಂ ಕೂಡಿ ಸ್ನಾಯು ಸೆಳೆತವನ್ನು ಕ್ಷಣದಲ್ಲಿ ಶಮನಗೊಳಿಸುತ್ತದೆ, ನರಗಳಿಗೆ ತಂಪು ನೀಡುತ್ತದೆ. ಆಸ್ಕೋರ್ಬಿಕ್ ಆಮ್ಲದ ಅಮೃತವು ರೋಗನಿರೋಧಕ ಶಕ್ತಿಯನ್ನು ಏರಿಸಿ, ಧೂಳಿನ ಸೋಂಕಿನಿಂದ ಕಾಪಾಡುತ್ತದೆ, ಅಂಗಾಂಶದ ಗಾಯವನ್ನು ಮಾಯಿಸುತ್ತದೆ. ನಿಂಬೆ ಹೊರಗೆ ಆಮ್ಲ, ಒಳಹೊಕ್ಕರೆ ಕ್ಷಾರ. ಇದು ರಕ್ತದ ಉರಿಯನ್ನು ತಣಿಸಿ, ಪಿ.ಎಚ್ ಮಟ್ಟವನ್ನು ತಹಬಂದಿಗೆ ತಂದು ಮೈಯನ್ನು ಶೀತಲವಾಗಿರಿಸುತ್ತದೆ. ಬಳಲಿಕೆ ಇಳಿದು ಮಲ್ಲ ಮತ್ತೆ ರಣಕ್ಕೆ ಸಜ್ಜಾಗುತ್ತಾನೆ.

ಒಂದು ಲೋಟ ನೀರಿಗೆ ಅರ್ಧ ನಿಂಬೆ ರಸ, ಚಿಟಿಕೆ ಸೈಂಧವ, ತುಸು ಬೆಲ್ಲ ಸೇರಿಸಿ, ತಾಲೀಮಿನ 20 ನಿಮಿಷಗಳ ಬಳಿಕ, ತಣ್ಣೀರಲ್ಲದ ಸಾಮಾನ್ಯ ನೀರಿನಲ್ಲಿ ನಿಧಾನವಾಗಿ ಹೀರಿ ಕುಡಿಯಬೇಕು.

ಅತಿಯಾದರೆ ಹಲ್ಲಿನ ಕವಚ ಸವೆದೀತು. ಸಕ್ಕರೆ ಬೇಡ, ಬೆಲ್ಲವೇ ಲೇಸು.

ಹುಣ್ಣಿದ್ದವರು ವೈದ್ಯರ ಸಲಹೆ ಪಡೆಯಿರಿ.ಕೃತಕ ಕ್ರೀಡಾ ಪಾನೀಯಗಳ ರಾಸಾಯನಿಕ ಮಳೆಯ ಬದಲು, ಈ ನೆಲದ ನಿಂಬೆ ಪಾನಕವೇ ಮಲ್ಲರ ನಿಜವಾದ ರಕ್ಷಾಕವಚ. ಗರಡಿಯ ಈ ರಹಸ್ಯ ಇಂದಿನ ಜಿಮ್ ಯುವಕರಿಗೂ ಆರೋಗ್ಯದ ದೀವಟಿಗೆ.

## ಶ್ರೀ ರಾಘವೇಂದ್ರ ಸ್ವಾಮಿಗಳ ವೃಂದಾವನಕ್ಕೆ 108 ಎಳನೀರಿನ ಅಭಿಷೇಕ

• **ಉದಯವಾಹಿನಿ, ಬೆಂಗಳೂರು**


ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ವಿಚಾರಣಾಕರ್ತರಾದ ಶ್ರೀಗಿರಿರಾಜಾಚಾರ್ ಹಾಗೂ ನೂತನ ವ್ಯವಸ್ಥಾಪಕರಾದ ಶ್ರೀ ನಂದಕಿಶೋರಾಚಾರ್ ನೇತೃತ್ವದಲ್ಲಿ ಗುರುವಾರದ ಪ್ರಯುಕ್ತ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಅಧಿಕಮಾಸದ ಪ್ರಯುಕ್ತ ವಿಶೇಷವಾಗಿ 108 ಎಳೆನೀರಿನ ಅಭಿಷೇಕ ಹಾಗೂ ಮಾವಿನಹಣ್ಣಿನ ಅಭಿಷೇಕವೂ ಗುರು ಸ್ತೋತ್ರ ಪಾರಾಯಣದೊಂದಿಗೆ ಅರ್ಚಕರಿಂದ ನೆರವೇರಿತು ಸಂದರ್ಭದಲ್ಲಿ ಚಿತ್ರನಟರಾದ ಶಿಷ್ಯ ಖ್ಯಾತಿಯ ಶ್ರೀಯುತ ದೀಪಕ್ ರವರು ರಾಯರ ಸನ್ನಿಧಿಗೆ ಆಗಮಿಸಿ ಪ್ರಾರ್ಥನೆ ಸಲ್ಲಿಸಿ ದೀಪ ಬೆಳಗಿಸಿದರು ಇದೇ ಸಂದರ್ಭದಲ್ಲಿ ಶ್ರೀ ಹರಿ ಭಜನೆ ಯೊಂದಿಗೆ ನೂರಾರು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸನ್ನಿಧಿಗೆ ಆಗಮಿಸಿ, ತಮ್ಮ ಇಷ್ಟಾರ್ಥಕ್ಕಾಗಿ ಶ್ರೀಗುರು ರಾಯರನ್ನು ಪ್ರಾರ್ಥಿಸಿ ದೀಪವನ್ನು ಬೆಳಗಿಸಿ ತೀರ್ಥ ಫಲ ಮಂತ್ರಾಕ್ಷತೆ ಸ್ವೀಕರಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು.



# ಹೂವಿನ ಕಣಿವೆ ವೀಕ್ಷಿಸಲು ಪ್ರವಾಸಿಗರಿಗೆ ಅವಕಾಶ: ಪ್ರಕೃತಿ ಪ್ರಿಯರು ಇಲ್ಲಿಗೆ ಭೇಟಿ ನೀಡುವ ಮುನ್ನ ತಿಳಿದುಕೊಳ್ಳಬೇಕಿರುವ ವಿಷಯಗಳಿವು!

ಪ್ರತಿಯೊಬ್ಬರೂ ಆರೋಗ್ಯಕರ, ಫಿಟ್ ಹಾಗೂ ತೊಂದರೆಮುಕ್ತ ಜೀವನವನ್ನು ಜಾಗತಿಕವಾಗಿ ಪ್ರಸಿದ್ಧವಾದ ಹೂವುಗಳ ಕಣಿವೆ ವೀಕ್ಷಿಸುವ ಪ್ರವಾಸಿಗರಿಗೆ ಜೂನ್ 1ರಿಂದ ಅವಕಾಶ ನೀಡಲಾಗುತ್ತದೆ. ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿರುವ ಹೂವುಗಳ ಕಣಿವೆ ವಿಶ್ವ ಪರಂಪರೆಯ ತಾಣದ ಪ್ರತಿಷ್ಠಿತ ಸ್ಥಾನಮಾನವನ್ನು ಹೊಂದಿದೆ. ಪ್ರತಿವರ್ಷ ದೇಶ ಹಾಗೂ ವಿದೇಶಗಳಿಂದ ಅಪಾರ ಸಂಖ್ಯೆಯ ಪ್ರವಾಸಿಗರು ಈ ಕಣಿವೆಯ ಉಸಿರುಕಟ್ಟುವ ಸೌಂದರ್ಯವನ್ನು ವೀಕ್ಷಿಸಲು ಸೇರುತ್ತಾರೆ. 600ಕ್ಕೂ ಹೆಚ್ಚು ವಿವಿಧ ಜಾತಿಯ ಹೂವುಗಳಿಗೆ ನೆಲೆಯಾಗಿರುವ ಈ ಕಣಿವೆಯು ಈ ಪ್ರದೇಶಕ್ಕೆ ಸ್ಥಳೀಯವಾಗಿರುವ ಹಲವಾರು ಹೂವಿನ ಪ್ರಭೇದಗಳನ್ನು ಹೊಂದಿದೆ. ಅಂದರೆ, ಇವು ಭೂಮಿಯ ಮೇಲೆ ಬೇರೆಲ್ಲಿಯೂ ಕಂಡುಬರುವುದಿಲ್ಲ.

ಹೂವುಗಳ ಕಣಿವೆ ಸಮುದ್ರ ಮಟ್ಟದಿಂದ ಸುಮಾರು 12,500 ಅಡಿ ಎತ್ತರದಲ್ಲಿದೆ. ಈ ಕಣಿವೆಯ ವಿಶಿಷ್ಟ ಲಕ್ಷಣವೆಂದರೆ ಪ್ರತಿ 15 ದಿನಗಳಿಗೊಮ್ಮೆ ವಿವಿಧ ಬಗೆಯ ಹೂವುಗಳು ಅರಳುತ್ತವೆ. ಇದರಿಂದ ಭೂದೃಶ್ಯವು ನಿರಂತರವಾಗಿ ಬಣ್ಣದಲ್ಲಿ ಬದಲಾಗುತ್ತದೆ. ಹೂವುಗಳ ಕಣಿವೆ ನಂದಾ ದೇವಿ ರಾಷ್ಟ್ರೀಯ ಉದ್ಯಾನದ ವ್ಯಾಪ್ತಿಗೆ ಬರುತ್ತದೆ. ಜುಲೈ 17, 2005ರಂದು, ಯುನೆಸ್ಕೋ ಹೂವುಗಳ ಕಣಿವೆಯನ್ನು ವಿಶ್ವ ಪರಂಪರೆಯ ತಾಣವೆಂದು ಘೋಷಿಸಿತು.



ಗರ್ವಾಲ್ ಹಿಮಾಲಯದ ಚಮೋಲಿ ಜಿಲ್ಲೆಯಲ್ಲಿ ನೆಲೆಗೊಂಡಿರುವ ಈ ಕಾಲೋಚಿತ ಅದ್ಭುತ ತಾಣಕ್ಕೆ ಅಕ್ಟೋಬರ್ 31, 2026ರವರೆಗೆ ಪ್ರವಾಸಿಗರು ಭೇಟಿ ನೀಡಬಹುದು. ಆಗಸ್ಟ್ ಹಾಗೂ ಸೆಪ್ಟೆಂಬರ್ ತಿಂಗಳುಗಳಲ್ಲಿ ಹೂವುಗಳ ಕಣಿವೆಯ ಅತ್ಯಂತ ಅದ್ಭುತ ದೃಶ್ಯಗಳನ್ನು ಕಣ್ತುಂಬಿಕೊಳ್ಳಬಹುದು. ಈ ಕಣಿವೆ ಸುಮಾರು 87 ಚದರ ಕಿಮೀ ವಿಸ್ತೀರ್ಣವನ್ನು ಹೊಂದಿದೆ. ಇಲ್ಲಿ ಪ್ರವಾಸಿಗರು ವಿವಿಧ ಹೂವುಗಳು, ಸಸ್ಯಗಳನ್ನು ಒಳಗೊಂಡಂತೆ ವೈವಿಧ್ಯಮಯ ಸಸ್ಯವರ್ಗ ಹಾಗೂ ವಿವಿಧ ವನ್ಯಜೀವಿಗಳನ್ನು ಅನುಭವಿಸುವ ಅವಕಾಶವನ್ನು ಹೊಂದಿದ್ದಾರೆ. ಜುಲೈ, ಆಗಸ್ಟ್ ತಿಂಗಳುಗಳು ಗರಿಷ್ಠ ಹೂಬಿಡುವ ಋತುವನ್ನು ಗುರುತಿಸುತ್ತವೆ, ಆಗ ಕಣಿವೆಯೊಳಗೆ ಅತ್ಯಂತ ವೈವಿಧ್ಯಮಯ ಹೂವುಗಳು ಅರಳುತ್ತವೆ. ಇದರ ಪರಿಣಾಮವಾಗಿ ಈ ಎರಡು ತಿಂಗಳುಗಳು ಹೂವುಗಳ ಕಣಿವೆಗೆ ಭೇಟಿ ನೀಡುವ ಪ್ರವಾಸಿಗರ ಅತ್ಯಧಿಕ ಒಳಹರಿವು ಸಹ ನೋಡುತ್ತವೆ. ಹೂವುಗಳ ಕಣಿವೆಯನ್ನು ಬ್ರಿಟಿಷ್ ಪರ್ವತಾರೋಹಿ ಫ್ರಾಂಕ್ ಎಸ್ ಸ್ಮಿತ್ ಮತ್ತು ಅವರ ಸಹಚರ ಆರ್.ಎಲ್. ಹೋಲ್ಡ್ಸ್‌ವರ್ತ್ ಕಂಡುಹಿಡಿದರು. 1931ರಲ್ಲಿ ಈ ಇಬ್ಬರು ಪರ್ವತಾರೋಹಿಗಳು ಈ ಭವ್ಯ ಕಣಿವೆಯ ಮೇಲೆ ಮೊದಲು ಕಣ್ಣಿಟ್ಟರು. ಅವರು ಕಣಿವೆಯಿಂದ ಆಕರ್ಷಿತರಾದರು, ಇಲ್ಲಿ ಸಾಕಷ್ಟು ಸಮಯವನ್ನು ಕಳೆದರು.

1937ರಲ್ಲಿ ತಮ್ಮ ತಾಯ್ನಾಡಿಗೆ ಹಿಂದಿರುಗಿದ ನಂತರ, ಸ್ಮಿತ್ ದಿ ವ್ಯಾಲಿ ಆಫ್ ಫ್ಲವರ್ಸ್ ಎಂಬ ಪುಸ್ತಕವನ್ನು ಬರೆದರು. ಹೂವುಗಳ ಕಣಿವೆಯ ಮಹತ್ವವು ಧಾರ್ಮಿಕ ನಂಬಿಕೆಗಳೊಂದಿಗೆ ಆಳವಾಗಿ ಹೆಣೆದುಕೊಂಡಿದೆ. ದಂತಕಥೆಯ ಪ್ರಕಾರ, ಲಕ್ಷ್ಮಣನು ಪ್ರಜ್ಞೆ ತಪ್ಪಿದಾಗ, ಹನುಮಂತನು ಸಂಜೀವಿನಿ ಗಿಡಮೂಲಿಕೆಯನ್ನು ಹುಡುಕುತ್ತಾ ಈ ಪರ್ವತದ ಬಳಿಗೆ ಬಂದನು.

# ಸೈಕ್ಲಿಂಗ್‌ನಿಂದ ರಕ್ತ ಪರಿಚಲನೆ ಸುಧಾರಣೆ: ಹೃದಯಾಘಾತ, ಪಾರ್ಶ್ವವಾಯು ಅಪಾಯ ದೂರ



ಸೈಕ್ಲಿಂಗ್‌ನಿಂದ ರಕ್ತ ಪರಿಚಲನೆ ಸುಧಾರಣೆ: ಹೃದಯಾಘಾತ, ಪಾರ್ಶ್ವವಾಯು ಅಪಾಯ ದೂರ ಇಂದಿನ ವೇಗದ ಜೀವನದಲ್ಲಿ ಹೆಚ್ಚುತ್ತಿರುವ ಬೊಜ್ಜು ಹಾಗೂ ಅನಾರೋಗ್ಯಕರ ಜೀವನಶೈಲಿ ಪ್ರಮುಖ ಸವಾಲಾಗಿದೆ. ಇದರ ಪರಿಣಾಮವಾಗಿ ಅನೇಕರು ದೇಹದ ತೂಕ ಇಳಿಸಿಕೊಳ್ಳಲು ಜಿಮ್, ಆಹಾರ ಕ್ರಮ ಹಾಗೂ ದುಬಾರಿ ಫಿಟ್‌ನೆಸ್ ಯೋಜನೆಗಳತ್ತ ಚಿತ್ತ ಹರಿಸುತ್ತಿದ್ದಾರೆ. ಆದರೆ, ಪ್ರತಿನಿತ್ಯ ಸೈಕ್ಲಿಂಗ್ ಮಾಡುವುದರಿಂದ ದೇಹದ ತೂಕ ಇಳಿಸಿಕೊಳ್ಳುವುದರ ಜೊತೆಗೆ ವಿವಿಧ ಪ್ರಯೋಜನಗಳಿವೆ.

ವಿಶ್ವ ಬೈಸಿಕಲ್ ದಿನ ಸೈಕ್ಲಿಂಗ್‌ನ ಆರೋಗ್ಯ, ಪರಿಸರ ಮತ್ತು ಸಾಮಾಜಿಕ ಪ್ರಯೋಜನಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಜೂನ್ 3ರಂದು ವಿಶ್ವ ಬೈಸಿಕಲ್ ದಿನವನ್ನು ಆಚರಿಸಲಾಗುತ್ತದೆ. ಸೈಕಲ್ ಅನ್ನು ಸುಸ್ಥಿರ, ಕೈಗೆಟುಕುವ ಮತ್ತು ಆರೋಗ್ಯಕರ ಸಾರಿಗೆ ಸಾಧನವಾಗಿ ಆಚರಿಸಲು 'ಭವಿಷ್ಯದ ಹಸಿರಿಗಾಗಿ ಸೈಕ್ಲಿಂಗ್' ಎಂಬುದು 2026ರ ಥೀಮ್. ಈ ದಿನದಂದು ಸೈಕ್ಲಿಂಗ್‌ಗೆ ಸಂಬಂಧಿಸಿದ ವೈಜ್ಞಾನಿಕ ಸಂಗತಿಗಳು ಹಾಗೂ ದೇಹದ ತೂಕ ಇಳಿಸುವಲ್ಲಿ ಹಾಗೂ ಹಲವು ಆರೋಗ್ಯದ ಪ್ರಯೋಜನಗಳ ಕುರಿತು ವಿವರವಾಗಿ ತಿಳಿಯೋಣ.

ಸೈಕ್ಲಿಂಗ್ ಸಮಯದಲ್ಲಿ ದೇಹದ ಪ್ರಮುಖ ಸ್ನಾಯು ಗುಂಪುಗಳು ಸಕ್ರಿಯವಾಗುತ್ತವೆ. ಇದು ಶಕ್ತಿಯ ವೆಚ್ಚ ಹೆಚ್ಚಿಸುತ್ತದೆ. ದೇಹವು ತಾನು ಸೇವಿಸುವುದಕ್ಕಿಂತ ಹೆಚ್ಚಿನ ಕ್ಯಾಲೊರಿಗಳನ್ನು ವ್ಯಯಿಸಿದಾಗ ಅದು ಸಂಗ್ರಹವಾಗಿರುವ ಕೊಬ್ಬನ್ನು ಶಕ್ತಿಯ ಮೂಲವಾಗಿ ಬಳಸಿಕೊಳ್ಳಲು ಪ್ರಾರಂಭಿಸುತ್ತದೆ. ಈ ಪ್ರಕ್ರಿಯೆ ಕ್ರಮೇಣ ದೇಹದ ತೂಕ ನಷ್ಟವನ್ನು ಸುಗಮಗೊಳಿಸುತ್ತದೆ. ನಿಯಮಿತ ಸೈಕ್ಲಿಂಗ್ ಚಯಾಪಚಯ ಕ್ರಿಯೆ ಸುಧಾರಿಸುತ್ತದೆ, ದೇಹವು ದೀರ್ಘಕಾಲದವರೆಗೆ ಕ್ಯಾಲೊರಿಗಳನ್ನು ಕರಗಿಸಲು ಮುಂದುವರಿಸಲು ಅನುವು ಮಾಡಿಕೊಡುತ್ತದೆ.ಆರೋಗ್ಯ ತಜ್ಞರು ತಿಳಿಸುವ ಪ್ರಕಾರ, ಆರಂಭಿಕರು ದಿನಕ್ಕೆ 20ರಿಂದ 30 ನಿಮಿಷ ಸೈಕ್ಲಿಂಗ್ ಮಾಡುವುದನ್ನು ಪ್ರಾರಂಭಿಸಬೇಕು. ಫಿಟ್‌ನೆಸ್ ಕಾಪಾಡಿಕೊಳ್ಳಲು 45 ನಿಮಿಷ ಸೈಕ್ಲಿಂಗ್ ಮಾಡಿದರೆ ಸಾಕಾಗುತ್ತದೆ. ದೇಹದ ತೂಕ ಇಳಿಸಿಕೊಳ್ಳಲು ವಾರಕ್ಕೆ ಕನಿಷ್ಠ ಐದು ದಿನಗಳವರೆಗೆ 45ರಿಂದ 60 ನಿಮಿಷಗಳವರೆಗೆ ಸೈಕ್ಲಿಂಗ್ ಮಾಡುವುದು ಪ್ರಯೋಜನಕಾರಿ ಎಂದು ತಿಳಿಸುತ್ತಾರೆ.

ನಿಯಮಿತ ಸೈಕ್ಲಿಂಗ್ ಹೃದಯರಕ್ತನಾಳದ ಫಿಟ್‌ನೆಸ್ ಹೆಚ್ಚಿಸುತ್ತದೆ. ಸ್ನಾಯುಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ. ದೇಹದ ತೂಕ ನಿರ್ವಹಣೆಗೆ ಸಹಾಯವಾಗುತ್ತದೆ. ಕೀಲುಗಳ ಮೇಲೆ ಕಡಿಮೆ ಒತ್ತಡ ಬೀರುವ ಉತ್ತಮ ವ್ಯಾಯಾಮವಾಗಿದೆ. ಒತ್ತಡ ಕಡಿಮೆ ಮಾಡಲು ಹಾಗೂ ಮಾನಸಿಕ ಆರೋಗ್ಯ ಸುಧಾರಿಸಲು ಹೆಚ್ಚು ಪರಿಣಾಮಕಾರಿಯಾಗಿದೆ. ಸೈಕ್ಲಿಂಗ್ ಮಾಡುವುದರಿಂದ ಶ್ವಾಸಕೋಶ ಹಾಗೂ ರಕ್ತನಾಳಗಳನ್ನು ಬಲಪಡಿಸುತ್ತದೆ. ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ, ಹೃದಯಾಘಾತದಂತಹ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

ಪ್ರತಿದಿನ ಸೈಕ್ಲಿಂಗ್ ಮಾಡುವುದರಿಂದ ದೇಹದಲ್ಲಿರುವ ಅಧಿಕ ಕೊಬ್ಬು ಕರಗಬಹುದು. ವೇಗವಾಗಿ ಸೈಕಲ್ ತುಳಿಯುವುದರಿಂದ ಕ್ಯಾಲೊರಿಗಳು ವೇಗವಾಗಿ ಕರಗಬಹುದು. ಸೈಕ್ಲಿಂಗ್ ಮಾಡುವಾಗ ದೇಹದಲ್ಲಿ ಎಂಡಾರ್ಫಿನ್ ಎಂಬ ಹಾರ್ಮೋನುಗಳು ಬಿಡುಗಡೆಯಾಗುತ್ತವೆ. ಇದರಿಂದ ಒತ್ತಡ, ಆತಂಕ ಹಾಗು ಖಿನ್ನತೆಯನ್ನು ಕಡಿಮೆ ಮಾಡಿ ಮನಸ್ಸಿಗೆ ಉಲ್ಲಾಸ ನೀಡುತ್ತದೆ. ಸೈಕ್ಲಿಂಗ್ ಮಾಡುವುದರಿಂದ ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಿಸಲು ಸಹಾಯ ಮಾಡುತ್ತದೆ. ಟೈಪ್-2 ಮಧುಮೇಹದ ಅಪಾಯ ಕಡಿಮೆ ಮಾಡುತ್ತದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಉನ್ನತ ಮಟ್ಟದಲ್ಲಿ ಕೆಲಸ ಮಾಡುವ ಕೆಲವರಿಂದ ಸ್ವಲ್ಪ ವಿರೋಧ ಬರಬಹುದಾದರೂ ಶಾಂತವಾಗಿರುವುದು ಮುಖ್ಯ. ಮನೆಯಿಂದ ಹೊರಗೆ ಹೋಗುವ ಮೂಲಕ, ಇಂದು ನೀವು ತೆರೆದ ಗಾಳಿಯಲ್ಲಿ ನಡೆಯಲು ಬಯಸುತ್ತೀರಿ. ಇಂದು ನಿಮ್ಮ ಮನಸ್ಸು ಶಾಂತವಾಗಿರುತ್ತದೆ,

**ವೃಷಭ** ಮನೆಯಲ್ಲಿ ಕೆಲಸ ಮಾಡುವಾಗ ವಿಶೇಷ ಎಚ್ಚರ ವಹಿಸಿ. ಮನೆ ಬಳಕೆಯ ವಸ್ತುಗಳ ಯಾವುದೇ ಅಸಡ್ಡೆಯ ಬಳಕೆ ನಿಮಗೆ ಸಮಸ್ಯೆ ಉಂಟುಮಾಡಬಹುದು. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ.

**ಮಿಥುನ** ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ.

**ಕರ್ಕಾಟಕ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ.

**ಸಿಂಹ** ಹೊಸ ಹೂಡಿಕೆಗಳನ್ನು ಮಾಡುವಾಗ ಸ್ವತಂತ್ರರಾಗಿರಿ ಮತ್ತು ನಿಮ್ಮ ಸ್ವಂತ ನಿರ್ಧಾರಗಳನ್ನು ಕೈಗೊಳ್ಳಿ. ಪ್ರೀತಿಪಾತ್ರರಿಲ್ಲದೇ ನಿಮ್ಮ ಸಮಯ ಕೊಲ್ಲುವುದು ಕಷ್ಟ. ಸ್ಪರ್ಧಾತ್ಮಕ ಪರೀಕ್ಷೆಗೆ ಹೋಗುತ್ತಿರುವವರು ಶಾಂತವಾಗಿರಬೇಕು. ಪರೀಕ್ಷೆಯ ಭಯ ನೀವು ಧೈರ್ಯಗೆಡಿಸುವುದು ಬೇಡ.

**ಕನ್ಯಾ** ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ –ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ ನಿಮ್ಮನ್ನು ತನ್ನ ಜೀವಕ್ಕಿಂತಲೂ ಹೆಚ್ಚು ಪ್ರೀತಿಸುವ ವ್ಯಕ್ತಿಯನ್ನು ಸಂಧಿಸುತ್ತೀರಿ.

**ತುಲಾ** ಸಾಮಾಜಿಕ ಅಡೆತಡೆಗಳನ್ನು ದಾಟಲು ಸಾಧ್ಯವಾಗುವುದಿಲ್ಲ. ಹೊಸ ಕೌಶಲ್ಯ ಮತ್ತು ತಂತ್ರಗಳನ್ನು ಬಳಸಿಕೊಳ್ಳುವುದು ವೃತ್ತಿಯ ಬೆಳವಣಿಗೆಗೆ ಅಗತ್ಯವಾಗಬಹುದು. ಅನಕೂಲಕರ ಗ್ರಹಗಳು ಇಂದು ನೀವು ಸಂತೋಷ ಅನುಭವಿಸಲು ಸಾಕಷ್ಟು ಕಾರಣಗಳನ್ನು ತರುತ್ತವೆ.

**ವೃಶ್ಚಿಕ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ.

**ಧನಸ್ಸು** ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು. ನೀವು ಅವರ ಸಲಹೆಯನ್ನು ಪಾಲಿಸಬೇಕು. ಒಂದು ಉಜ್ವಲವಾದ ಹಾಸ್ಯದಿಂದ ತುಂಬಿದ ದಿನ.

**ಮಕರ** ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು.

**ಕುಂಭ** ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ.

**ಮೀನ** ನಗುವಿನ ಚಿಕಿತ್ಸೆ ಎಲ್ಲಾ ಸಮಸ್ಯೆಗಳಿಗೂ ಮದ್ದಾಗಿರುವುದರಿಂದ ನಿಮ್ಮ ಅನಾರೋಗ್ಯ ಗುಣಪಡಿಸಲು ನಗುವಿನ ಚಿಕಿತ್ಸೆ ಬಳಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

# ಕಡಲೆಕಾಯಿ ಸಂಸ್ಕರಣಾ ಘಟಕ ಉದ್ಘಾಟಿಸಿದ ಹಣಕಾಸು ಸಚಿವೆ

• ಉದಯವಾಹಿನಿ,ಯಾದಗಿರಿ


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಸಂಪೂರ್ಣವಾಗಿ ಮಹಿಳೆಯರೇ ನಡೆಸುವ ನಬಾರ್ಡ್ ಬೆಂಬಲಿತ ಕಡಲೆಕಾಯಿ ಸಂಸ್ಕರಣಾ ಘಟಕವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಗುರುವಾರ ಉದ್ಘಾಟಿಸಿದರು. ಜಿಲ್ಲೆ ವಾರ್ಷಿಕವಾಗಿ ಸುಮಾರು 22,500 ಮೆಟ್ರಿಕ್ ಟನ್ ಕಡಲೆಕಾಯಿ ಉತ್ಪಾದಿಸುತ್ತದೆ ಸಚಿವರು ಇದೇ ವೇಳೆ ಹೇಳಿದರು.

ನಾವು ಈಗ ಕಡಲೆಕಾಯಿಯಿಂದ ಎಣ್ಣೆಯನ್ನು ಹೊರತೆಗೆಯುವ ಮತ್ತು ಕಡಲೆಕಾಯಿಯಿಂದ ಇತರ ಉತ್ಪನ್ನಗಳನ್ನು ತಯಾರಿಸುವ ಘಟಕವನ್ನು ಸ್ಥಾಪಿಸಿದ್ದೇವೆ ಎಂದು ಕೇಂದ್ರ ಸಚಿವರು ಹೇಳಿದರು. ಪೆದ್ದಪಲ್ಲಿ ಮಹಿಳಾ ರೈತರ ಉತ್ಪಾದಕ ಕಂಪನಿ ಲಿಮಿಟೆಡ್ ಕೆಲಸವನ್ನು ಶ್ಲಾಘಿಸಿದ ಕೇಂದ್ರ ಹಣಕಾಸು ಸಚಿವೆ, ಕಲ್ಯಾಣ ಕರ್ನಾಟಕ ಪ್ರದೇಶದಾದ್ಯಂತ ಸ್ಥಾಪಿಸಲಾದ ಏಳು ರೀತಿಯ ಮೌಲ್ಯವರ್ಧನಾ ಘಟಕಗಳಲ್ಲಿ ಯಾದಗಿರಿ ಘಟಕವು ಸಂಪೂರ್ಣವಾಗಿ ಮಹಿಳೆಯರಿಂದ ನಿರ್ವಹಿಸಲ್ಪಡುವ ಏಕೈಕ ಘಟಕ ವಾಗಿದೆ ಎಂದು ಹೇಳಿದರು.

ಈ ಕಡಲೆಕಾಯಿ ಸಂಸ್ಕರಣಾ ಘಟಕವನ್ನು ನಿರ್ವಹಿಸುವ ಮಹಿಳೆಯರು ರೈತರಿಂದ ನೇರವಾಗಿ ಕಡಲೆಕಾಯಿ ಖರೀದಿಸುವಲ್ಲಿ ತೊಂದರೆಗಳನ್ನು ಎದುರಿಸುತ್ತಿದ್ದಾರೆ ಎಂಬುದನ್ನು ಇಲ್ಲಿನ ಮಹಿಳೆಯರು ತಮ್ಮ ಗಮನಕ್ಕೆ ತಂದಿದ್ದಾರೆ ಎಂದು ಸೀತಾರಾಮನ್ ತಿಳಿಸಿದ್ದಾರೆ.

> ಅಭಿವೃದ್ಧಿ ಪ್ರಯೋಜನಗಳು ಇತರ ಪ್ರದೇಶಗಳಂತೆ ಅದೇ ವೇಗದಲ್ಲಿ ತಲುಪದ ಕಾರಣ ನೆರೆಯ ರಾಯಚೂರು ಜೊತೆಗೆ ಯಾದಗಿರಿಯನ್ನು 'ಮಹತ್ವಾಕಾಂಕ್ಷೆಯ ಜಿಲ್ಲೆ' ಎಂದು ಗೊತ್ತುಪಡಿಸಲಾಗಿದೆ ಮತ್ತು ಅಂತರವನ್ನು ಕಡಿಮೆ ಮಾಡಲು ಸರ್ಕಾರ ಎಲ್ಲಾ ಹಂತಗಳಲ್ಲಿ ಒಟ್ಟಾಗಿ ಕೆಲಸ ಮಾಡಬೇಕು.
> ಸೀತಾರಾಮನ್ ಹೇಳಿದರು.

ಯಾದಗಿರಿಯ ನೆಲಗಡಲೆ ಉತ್ಪಾದನೆಯನ್ನು ಸಂಪೂರ್ಣವಾಗಿ ಬಳಸಿಕೊಳ್ಳಲು ಕೇವಲ ಒಂದು ಘಟಕ ಮಾತ್ರ ಸಾಕಾಗುವುದಿಲ್ಲ ಮತ್ತು ಅಂತಹ ಇನ್ನೂ ಅನೇಕ ಸೌಲಭ್ಯಗಳು ಬೇಕಾಗುತ್ತವೆ ಎಂದು ಇದೇ ವೇಳೆ ಅವರು ಅಭಿಪ್ರಾಯಪಟ್ಟರು. ಸ್ಥಳೀಯ ಪ್ರತಿನಿಧಿಗಳು, ಜಿಲ್ಲಾ ಅಧಿಕಾರಿಗಳು ಮತ್ತು ಕೃಷಿ ಕಾರ್ಯದರ್ಶಿಗಳು ಈ ಉಪಕ್ರಮದ ಬಗ್ಗೆ ವಿಶೇಷ ಗಮನ ಹರಿಸಬೇಕೆಂದು ಅವರು ಇದೇ ವೇಳೆ ಒತ್ತಾಯಿಸಿದರು. ಸರ್ಕಾರಗಳಿಂದ ಮಾತ್ರ ಅಭಿವೃದ್ಧಿಯನ್ನು ಸಾಧಿಸಲು ಸಾಧ್ಯವಿಲ್ಲ, ಅದಕ್ಕೆ ನಿಮ್ಮೆಲ್ಲರ ಸಹಕಾರ ಬೇಕು ಎಂದು ಕಿವಿ ಮಾತನ್ನೂ ಹೇಳಿದರು.

ಯಾದಗಿರಿ ಮುಂದುವರಿಯಬೇಕಾದರೆ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಾತ್ರ ಕೆಲಸ ಮಾಡಿದರೆ ಸಾಕಾಗುವುದಿಲ್ಲ. ಜನರು ಮತ್ತು ಸ್ಥಳೀಯ ಆಡಳಿತವು ಹೆಚ್ಚಿನ ಪ್ರಯತ್ನಗಳನ್ನು ಮಾಡಬೇಕು ಎಂದು ಅವರು ಇದೇ ವೇಳೆ ಪ್ರತಿಪಾದಿಸಿದರು.

ಆಂಧ್ರಪ್ರದೇಶದ ಪ್ರಸಿದ್ಧ ಮಾವು ಬೆಳೆಯುವ ಜಿಲ್ಲೆಯೊಂದಿಗೆ ಹೋಲಿಕೆ ಮಾಡಿದ ಅವರು, ಚಿತ್ತೂರು ಮಾವಿನ ಹಣ್ಣುಗಳಿಗೆ ಹೆಸರುವಾಸಿಯಾಗಿದೆ. ಅದೇ ರೀತಿಯಲ್ಲಿ ಯಾದಗಿರಿ ತನ್ನ ಕಡಲೆಕಾಯಿಗೆ ಪ್ರಸಿದ್ಧವಾಗುತ್ತದೆ ಎಂದು ನಾನು ಭಾವಿಸುತ್ತೇನೆ ಎಂದು ಸೀತಾರಾಮನ್ ಗಮನಸೆಳೆದರು. ನಬಾರ್ಡ್ ಬೆಂಬಲಿತ ಘಟಕದ ಯಶಸ್ವಿ ಕಾರ್ಯಾಚರಣೆಯು ಜಿಲ್ಲೆಯಲ್ಲಿ ಖಾಸಗಿ ಹೂಡಿಕೆಯನ್ನು ಪ್ರೋತ್ಸಾಹಿಸಬಹುದು ಎಂಬ ವಿಶ್ವಾಸವನ್ನೂ ಅವರು ವ್ಯಕ್ತಪಡಿಸಿದರು.

> ಮಹಿಳೆಯರು, ಸಂಸ್ಕರಣಾ ಘಟಕಕ್ಕೆ ಬೇಕಾದ ಕಡಲೆಕಾಯಿಯನ್ನು ಸ್ಥಳೀಯ ಮಾರುಕಟ್ಟೆಗಳು ಮತ್ತು ಮಂಡಿಗಳಿಂದ ಖರೀದಿಸಲು ಪ್ರಯತ್ನಿಸುತ್ತಿದ್ದಾರೆ. ಈ ಉದ್ದೇಶಕ್ಕಾಗಿ ನಬಾರ್ಡ್ ಒಬ್ಬ ಅಧಿಕಾರಿಯನ್ನು ಸಹ ನೇಮಿಸಿದೆ ಎಂದು ಸಚಿವರು ತಿಳಿಸಿದ್ದಾರೆ. ಇದಕ್ಕೆ ಸ್ಥಳೀಯ ಆಡಳಿತದ ಬೆಂಬಲ ಬೇಕಿದೆ ಎಂದಿರುವ ಸಚಿವೆ, ಕಚ್ಚಾ ವಸ್ತುಗಳನ್ನು ಖರೀದಿಸಲು ತೊಂದರೆ ಏಕೆ ಇರಬೇಕು

ಜಿಲ್ಲೆಗೆ ನಿರಂತರ ಬೆಂಬಲ ನೀಡುವುದಾಗಿ ಘೋಷಿಸಿದ ಅವರು, ಶಿಕ್ಷಣ ಮತ್ತು ಆರೋಗ್ಯ ರಕ್ಷಣೆಯಂತಹ ಕ್ಷೇತ್ರಗಳಲ್ಲಿ ಗಮನಾರ್ಹ ಕೆಲಸಗಳು ಬಾಕಿ ಉಳಿದಿವೆ ಎಂದು ಸೀತಾರಾಮನ್ ಹೇಳಿದರು. ಯಾದಗಿರಿಯ ಕಡಿಮೆ ಮಹಿಳಾ ಸಾಕ್ಷರತೆ, ರಾಜ್ಯದ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಕೊನೆಯ ಸ್ಥಾನದಲ್ಲಿದೆ.

ಬಹು ಆಯಾಮದ ಬಡತನದ ಹೆಚ್ಚಿನ ಮಟ್ಟಗಳು ಮತ್ತು ಕಡಿಮೆ ತಲಾ ಆದಾಯವು ಕಳವಳಕಾರಿ ವಿಷಯಗಳಾಗಿವೆ ಎಂದು ಅವರು ಇದೇ ವೇಳೆ ಬೇಸರ ಹೊರ ಹಾಕಿದರು. ಕರ್ನಾಟಕದ ರಾಜ್ಯಸಭಾ ಸದಸ್ಯರು ಯಾದಗಿರಿಗೆ ಕೇಂದ್ರ, ರಾಜ್ಯ ಸರ್ಕಾರ ಮತ್ತು ಸ್ಥಳೀಯ ಆಡಳಿತದಿಂದ ತುರ್ತು, ಕೇಂದ್ರೀಕೃತ ಹಸ್ತಕ್ಷೇಪದ ಅಗತ್ಯವಿದೆ ಎಂದು ಒತ್ತಾಯಿಸಿದರು.

ಈ ಸಂಸ್ಕರಣಾ ಘಟಕದಲ್ಲಿ ತಯಾರಿಸಿದ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಪ್ರವೇಶ ದೊರೆಯಲು ಸಹಕಾರ ನೀಡುವಂತೆ ಮನವಿ ಮಾಡಿದರು. ಇ-ಕಾಮರ್ಸ್ ಮತ್ತು ತ್ವರಿತ-ವಾಣಿಜ್ಯ ವೇದಿಕೆಗಳ ಮೂಲಕ ಉತ್ಪಾದಕ ಕಂಪನಿಯನ್ನು ವಿಸ್ತರಿಸಲು ಸಹಾಯ ಮಾಡುವಂತೆ ನಬಾರ್ಡ್‌ಗೆ ಇದೇ ವೇಳೆ ವಿನಂತಿಸಿದರು.

ಬಾಡೇಪಲ್ಲಿ ವಿಲ್ಲಾದಲ್ಲಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಉದ್ಘಾಟಿಸಿದರು.

## ಮಹಿಳಾ ಸಚಿವರೇ ಇಲ್ಲದ ಡಿಕೆ ಶಿವಕುಮಾರ್ ಸಂಪುಟ: ರಾಜಕೀಯದಲ್ಲಿ ಬಿಸಿಬಿಸಿ ಚರ್ಚೆ

• ಉದಯವಾಹಿನಿ, ಬಿಜಾಪುರ


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ಚೊಚ್ಚಲ ಸಚಿವ ಸಂಪುಟದಲ್ಲಿ ಪ್ರಾದೇಶಿಕ, ಜಾತಿ ಮತ್ತು ರಾಜಕೀಯ ಸಮೀಕರಣಗಳನ್ನು ಸಮತೋಲನಗೊಳಿಸಲು ಪ್ರಯತ್ನಿಸುತ್ತಿದ್ದರೂ, 13 ಸದಸ್ಯರ ಸಚಿವ ಸಂಪುಟದಲ್ಲಿ ಮಹಿಳೆಯರ ಸಂಪೂರ್ಣ ಅನುಪಸ್ಥಿತಿ ಚರ್ಚೆಗೆ ಕಾರಣವಾಗಿದೆ. ರಾಜ್ಯ ವಿಧಾನಸಭೆಯಲ್ಲಿ ಕಾಂಗ್ರೆಸ್ ಒಂಬತ್ತು ಮಹಿಳಾ ಶಾಸಕರನ್ನು ಹೊಂದಿದೆ. ನಾಲ್ಕು ಶಾಸಕರು ಮತ್ತು ಐದು ಎಂ.ಎಲ್.ಸಿ.ಗಳಿದ್ದರೂ ಒಬ್ಬರಿಗೂ ಸಂಪುಟದಲ್ಲಿ ಸ್ಥಾನ ನೀಡಿಲ್ಲ, ಮಹಿಳೆಯರಿಗೆ ಸಮಾನ ಹಕ್ಕುಗಳನ್ನು ನೀಡಬೇಕೆಂದು ಪ್ರತಿಪಾದಿಸುತ್ತಿರುವ ಸಂದರ್ಭದಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡದದಿರುವುದು ಪಕ್ಷದ ಬದ್ಧತೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಹಿರಿಯ ಎಂ.ಎಲ್.ಸಿ. ಉಮಾಶ್ರೀ ಮತ್ತು ಮಾಜಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರನ್ನು ಕಡೆಗಣಿಸಲಾಗಿದೆ, ಇಬ್ಬರೂ ಹಿಂದಿನ ಕ್ಯಾಬಿನೆಟ್ ಅನುಭವವನ್ನು ಹೊಂದಿದ್ದಾರೆ ಮತ್ತು ಸಚಿವ ಸ್ಥಾನಗಳಿಗೆ ಪ್ರಬಲ ಸ್ಪರ್ಧಿಗಳೆಂದು ಪರಿಗಣಿಸಲಾಗಿದೆ. ಅವರನ್ನು ಹೊರಗಿಟ್ಟಿರುವುದು ಪಕ್ಷದೊಳಗಿನ ಆಶ್ಚರ್ಯವನ್ನುಂಟುಮಾಡಿದೆ. ಸಂಪುಟ ರಚನೆಗೆ ಮುಂಚಿನ ದಿನಗಳಲ್ಲಿ, ಕನಿಷ್ಠ ಒಬ್ಬ ಮಹಿಳಾ ನಾಯಕಿಗೆ ಅವಕಾಶ ನೀಡಲಾಗುವುದು ಎಂಬ ಊಹಾಪೋಹಗಳು ಹರಡಿದ್ದವು.

ರೂಪಕಲಾ ಶಶಿಧರ್ ಅವರ ಹೆಸರು ರಾಜಕೀಯ ಚರ್ಚೆಗಳಲ್ಲಿ ಪ್ರಮುಖವಾಗಿ ಕಾಣಿಸಿಕೊಂಡಿದ್ದು, ಕೆಜಿಎಫ್ ಶಾಸಕಿಯಾಗಿರುವ ಅವರು ಸಚಿವ ಸಂಪುಟದಲ್ಲಿ ಹೊಸ ಮುಖವಾಗಿ ಹೊರಹೊಮ್ಮುತ್ತಾರೆ ಎಂದು ಹಲವರು ನಿರೀಕ್ಷಿಸಿದ್ದರು. ಆದರೆ ಅವರು ಕೂಡ ಅಂತಿಮ ಪಟ್ಟಿಯಲ್ಲಿ ಸ್ಥಾನ ಪಡೆಯುವಲ್ಲಿ ವಿಫಲರಾದರು. ಮುಖ್ಯಮಂತ್ರಿಗಳು ಪ್ರಾದೇಶಿಕ ನಾಯಕರು, ಪ್ರಭಾವಿ ಸಮುದಾಯಗಳು, ನಿಷ್ಠಾವಂತರು ಮತ್ತು ಮೊದಲ ಬಾರಿಗೆ ಆಕಾಂಕ್ಷಿಗಳಿಗೆ ಅವಕಾಶ ನೀಡುವ ಒತ್ತಡದಲ್ಲಿದ್ದರೂ, ಒಬ್ಬ ಮಹಿಳಾ ಸಚಿವೆಯೂ ಇಲ್ಲದಿರುವುದು ರಾಜಕೀಯ ವಿವಾದವನ್ನು ಸೃಷ್ಟಿಸಿದೆ ಎಂದು ರಾಜಕೀಯ ವಿಶ್ಲೇಷಕರು ಗಮನಸೆಳೆದಿದ್ದಾರೆ.

## ನೂತನ ಕೃಷಿ ಸಂಸ್ಕರಣಾ ಕೇಂದ್ರ ಲೋಕಾರ್ಪಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಯಾದಗಿರಿ:

ಕಲ್ಯಾಣ ಕರ್ನಾಟಕ ಭಾಗದ ಗ್ರಾಮೀಣ ಮೂಲಸೌಕರ್ಯ ಮತ್ತು ರೈತರ ಆರ್ಥಿಕ ಪ್ರಗತಿಗೆ ಬೂಸ್ಟರ್ ಡೋಸ್ ನೀಡುವ ನಿಟ್ಟಿನಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಯಾದಗಿರಿ ಜಿಲ್ಲೆಯ ಗುರ್ಮಿಠ್ಕಲ್ ತಾಲ್ಲೂಕಿನ ಬಡೇಪಲ್ಲಿಯಲ್ಲಿ ನೂತನ ರೈತರ ತರಬೇತಿ ಕೇಂದ್ರ ಮತ್ತು ಅಗ್ರೋ-ಪ್ರೊಸೆಸಿಂಗ್ ಕಾಮನ್ ಫೆಸಿಲಿಟಿ ಸೆಂಟರ್ ಗುರುವಾರ ಉದ್ಘಾಟಿಸಿದ್ದಾರೆ. ಸಂಸದ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಸ್ಥಾಪಿಸಲಾದ ಈ ಯೋಜನೆಗೆ ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಮಾರ್ಗದರ್ಶನ ನೀಡಿದೆ. ಕೇಂದ್ರ ಸರ್ಕಾರ ಹಾಗೂ ನಬಾರ್ಡ್ ಸಹಯೋಗದೊಂದಿಗೆ ಈ ಕೇಂದ್ರವನ್ನು ಅಭಿವೃದ್ಧಿಪಡಿಸಲಾಗಿದೆ.

ಕಲ್ಯಾಣ ಕರ್ನಾಟಕ ಭಾಗದ ರೈತರ ಆರ್ಥಿಕ ಸ್ಥಿತಿ ಸುಧಾರಣೆ, ಕೃಷಿ ಮೌಲ್ಯ ಸರಪಳಿ ಬಲಪಡಿಸುವುದು ಹಾಗೂ ಗ್ರಾಮೀಣ ಜೀವನೋಪಾಯಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಈ ಕೇಂದ್ರವನ್ನು ನಿರ್ಮಿಸಲಾಗಿದೆ.

ಈ ಕೇಂದ್ರದಲ್ಲಿ ರೈತರಿಗೆ ಆಧುನಿಕ ಕೃಷಿ ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉತ್ಪನ್ನ ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಕುರಿತ ತರಬೇತಿಗಳನ್ನು ನೀಡಲಾಗುತ್ತದೆ.

> ಯೋಜನೆಯ ಮೂಲಕ ಕೃಷಿ ಕ್ಷೇತ್ರದಲ್ಲಿ ತಾಂತ್ರಿಕ ಜ್ಞಾನ ಹಂಚಿಕೆ, ಕೌಶಲ್ಯ ವೃದ್ಧಿ ಹಾಗೂ ಆಧುನಿಕ ಕೃಷಿ ಪದ್ಧತಿಗಳ ಅಳವಡಿಕೆಗೆ ಉತ್ತೇಜನ ಸಿಗಲಿದ್ದು, ಗ್ರಾಮೀಣಾಭಿವೃದ್ಧಿಗೆ ಇದು ಪ್ರಮುಖ ಹೆಜ್ಜೆಯಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜೊತೆಗೆ, ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆ ಮೌಲ್ಯ ಹೆಚ್ಚಿಸುವ ಅಗತ್ಯ ಮೂಲಸೌಕರ್ಯಗಳನ್ನೂ ಒದಗಿಸಲಾಗುತ್ತದೆ. ರೈತರಿಗೆ ತರಬೇತಿ ನೀಡುವ ಜೊತೆಗೆ ಕೃಷಿ ಉತ್ಪನ್ನಗಳ ಪ್ರೊಸೆಸಿಂಗ್‌ಗೆ ಅಗತ್ಯವಾದ ಕಾಮನ್ ಫೆಸಿಲಿಟಿ ಸೆಂಟರ್ ವ್ಯವಸ್ಥೆ ಮಾಡಲಾಗಿದೆ. ಇದರಿಂದ ಸ್ಥಳೀಯ ರೈತರಿಗೆ ಉತ್ಪಾದಕತೆ ಹೆಚ್ಚಿಸುವುದರ ಜೊತೆಗೆ ಹೆಚ್ಚುವರಿ ಆದಾಯ ಗಳಿಸುವ ಅವಕಾಶ ಸಿಗಲಿದೆ ಎನ್ನಲಾಗಿದೆ.

## ಆದಿತ್ಯರಾಜ್ ಕ್ಯಾಪಿಟಲ್ ಪ್ರೈ.ಲಿ ಕಚೇರಿ ಮೇಲೆ ಪೊಲೀಸರ ದಾಳಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಳಗಾವಿ


ಶಿವಂ ಅಸೋಸಿಯೇಟ್ಸ್ ವಂಚನೆಯ ಬಳಿಕ ಬೆಳಗಾವಿಯಲ್ಲಿ ಮತ್ತೊಂದು ವಂಚನೆ ಪ್ರಕರಣ ಬೆಳಕಿಗೆ ಬಂದಿದೆ. ಹೆಚ್ಚಿನ ಬಡ್ಡಿ ನೀಡುವ ಆಮಿಷವೊಡ್ಡಿ ಸಾರ್ವಜನಿಕರಿಂದ ಕೋಟ್ಯಂತರ ರೂಪಾಯಿ ಠೇವಣಿ ಸಂಗ್ರಹಿಸಿರುವ ಆರೋಪದಡಿ ಆದಿತ್ಯರಾಜ್ ಕ್ಯಾಪಿಟಲ್ ಪ್ರೈವೇಟ್ ಲಿಮಿಟೆಡ್ ಕಚೇರಿ ಮೇಲೆ ಪೊಲೀಸರು ದಾಳಿ ಮಾಡಿದ್ದಾರೆ.

ಬೆಳಗಾವಿ ಉಪವಿಭಾಗಾಧಿಕಾರಿ ಶ್ರವಣ ನಾಯಕ ಅವರ ನೇತೃತ್ವದಲ್ಲಿ ಸಹಕಾರ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದು, ಭಾಗ್ಯನಗರದ 5ನೇ ಕ್ರಾಸ್‌ನಲ್ಲಿರುವ ಕಚೇರಿಯಲ್ಲಿ ದಾಖಲೆಗಳ ಪರಿಶೀಲನೆಯಲ್ಲಿ ತೊಡಗಿದ್ದಾರೆ. ದಾಳಿಯ ವೇಳೆ ಸಂಸ್ಥೆಯ ವೆಬ್ ಸೈಟ್ ಶಡೌನ್ ಆಗಿರುವುದು ಅನುಮಾನಕ್ಕೆ ಕಾರಣವಾಗಿದೆ. ಹೀಗಾಗಿ, ಪರಿಶೀಲನೆ ಮುಂದುವರಿದಿದೆ.

ಆದಿತ್ಯರಾಜ್ ಕ್ಯಾಪಿಟಲ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಸಿಇಓ, ಮಾಲೀಕ ಬಾಲರಾಜ್ ಮಾನೆ, ಪ್ರತಿ ತಿಂಗಳಿಗೆ ಶೇ.5 ರಷ್ಟು ಬಡ್ಡಿ ನೀಡುವುದಾಗಿ ಸಾವಿರಾರು ಜನರಿಗೆ ಆಮಿಷವೊಡ್ಡಿರುವ ಮಾಹಿತಿ ಲಭ್ಯವಾಗಿದೆ. ಈ ಸಂಸ್ಥೆ ಭಾರತೀಯ ರಿಸರ್ವ್ ಬ್ಯಾಂಕ್ ಸೇರಿ ಯಾವುದೇ ಅಧಿಕೃತ ಸಂಸ್ಥೆಯಿಂದ ಅನುಮತಿ ಪಡೆದಿಲ್ಲ. ಹೂಡಿಕೆ ಸಂಗ್ರಹ ಹೆಚ್ಚಿಸಲು ಹಲವು ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಲ್ಲದೇ ವೆಬ್ ಸೈಟ್ ಮೂಲಕ ಹೂಡಿಕೆಗೆ ಜನರನ್ನು ಆಕರ್ಷಿಸಲಾಗಿದೆ. ದೊಡ್ಡ ಪ್ರಮಾಣದಲ್ಲಿ ಠೇವಣಿಗಳನ್ನು ಸಂಗ್ರಹಿಸಿದೆ ಎನ್ನಲಾಗಿದೆ. ಆದರೆ, ಹೂಡಿಕೆದಾರರಿಗೆ ಯಾವುದೇ ಸಮರ್ಪಕ ಭದ್ರತೆ ಒದಗಿಸದೇ, ಸಂಗ್ರಹಿಸಿದ ಹಣವನ್ನು ಬೇರೆ ವ್ಯವಹಾರಗಳಲ್ಲಿ ಬಳಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ವಿರುದ್ಧ ಕರ್ನಾಟಕ ಹೂಡಿಕೆದಾರರ ಹಿತಾಸಕ್ತಿ ಸಂರಕ್ಷಣಾ ಕಾಯ್ದೆ ಹಾಗೂ ಬಡ್ಸ್ ಸೆಲ್ ಅಡಿಯಲ್ಲಿ ದೂರು ದಾಖಲಿಸಲಾಗಿತ್ತು.

ಸಂಸ್ಥೆಯಲ್ಲಿ ಹಣ ಹೂಡಿಕೆ ಮಾಡಿದ್ದ ಕೆಲವು ಠೇವಣಿದಾರರು ಅವಧಿ ಪೂರ್ಣಗೊಂಡ ಬಳಿಕವೂ ಅಸಲು ಹಾಗೂ ಬಡ್ಡಿ ಹಣವನ್ನು ನಿಗದಿತ ದಿನಾಂಕದಂದು ಮರುಪಾವತಿಸಲಾಗಿಲ್ಲ ಎಂದು ಆರೋಪಿಸಿ ದೂರು ಸಲ್ಲಿಸಿದ್ದರು. ಈ ದೂರಿನ ಆಧಾರದ ಮೇಲೆ ಅಧಿಕಾರಿಗಳು ತನಿಖೆ ಆರಂಭಿಸಿದ್ದು, ಸಂಸ್ಥೆಯ ಹಣಕಾಸು ಚಟುವಟಿಕೆಗಳ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ.

## ಕೃತಕ ಅಭಾವ ಸೃಷ್ಟಿಸಿದರೆ ಕಾನೂನು ಕ್ರಮ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದಾಸ್ತಾನು ಸಮರ್ಪಕವಾಗಿದ್ದು, ಯಾವುದೇ ರೀತಿಯಲ್ಲಿ ಇಂಧನ ಕೊರತೆ ಇಲ್ಲ. ಇಂಧನ ಪೂರೈಕೆ ಎಂದಿನಂತೆ ಸಹಜವಾಗಿದೆ' ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು. ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ತೈಲ ಕಂಪನಿಗಳ ಅಧಿಕಾರಿಗಳು ಆಹಾರ ಇಲಾಖೆಯ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದರು ಇಂಧನದ ಅನಧಿಕೃತ ದಾಸ್ತಾನು ಇರಿಸುವುದು ಮತ್ತು ಕೃತಕ ಅಭಾವ ಸೃಷ್ಟಿಸುವುದು ಕಂಡುಬಂದಲ್ಲಿ ಕಾನೂನು ಕ್ರಮಕ್ಕೆ ಗೊಳ್ಳಲಾಗುತ್ತದೆ' ಎಂದು ಎಚ್ಚರಿಕೆ ನೀಡಿದರು. 'ಇತ್ತೀಚಿನ ದಿನಗಳಲ್ಲಿ ಔದ್ಯೋಗಿಕ ಮತ್ತು ವಾಣಿಜ್ಯ ಖರೀದಿದಾರರು ಬಂಕ್‌ಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಖರೀದಿಸುತ್ತಿರುವುದನ್ನು ತಡೆಗಟ್ಟಬೇಕು. ಬೃಹತ್ ಗ್ರಾಹಕರು ಪೆಟ್ರೋಲ್ ಬಂಕ್‌ಗಳ ಬದಲಾಗಿ, ಕಡ್ಡಾಯವಾಗಿ ತೈಲ ಕಂಪನಿಗಳ ಮುಖಾಂತರ ನೇರವಾಗಿ ಖರೀದಿಸಬೇಕು' ಎಂದು ತಿಳಿಸಿದರು. 'ಪೆಟ್ರೋಲ್ ಬಂಕ್‌ಗಳಲ್ಲಿ ಗ್ರಾಹಕರು ಪ್ಲಾಸ್ಟಿಕ್ ಕ್ಯಾನ್‌ಗಳಲ್ಲಿ ಡೀಸೆಲ್ ಖರೀದಿಸುವುದನ್ನು ಉತ್ತೇಜಿಸಬಾರದು. ಅನಧಿಕೃತ ದಾಸ್ತಾನು, ಕಾಳಸಂತೆಯಲ್ಲಿ ಮಾರಾಟ, ಬಂಕ್‌ಗಳಲ್ಲಿ ಅಕ್ರಮ ದಾಸ್ತಾನು ಇಡದಂತೆ ಕಟ್ಟುನಿಟ್ಟಿನ ನಿಗಾವಹಿಸಬೇಕು. ಗ್ರಾಹಕರ ಬೇಡಿಕೆ ಪೂರೈಸಲು ತೈಲ ಕಂಪನಿಗಳೊಂದಿಗೆ ನಿರಂತರ ಸಮನ್ವಯ ಸಾಧಿಸಬೇಕು' ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಪ್ರಸ್ತುತ ಜಿಲ್ಲೆಯಲ್ಲಿ ಇಂಧನ ಪೂರೈಕೆ ಸಹಜವಾಗಿದೆ. ಕಂಪನಿಗಳಿಂದ ನಿರಂತರ ಸರಬರಾಜು ಆಗುತ್ತಿದೆ' ಎಂದು ತೈಲ ಕಂಪನಿಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ಶಿದ್ರಾಮ ಮಾರಿಹಾಳ, ಐಒಸಿಎಲ್ ಮಾರುಕಟ್ಟೆ ಅಧಿಕಾರಿ ಪ್ರತಾಪ್, ಬಿಪಿಸಿಎಲ್ ಮಾರುಕಟ್ಟೆ ಅಧಿಕಾರಿ ಜಯಚಂದ್ರ, ಎಚ್‌ಪಿಸಿಎಲ್ ಮಾರುಕಟ್ಟೆ ಅಧಿಕಾರಿ ಸುಮಂತ್ ಇದ್ದರು.

## ವಿದ್ಯುತ್ ವಿತರಣೆ ಖಾಸಗೀಕರಣ: ಖಂಡನೆ

• ಉದಯವಾಹಿನಿ, ಹರಿಹರ:


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ವಿದ್ಯುತ್ ವಿತರಣೆ ಪ್ರಕ್ರಿಯೆಯನ್ನು ಖಾಸಗೀಕರಣ ಮಾಡುತ್ತಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ನಗರದ ಬೆಸ್ಕಾಂ ವಿಭಾಗೀಯ ಕಚೇರಿ ಮುಂಭಾಗ ಪ್ರತಿಭಟನೆ ಮಾಡಿ ಬೆಸ್ಕಾಂ ಇಇ ಎಸ್.ಕೆ.ಪಟೇಲ್‌ಗೆ ಮನವಿ ಸಲ್ಲಿಸಲಾಯಿತು.

ರಾಜ್ಯ ಸರ್ಕಾರ ಇಂಧನ ಇಲಾಖೆಯ ಅಧಿನದಲ್ಲಿರುವ ಬೆಸ್ಕಾಂ, ಹೆಸ್ಕಾಂ, ಮೆಸ್ಕಾಂ ಹಾಗೂ ಜೆಸ್ಕಾಂ ಕಂಪನಿಗಳಿಗೆ ಒಳಪಡುವ ಆಯ್ದ ಭಾಗಗಳ ವಿದ್ಯುತ್ ವಿತರಣೆಯನ್ನು ಟಾಟಾ ಪವರ್ ಕಂಪನಿಗೆ ನೀಡುತ್ತಿರುವ ಕ್ರಮವನ್ನು ತೀವ್ರವಾಗಿ ಖಂಡಿಸುತ್ತೇವೆ' ಎಂದು ಸಂಘದ ಪದಾಧಿಕಾರಿಗಳು ಹೇಳಿದರು. ಸರ್ಕಾರದ ಈ ನಿರ್ಧಾರದಿಂದ ರೈತರಿಗೆ ಆಸರೆಯಾಗಿರುವ ಜಮೀನುಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಹಾಗೂ ಗಂಗಾ ಕಲ್ಯಾಣದಂತಹ ಅನೇಕ ಯೋಜನೆಗಳು ಕೈತಪ್ಪುವ ಅಪಾಯವಿದೆ. ಖಾಸಗೀಕರಣದಿಂದ ಕಂಪನಿಯವರು ಮಾಡುವ ಕಾನೂನುಗಳು ರೈತರ ವಿರೋಧಿಗಳಾಗಿದ್ದರೂ ಅವುಗಳನ್ನು ಒಪ್ಪಿಕೊಳ್ಳಬೇಕಾದ ಅನಿವಾರ್ಯತೆಯನ್ನು ಸೃಷ್ಟಿ ಮಾಡುತ್ತಾರೆ. ಎಲ್ಲಾ ವ್ಯವಸ್ಥೆಯನ್ನು ಆನ್‌ಲೈನ್ ಮಾಡಿದರೆ ವಿದ್ಯುತ್ ಸಂಪರ್ಕ ಬೇಗನೆ ಸಿಗುವುದಿಲ್ಲ. ಇದರಿಂದ ರೈತರು ಸಂಕಷ್ಟ ಎದುರಿಸುತ್ತಾರೆ' ಎಂದು ಹೇಳಿದರು. ರೈತ ಸಮೂಹಕ್ಕೆ ಅನ್ಯಾಯ ಮಾಡುವಂತ ಇಂತಹ ನಿರ್ಧಾರದಿಂದ ರಾಜ್ಯ ಸರ್ಕಾರ ಕೂಡಲೇ ಹಿಂದೆ ಸರಿಯಬೇಕು. ತಪ್ಪಿದಲ್ಲಿ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ' ಎಂದು ಎಚ್ಚರಿಕೆ ನೀಡಿದರು. ಇತರರಿದ್ದರು.

## ಕಾರಿನ ಡಿಕ್ಕಿಯಲ್ಲಿ ಸಿಲುಕಿ ಬಾಲಕನ ದಾರುಣ ಸಾವು

• ಉದಯವಾಹಿನಿ, ಕಲಬುರಗಿ:

ಕಾರಿನ ಡಿಕ್ಕಿಯೊಳಗೆ ಸಿಲುಕಿ ಉಸಿರುಗಟ್ಟಿ ಮೂರೂವರೆ ವರ್ಷದ ಬಾಲಕನೊಬ್ಬ ಮೃತಪಟ್ಟಿರುವ ದಾರುಣ ಘಟನೆ ಜಿಲ್ಲೆಯ ಶಹಾಬಾದ್ ತಾಲ್ಲೂಕಿನ ತೋನಸಹಳ್ಳಿ(ಎಸ್) ಗ್ರಾಮದಲ್ಲಿ ನಡೆದಿದೆ. ಮೃತ ಬಾಲಕನನ್ನು ಬಸವಪ್ರಭು ಎಂದು ಗುರುತಿಸಲಾಗಿದೆ. ಈತ ಕೊಟ್ಟೂರೇಶ್ವರ್ ಮುತ್ಯಾ ಎಂಬುವರ ಪುತ್ರನಾಗಿದ್ದು, ಕುಟುಂಬದವರು ಶಿಕ್ಷಣ ಸಂಸ್ಥೆ ನಡೆಸುತ್ತಿರುವುದಾಗಿ ತಿಳಿದುಬಂದಿದೆ. ಶಾಲೆಯ ಮುಂದೆ ಕಾರನ್ನು ನಿಲ್ಲಿಸಿದ ವೇಳೆ ಪಾಲಕರು ಶಾಲಾ ಪ್ರವೇಶಾತಿಗಾಗಿ ಬಂದಿದ್ದ ಪೋಷಕರೊಂದಿಗೆ ಮಾತುಕತೆಯಲ್ಲಿ ನಿರತರಾಗಿದ್ದರು.

ಇದೇ ವೇಳೆ ಬಸವಪ್ರಭು ತನ್ನ ತಂದೆಯ ಬಳಿ ಇದ್ದ ಕಾರಿನ ಕೀಯನ್ನು ತೆಗೆದುಕೊಂಡು ಆಟವಾಡಲು ಹೋಗಿದ್ದಾನೆ. ಆಟವಾಡುತ್ತಾ ಕಾರಿನ ಬಳಿಗೆ ಬಂದ ಬಾಲಕ, ರಿಮೋಟ್ ಮೂಲಕ ಕಾರಿನ ಲಾಕ್ ತೆಗೆದು ಒಳಗೆ ಪ್ರವೇಶಿಸಿದ್ದಾನೆ. ಸುಮಾರು ಎರಡು ಗಂಟೆಗಳ ಬಳಿಕ ಕಾರಿನ ಡಿಕ್ಕಿ ಪರಿಶೀಲನೆ ನಡೆಸಿದ ವೇಳೆ ಬಾಲಕ ಪತ್ತೆಯಾಗಿದ್ದಾನೆ. ಆದರೆ, ಅಷ್ಟರಲ್ಲೇ ಬಾಲಕ ಮೃತಪಟ್ಟಿದ್ದನು. ಈ ಘಟನೆ ಕುಟುಂಬದಲ್ಲಿ ಆಘಾತ ಮೂಡಿಸಿದ್ದು, ಗ್ರಾಮದಲ್ಲೂ ದುಃಖದ ವಾತಾವರಣ ನಿರ್ಮಾಣವಾಗಿದೆ. ಪ್ರಕರಣವು ಶಹಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಸಿದ್ಧನಗುಂಡಿ ಸ್ವಚ್ಛಗೊಳಿಸಿದ ವಿದ್ಯಾರ್ಥಿಗಳು

• ಉದಯವಾಹಿನಿ, ಸಿರಿಗೆರೆ:

ಸಮೀಪದ ಕಡ್ಲೆಗುದ್ದು ಗ್ರಾಮದ ಬಳಿಯ ಐತಿಹಾಸಿಕ ಸಿದ್ದನಗುಂಡಿ ಕ್ಷೇತ್ರವನ್ನು ಆಂಜನೇಯ ಸ್ವಾಮಿ ಗ್ರಾಮಾಂತರ ಪ್ರೌಢಶಾಲೆಯ ವಿದ್ಯಾರ್ಥಿಗಳು ಸ್ವಚ್ಛಗೊಳಿಸಿದರು. ವೇದಾಂತ ಲಿಮಿಟೆಡ್ ಸಹಯೋಗದಲ್ಲಿ ಪರಿಸರ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ನೂರಾರು ವಿದ್ಯಾರ್ಥಿಗಳು ಭಾಗಿಯಾಗಿದ್ದರು.

ಪರಿಸರ ನಮ್ಮ ಉಸಿರು, ನಮ್ಮ ಹಸಿರು. ಆಧುನಿಕತೆ ನೆಪದಲ್ಲಿ ಅಮೂಲ್ಯ ಗಿಡಮರಗಳನ್ನು ಕಡಿಯಲಾಗುತ್ತಿದ್ದು, ಜೀವಸಂಕುಲ ತೀವ್ರ ಸಂಕಷ್ಟಕ್ಕೆ ಸಿಲುಕಿದೆ. ಪರಿಸರವನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ರಾಜ್ಯಪ್ರಶಸ್ತಿ ಪುರಸ್ಕೃತ ಶಿಕ್ಷಕ ಕೆ.ಎನ್. ಮಹೇಶ್ ಹೇಳಿದರು.

ಪರಿಸರದ ಬಗ್ಗೆ ವಿಶೇಷ ಕಾಳಜಿ ಇಟ್ಟುಕೊಂಡ ವೇದಾಂತ ಸಂಸ್ಥೆಯು ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು. 'ನಮ್ಮ ಸಂಸ್ಥೆಯು ಪ್ರತಿವರ್ಷ ಸಾವಿರಾರು ಗಿಡಗಳನ್ನು ನೆಟ್ಟು ಪೋಷಿಸುತ್ತಿದೆ. ಸುತ್ತಮುತ್ತಲಿನ ಗ್ರಾಮಗಳ ಶಾಲೆಗಳ ವಿದ್ಯಾರ್ಥಿಗಳಿಗೆ ಸಾರ್ವಜನಿಕರಿಗೆ ನಿರಂತರವಾಗಿ ಹಲವಾರು ಕಾರ್ಯಕ್ರಮಗಳ ಮೂಲಕ ಪರಿಸರ ಜಾಗೃತಿ ಮೂಡಿಸಲಾಗುತ್ತಿದೆ' ಎಂದು ವೇದಾಂತ ಅಧಿಕಾರಿ ಶ್ರೀ ಅಭಿಷೇಕ್ ಶರ್ಮಾ ತಿಳಿಸಿದರು. ವಿದ್ಯಾರ್ಥಿಗಳು, ಶಿಕ್ಷಕರು, ವೇದಾಂತ ಸಂಸ್ಥೆಯ ಸಿಬ್ಬಂದಿ ಕೈಯಲ್ಲಿ ಪೊರಕೆ, ಗುದ್ದಲಿ, ಪುಟ್ಟಿ ಹಿಡಿದು ಇಡೀ ಪುಣ್ಯಕ್ಷೇತ್ರವನ್ನು ಸ್ವಚ್ಛಗೊಳಿಸಿ ಪರಿಸರ ಕಾಳಜಿ ಮೆರೆದರು. ಶಿಕ್ಷಕರಾದ ನಟರಾಜ್ ನಾಗರಾಜ್, ಸಂಸ್ಥೆಯ ಅಧಿಕಾರಿ ರಶ್ಮಿ ಹಾಗೂ ಸಿಬ್ಬಂದಿ ಮಂಜುನಾಥ್, ಅಭಿಷೇಕ್ ಹಾಜರಿದ್ದರು.

## ನ್ಯಾಯಾಧೀಶರ ಚಿತ್ರ ಬಳಸಿ ವಂಚನೆಗೆ ಯತ್ನ

• ಉದಯವಾಹಿನಿ, ಶಿವಮೊಗ್ಗ

ಸೈಬರ್ ವಂಚಕರು ಇಲ್ಲಿನ ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಜಿ.ಎ.ಮಂಜುನಾಥ ಅವರ ಹೆಸರು ಹಾಗೂ ಭಾವಚಿತ್ರ ಬಳಸಿಕೊಂಡು ನಕಲಿ ವಾಟ್ಸ್‌ಆಯಪ್ ಖಾತೆ ತೆರೆದು, ನ್ಯಾಯಾಲಯದ ಸಿಬ್ಬಂದಿ ಮತ್ತು ವಕೀಲರಿಂದ ಹಣ ಕೋರಿ ಸಂದೇಶ ಕಳುಹಿಸಿದ್ದಾರೆ. ಮೇ 29ರಂದು ಘಟನೆ ನಡೆದಿದೆ. ಅಂತರರಾಷ್ಟ್ರೀಯ ಕೋಡ್ ಹೊಂದಿರುವ ಮೊಬೈಲ್ ಸಂಖ್ಯೆಯ ಮೂಲಕ ಜಿ.ಎ. ಮಂಜುನಾಥ್ ಅವರ ಹೆಸರು ಹಾಗೂ ಫೋಟೊ ಬಳಸಿ ನಕಲಿ ವಾಟ್ಸ್‌ಆಯಪ್ ಪ್ರೊಫೈಲ್ ಸೃಷ್ಟಿಸಿದ್ದಾರೆ. ನ್ಯಾಯಾಲಯದ ಹೆಚ್ಚುವರಿ ಮುಖ್ಯ ಆಡಳಿತಾಧಿಕಾರಿ ಜಿ.ಎಂ.ಲಕ್ಷ್ಮಿ ನೀಡಿದ ದೂರಿನಂತೆ ಶಿವಮೊಗ್ಗ ಸಿಇಎನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

# ಮಳೆ ಆರಂಭವಾದರೂ ತಲೆ ಕೆಡಿಸಿಕೊಳ್ಳದ ಇಲಾಖೆ; ರಸ್ತೆ ಚರಂಡಿಗಿಲ್ಲ ಕ್ಲೀನ್ ಭಾಗ್ಯ

### ಮಳೆಗಾಲಕ್ಕೆ ಪೂರ್ವ ತಯಾರಿಯಾಗಿ ನಡೆಯಬೇಕಾಗಿದ್ದ ರಸ್ತೆಬದಿಯ ಚರಂಡಿಗಳಿಗೆ ಮಾತ್ರ ಇನ್ನೂ ಕ್ಲೀನ್ ಭಾಗ್ಯ ಸಿಕ್ಕಿಲ್ಲ..!

• ಉದಯವಾಹಿನಿ, ಪುತ್ತೂರು

ಈ ರಸ್ತೆ ಬಗ್ಗೆ ಯಾರೂ ಮಾತನಾಡುವ ಹಾಗಿಲ್ಲ. ಚತುಷ್ಪಥ ರಸ್ತೆಯಾಗಿ ಬಹುತೇಕ ಪರಿವರ್ತನೆಗೊಂಡಿರುವ ರಸ್ತೆಯಲ್ಲಿ ವಾಹನ ಸಂಚಾರ ಸುಲಲಿತ. ಪುತ್ತೂರು ತಾಲೂಕಿನ ಎರಡು ಪ್ರಮುಖ ನಗರಗಳನ್ನು ಸಂಪರ್ಕಿಸುವ ಈ ರಸ್ತೆಯಲ್ಲಿ ದಿನಂಪ್ರತಿ ನೂರಾರು ವಾಹನಗಳು ಸಂಚರಿಸುತ್ತಿವೆ.

> ಚತುಷ್ಪಥ ರಸ್ತೆ ನಿರ್ಮಾಣಕ್ಕಾಗಿ ಗುಡ್ಡಗಳನ್ನು ಲಂಬವಾಗಿ ಕಡಿದ ಪರಿಣಾಮ ಕೆಲ ಕಡೆಗಳಲ್ಲಿ ಗುಡ್ಡದ ಮಣ್ಣು ಜರಿದುಬಿದ್ದಿದೆ. ಅದನ್ನು ತೆರವು ಮಾಡಿಲ್ಲ. ಕೆಲವು ಭಾಗದಲ್ಲಿ ತಡೆಗೋಡೆ ನಿರ್ಮಿಸಿದ್ದರೂ ಅಲ್ಲಿಯೂ ಸಮರ್ಪಕ ಚರಂಡಿಗಳ ನಿರ್ಮಾಣವಾಗಿಲ್ಲ. ಈ ತಡೆಗೋಡೆಗಳ ಬಳಿ ನಿರ್ಮಿಸಿದ ಚಿಕ್ಕ ಚರಂಡಿಗಳಲ್ಲಿ ಮಳೆ ನೀರು ಹರಿಯಲು ಅನುಕೂಲಕರವಾಗಿಲ್ಲ. ಇದರಿಂದ ಮಳೆಗಾಲದಲ್ಲಿ ರಸ್ತೆಯಲ್ಲಿ ಕೃತಕ ನೆರೆ ಉಂಟಾಗುವ ಸಾಧ್ಯತೆ ಹೆಚ್ಚಾಗಿದೆ.


ಉದಯವಾಹಿನಿ ಚಿತ್ರ

ಪುತ್ತೂರು-ಉಪ್ಪಿನಂಗಡಿ ನುಡುವೆ ಸುಮಾರು 13 ಕಿಮೀ ರಸ್ತೆ. ಇದರಲ್ಲಿ ಒಂದೆರಡು ಕಡೆಯನ್ನು ಹೊರತು ಪಡಿಸಿದರೆ ಉಳಿದ ಭಾಗವೆಲ್ಲಾ ಚತುಷ್ಪಥ ರಸ್ತೆಯಾಗಿದೆ. ಉಪ್ಪಿನಂಗಡಿಯಿಂದ ಅಲ್ಪ ಸಮಯದಲ್ಲಿ ಪುತ್ತೂರು ತಾಲ್ಲೂಕು ಕೇಂದ್ರವನ್ನು ಸೇರಲು ಅನುಕೂಲಕರವಾದ ರಸ್ತೆಯಾಗಿ ಬದಲಾಗಿದೆ. ಸೇಡಿಯಾಪು ಬಳಿಯಲ್ಲಿ ಚತುಷ್ಪಥ ರಸ್ತೆಯ ಕಾಮಗಾರಿ ಕುಂಟುತ್ತಿದ್ದರೂ ನಡೆಯುತ್ತಿದೆ.

> ಮಳೆ ಆರಂಭಕ್ಕೆ ಮೊದಲು ರಸ್ತೆ ಬದಿಯ ಚರಂಡಿಗಳನ್ನು ಸ್ವಚ್ಛಗೊಳಿಸುವ ಕೆಲಸ ಇಲಾಖೆ ಮಾಡಬೇಕಿತ್ತು. ಆದರೆ ಮಾಡಿಲ್ಲ. ಈ ಚರಂಡಿಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯದಿದ್ದರೆ ಮಳೆನೀರು ರಸ್ತೆಗೆ ಬಂದು ಸಮಸ್ಯೆ ಉಂಟಾಗುತ್ತದೆ. ಇದರ ಜತೆಗೆ ರಸ್ತೆಯೂ ಹಾಳಾಗುತ್ತದೆ.
> -ರತ್ನಾಕರ ಪ್ರಭು ಸಾಮಾಜಿಕ ಸೇವಾ ಕಾರ್ಯಕರ್ತರು.

ನೆಕ್ಕಿಲಾಡಿಯಲ್ಲಿ ಹೆದ್ದಾರಿಯನ್ನು ಸಂಪರ್ಕಿಸುವ ಭಾಗದ ರಸ್ತೆ ಮಾತ್ರ ಸುಗಮ ಸಂಚಾರಕ್ಕೆ ಯೋಗ್ಯವಾಗಿಲ್ಲ ಎಂಬುವುದನ್ನು ಹೊರತು ಪಡಿಸಿದರೆ ಪುತ್ತೂರು-ಉಪ್ಪಿನಂಗಡಿ ರಸ್ತೆ ಪ್ರಸ್ತುತ ಕೊರತೆ ಕಾಣದ ರಸ್ತೆಯಾಗಿದೆ. ಆದರೆ ಈ ಮಳೆಗಾಲ ಕಳೆದ ವರ್ಷದ ಮಳೆಗಾಲದ ಸ್ಥಿತಿಯನ್ನು ಮರುಕಳಿಸುವ ಸಾಧ್ಯತೆಯೂ ಕಂಡುಬರುತ್ತಿದೆ. ಉಪ್ಪಿನಂಗಡಿಯಿಂದ ಪುತ್ತೂರು ತನಕದ ಈ ರಸ್ತೆಯ ಎರಡೂ ಬದಿಗಳಲ್ಲಿ ಮಳೆನೀರು ಹರಿದು ಹೋಗಲು ಸಾಧ್ಯವಿಲ್ಲದಂತೆ ಚರಂಡಿಗಳು ಮುಚ್ಚಿ ಹೋಗಿವೆ. ಮುಂಗಾರುಪೂರ್ವದ ಒಂದೆರಡು ಮಳೆಗೆ ಪುತ್ತೂರು-ಉಪ್ಪಿನಂಗಡಿ ರಸ್ತೆ ಬಹುತೇಕ ಕಡೆಗಳಲ್ಲಿ ತೋಡುಗಳಾಗಿ ಬದಲಾಗಿವೆ. ಚರಂಡಿಗಳಲ್ಲಿ ಮಳೆನೀರು ಹರಿಯದೆ ರಸ್ತೆಯಲ್ಲಿಯೇ ಹರಿಯುವಂತಾಗಿದೆ. ಇದೇ ಸ್ಥಿತಿ ಮುಂದುವರಿದರೆ ಮಳೆಗಾಲದಲ್ಲಿ ಚತುಷ್ಪಥ ರಸ್ತೆ ಸಂಪೂರ್ಣ ಹಾಳಾಗುವುದರಲ್ಲಿ ಯಾವುದೇ ಸಂದೇಹ ಇಲ್ಲ. ಜೂನ್ ತಿಂಗಳ ಎರಡನೇ ವಾರದಲ್ಲಿ ಮುಂಗಾರು ಮಳೆ ಆರಂಭವಾಗುವ ಸೂಚನೆ ನೀಡಿದೆ. ಈ ಹಿನ್ನಲೆಯಲ್ಲಿ ಮೇ ತಿಂಗಳ ಅಂತ್ಯದಲ್ಲಿಯಾದರೂ ಈ ರಸ್ತೆಗಳ ಚರಂಡಿಗಳನ್ನು ಸ್ವಚ್ಛಗೊಳಿಸುವ ಪ್ರಕ್ರಿಯೆ ಆರಂಭವಾಗಬೇಕಿತ್ತು.

ಮುಂಗಾರು ಮಳೆ ಆರಂಭಗೊಂಡರೆ ಮತ್ತೆ ಈ ಚರಂಡಿಗಳ ಸ್ವಚ್ಛತಾ ಕಾರ್ಯಕ್ಕೆ ದೊಡ್ಡ ತಡೆ ಉಂಟಾಗಲಿದೆ. ಇದರ ಜತೆಗೆ ಉತ್ತಮ ರಸ್ತೆಯೊಂದನ್ನು ನಿರ್ಲಕ್ಷ್ಯದಿಂದ ಹಾಳು ಮಾಡುವ ಅಪಖ್ಯಾತಿಯೂ ಲೋಕೋಪಯೋಗಿ ಇಲಾಖೆಗೆ ಸಿಗಲಿದೆ. ರಸ್ತೆ ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಬೇಕಾದರೆ ಚರಂಡಿಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂಬ ಮೂಲ ಅಂಶವನ್ನೇ ಇಲಾಖೆ ಮರೆತಂತಿದೆ.